

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ನೇರ ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 337, ಪುಟಗಳು: 8, ಶನಿವಾರ, 14 ಸೆಪ್ಟೆಂಬರ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

ಸುಭಾಷಿತ

ಕೋಟಿ ಧನವಿದ್ದರೂ ಪಟ್ಟಣವು ಗೋಳು,
ಕಾಸಿಲ್ಲದಿದ್ದರೂ ಸುಖ ಹಳ್ಳಿ ಬಾಳು.
। ಕುವೆಂಪು

## ಪಂಚಾಂಗ

(ಶನಿವಾರ 14, ಸೆಪ್ಟೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ,
- ವರ್ಷ ಋತು,
- ಭಾದ್ರಪದ ಮಾಸ, ಶುಕ್ಲ ಪಕ್ಷ,
- ಏಕಾದಶಿ, ಶನಿವಾರ,
- ಉತ್ತರಾಷಾಡ ನಕ್ಷತ್ರ
- ರಾಹುಕಾಲ - 09:15 ರಿಂದ 10:47
- ಗುಳಿಕಕಾಲ - 06:12 ರಿಂದ 07:43
- ಯಮಗಂಡಕಾಲ - 01:50 ರಿಂದ 03:22




ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines




### ಅಸಭ್ಯ ವರ್ತನೆ, ಟಿವಿಗಾಗಿ ಕಿರಿಕಿರಿ

## ದರ್ಶನ್‌ಗೆ ಜೈಲರ್ ವಾರ್ನಿಂಗ್

**ಬಳ್ಳಾರಿ:** ಪರಪ್ಪನ ಅಗ್ರಹಾರದಲ್ಲಿ ರಾಜಾತಿಥ್ಯ ಪಡೆದು ಬಳ್ಳಾರಿ ಜೈಲಿಗೆ ವರ್ಗಾವಣೆಯಾಗಿದ್ದ ಕಿಲ್ಲಿಂಗ್ ಸ್ಟಾರ್ ದರ್ಶನ್‌ಗೆ ಜೈಲಾಧಿಕಾರಿಗಳು ಕ್ಲಾಸ್ ಮಾಡಿದ್ದಾರೆ. ಅಹಂಕಾರ, ದರ್ಪ ತೋರಿಸಿ ಪದೇ ಪದೇ ಅಸಭ್ಯ ವರ್ತನೆ ಮಾಡುತ್ತಿರುವ ದರ್ಶನ್‌ಗೆ ಜೈಲಾಧಿಕಾರಿಗಳು ಪಾಠ ಮಾಡಿದ್ದಾರೆ ಎಂದು ಮೂಲಗಳಿಂದ ತಿಳಿದು ಬಂದಿದೆ. ಜೈಲಿನಲ್ಲಿ ಇರುವಷ್ಟು ದಿನ ಜೈಲು ನಿಯಮಗಳನ್ನು ಪಾಲನೆ ಮಾಡಬೇಕು. ಕೈದಿಗಳಿಗೆ ಶಿಕ್ಷೆ ಜೊತೆಗೆ ನಡವಳಿಕೆ ಸರಿಯಾಗುತ್ತದೆ ಎಂದು ಕೋರ್ಟ್ ಜೈಲಿಗೆ ಕಳುಹಿಸುತ್ತದೆ. ಆದರೆ ನೀವು ಜೈಲಿನ ಶಿಸ್ತನ್ನು ಉಲ್ಲಂಘನೆ ಮಾಡುತ್ತಿದ್ದೀರಿ ಎಂದು ಖಾರವಾಗಿ ಹೇಳಿದ್ದಾರೆ. ಪದೇ ಪದೇ ಸೌಲಭ್ಯಗಳಿಗಾಗಿ ಸಿಬ್ಬಂದಿಗೆ ಕಿರಿಕಿರಿ ಮಾಡುತ್ತಿದ್ದೀರಿ. ನಾವು ಕಾನೂನು ಪ್ರಕಾರ ಏನು ಸಾಧ್ಯ ಅಷ್ಟು ಮಾತ್ರ ಕೊಡುತ್ತೇವೆ. ಹೆಚ್ಚಿನದು ಬೇಕು ಅಂದರೆ ನ್ಯಾಯಾಲಯಕ್ಕೆ ಅರ್ಜಿ ಹಾಕಿ ಎಂದು ಜೈಲರ್ ಎಚ್ಚರಿಕೆ ನೀಡಿದ್ದಾರೆ ಎಂಬ ವಿಚಾರವನ್ನು ಮೂಲಗಳು ತಿಳಿಸಿವೆ.

## ಗಲಭೆ ತಡೆಯಲು ಇಲಾಖೆಗಳು ವಿಫಲ



**ಬೆಂಗಳೂರು:** ನಾಗಮಂಗಲದಲ್ಲಿ ಗಣೇಶ ವಿಸರ್ಜನೆ ವೇಳೆ ನಡೆದ ಕೋಮು ಗಲಭೆಗೆ ಪೊಲೀಸ್ ಮತ್ತು ಗುಪ್ತಚರ ಇಲಾಖೆ ವೈಫಲ್ಯವೇ ಕಾರಣ ಎಂಬ ಮಾತುಗಳು ಈಗ ಕೇಳಿ ಬರುತ್ತಿವೆ. ಹೌದು. ಕಳೆದ ವರ್ಷವೇ ಗಣೇಶೋತ್ಸವ ಮೆರವಣಿಗೆ ಸಂದರ್ಭದಲ್ಲಿ ಗಲಾಟೆ ನಡೆದಿದ್ದ ಕಾರಣ ಪೊಲೀಸರು ಮುನ್ನೆಚ್ಚರಿಕೆ ವಹಿಸಬೇಕಿತ್ತು. ಆದರೆ ಮುನ್ನೆಚ್ಚರಿಕೆ ವಹಿಸದ ಕಾರಣ ಈ ಗಲಭೆ ನಡೆದಿದೆ ಎಂದು ಮೂಲಗಳಿಂದ ತಿಳಿದು ಬಂದಿದೆ. ಪುಟ 2

## ಸಂಕ್ಷಿಪ್ತ ಸುದ್ದಿ

### ಕೋರ್ಟ್‌ನಲ್ಲಿ ಕೆಲಸ ಕೊಡಿಸೋದಾಗಿ ವಂಚನೆ



**ಕೊಪ್ಪಳ:** ನ್ಯಾಯಾಲಯದಲ್ಲಿ ಕೆಲಸ ಕೊಡಿಸೋದಾಗಿ ಹಲವಾರು ಜನರಿಗೆ ಲಕ್ಷಾಂತರ ರೂ. ಹಣ ವಂಚಿಸಿರುವ ಪ್ರಕರಣ ಕೊಪ್ಪಳದಲ್ಲಿ ನಡೆದಿದೆ. ಸಿದ್ದಲಿಂಗಯ್ಯ ಹಿರೇಮಠ ಎಂಬವನ ವಿರುದ್ಧ ವಂಚನೆ ಆರೋಪ ಮಾಡಲಾಗಿದೆ. ನ್ಯಾಯಾಲಯದಲ್ಲಿ ಪ್ರೋಸೆಸ್ ಸರ್ವರ್, ಜವಾನ ಹುದ್ದೆ ಖಾಲಿ ಇದೆ ಎಂದು ಜನರಿಗೆ ನಂಬಿಸುತ್ತಿದ್ದ. ಅಲ್ಲದೇ ಉದ್ಯೋಗ ಕೊಡಿಸುತ್ತೇನೆ ಎಂದು ಪ್ರತಿಯೊಬ್ಬರ ಬಳಿ 7 ಲಕ್ಷ ರೂ. ಹಣ ವಸೂಲಿ ಮಾಡಿದ್ದಾನೆ ಎಂದು ಆರೋಪಿಸಲಾಗಿದೆ. ಪುಟ 2

### ಚುನಾವಣೆ ರಾಜಕೀಯದಿಂದ ಹಿಂದೆ ಸರಿದ ಸಚಿವ ರಾಜಣ್ಣ

**ತುಮಕೂರು:** ಚುನಾವಣಾ ರಾಜಕಾರಣದಿಂದ ಹಿಂದೆ ಸರಿಯುತ್ತಿರುವುದಾಗಿ ಸಹಕಾರ ಸಚಿವ ಕೆ.ಎನ್.ರಾಜಣ್ಣ ಇಲ್ಲಿ ಶನಿವಾರ ಪ್ರಕಟಿಸಿದರು. 'ಮುಂದಿನ ದಿನಗಳಲ್ಲಿ ವಿಧಾನಸಭೆ ಸೇರಿದಂತೆ ಯಾವುದೇ ಚುನಾವಣೆಗೆ ಸ್ಪರ್ಧಿಸುವುದಿಲ್ಲ. ಆದರೆ ಸಕ್ರಿಯ ರಾಜಕೀಯದಲ್ಲಿ ಇರುತ್ತೇನೆ. ಬೇಕಾದವರನ್ನು ಗೆಲ್ಲಿಸುವುದು, ಬೇಡದವರನ್ನು ಸೋಲಿಸುವ ಕೆಲಸ ಮಾಡುತ್ತೇನೆ' ಎಂದು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. 'ನಾನು ಪ್ರತಿನಿಧಿಸುವ ಮಧುಗಿರಿಯನ್ನು ಜಿಲ್ಲಾ ಕೇಂದ್ರ ಮಾಡುವ ಪ್ರಯತ್ನ ಮುಂದುವರಿಸುತ್ತೇನೆ. ನನ್ನ ಅಧಿಕಾರ ಮುಗಿಯುವುದರ ಒಳಗೆ ಜಿಲ್ಲಾ ಕೇಂದ್ರ ಮಾಡಿಸುತ್ತೇನೆ. ಜತೆಗೆ ಇತರೆ ಅಭಿವೃದ್ಧಿ ಕೆಲಸಗಳನ್ನು ಮಾಡಿಸುತ್ತೇನೆ. ಮುಂದಿನ ಚುನಾವಣೆ ದೃಷ್ಟಿಯನ್ನು ಇಟ್ಟುಕೊಂಡು ಈ ಕೆಲಸ ಮಾಡಿಸುತ್ತಿಲ್ಲ. ಮುಂದಿನ ಬಾರಿ ಚುನಾವಣೆಗೆ ಸ್ಪರ್ಧಿಸುವುದಿಲ್ಲ' ಎಂದು ಸ್ಪಷ್ಟಪಡಿಸಿದರು.



### ಯತ್ನಾಳ್ ಗುಂಪಿಗೆ ಮುತ್ತಿಕೊಂಡ ಮುನಿಸುದಾರರು!

# ಜಂಟಿಯಾದ ಯತ್ನಾಳ್, ಜಾರಕಿಹೊಳಿ!

**ಬೆಂಗಳೂರು:** ಒಳ ಬೇಗುದಿಯಲ್ಲಿ ಬೇಯುತ್ತಿರುವ ಬಿಜೆಪಿಗೆ ಇದೀಗ ಹೊಸ ತಲೆಬಿಸಿ ಎದುರಾಗಿದೆ. ಬಿ ವೈ ವಿಜಯೇಂದ್ರರನ್ನು ರಾಜ್ಯಾಧ್ಯಕ್ಷರನ್ನಾಗಿ ಮಾಡಿದ ದಿನದಿಂದಲೇ ಪಕ್ಷದ ನಿರ್ಧಾರದ ವಿರುದ್ಧವೇ ದನಿ ಎತ್ತಿದ್ದವರು ಕೇಂದ್ರದ ಮಾಜಿ ಸಚಿವ, ಹಿರಿಯ ಶಾಸಕ ಬಸನಗೌಡ ಪಾಟೀಲ ಯತ್ನಾಳ್. ಅಂದಿನಿಂದಲೂ ಇಂದಿನವರೆಗೂ ಅದೇ ಯತ್ನಾಳ್ ಇದೀಗ ರಾಜ್ಯ ಘಟಕಕ್ಕೂ, ಹೈಕಮಾಂಡ್‌ಗೂ ಒಂದೇ ಟೆನ್ಷನ್ ತಂದಿಟ್ಟಿದ್ದಾರೆ. ಯತ್ನಾಳ್‌ರನ್ನು ಕರೆಸಿ ಎಷ್ಟು ಬಾರಿ ಮಾತನಾಡಿದರೂ ಯಡಿಯೂರಪ್ಪ, ವಿಜಯೇಂದ್ರ, ಹೈಕಮಾಂಡ್ ನಾಯಕರ ವಿರುದ್ಧ ಪದೇ ಪದೇ ಒಂಟಿಯಾಗೇ ದನಿ ಎತ್ತಿದ್ದರು.

ಯತ್ನಾಳ್ ಗುಂಪಿನಲ್ಲಿ ರಮೇಶ್ ಜಾರಕಿಹೊಳಿ

ಮೊದಲಿಗೆಲ್ಲಾ ಒಂಟಿಯಾಗೇ ಹೋರಾಟ ಮಾಡ್ತಿದ್ದ ಯತ್ನಾಳ್‌ಗೆ ಇದೀಗ ಜಂಟಿಯಾಗಿದ್ದಾರೆ ಜಾರಕಿಹೊಳಿ. ಸಿಡಿ ಕೇಸ್‌ನಲ್ಲಿ ಸಂಪೂರ್ಣ ಕ್ಲೀನ್‌ಚಿಟ್ ಇಲ್ಲದೆ ಪಕ್ಷದಲ್ಲಿ ಮೂಲೆಗುಂಪಾಗಿರುವ ರಮೇಶ್ ಜಾರಕಿಹೊಳಿ ಇದೀಗ ಯತ್ನಾಳ್ ಗುಂಪಿಗೆ ಸೇರಿಕೊಂಡಿದ್ದಾರೆ. ಬೆಳಗಾವಿಯಲ್ಲಿ ಸಭೆ, ಬೆಂಗಳೂರಿನ ಸಾಲು ಸಾಲು ಸಭೆಗಳು, ಇದೀಗ ರಾಜ್ಯಪಾಲರಿಗೆ ರಾಜ್ಯ ಸರ್ಕಾರದ ವಿರುದ್ಧ ಮನವಿ ನೀಡುವ ಸಮಯದಲ್ಲೂ ಯತ್ನಾಳ್ ಗುಂಪಿನಲ್ಲಿದ್ದಾರೆ ರಮೇಶ್ ಜಾರಕಿಹೊಳಿ. ಪುಟ 2



### ರಾಜ್ಯ ಸರ್ಕಾರದ ವಿರುದ್ಧ ರಾಜ್ಯಪಾಲರಿಗೆ ದೂರು

ವಿಧಾನಸಭೆ ಚುನಾವಣೆಯ ಸೋಲಿನಲ್ಲಿ ಯಡಿಯೂರಪ್ಪ ಸಹಕಾರ ಕೊಡಲಿಲ್ಲ, ವಿಜಯೇಂದ್ರ, ಒಳ ಒಪ್ಪಂದದಿಂದ ಸೋತಿದ್ದೇವೆ ಎಂಬೆಲ್ಲಾ ಕಾರಣಕ್ಕೂ ಇದೀಗ ಅತೃಪ್ತರ ಟೀಂ ಸೇರಿಕೊಳ್ತಿದ್ದಾರೆ ಹೊಸಬರು. ಶಿವಮೊಗ್ಗದವರೇ ಆದ ಕುಮಾರ್ ಬಂಗಾರಪ್ಪ ಮೊದಲಿಂದಲೂ ಅದೇ ಗುಂಪಿನಲ್ಲಿದ್ದು, ಮೈಸೂರು-ಕೊಡಗು ಮಾಜಿ ಪ್ರತಾಪ್ ಸಿಂಹ ಕೂಡ ದನಿ ಎತ್ತೋ ಟೀಂಗೆ ಧ್ವನಿಗೂಡಿಸಿದ್ದಾರೆ. ರಾಜ್ಯ ಸರ್ಕಾರದ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿದವರ ಸಂಖ್ಯೆ 15 ಮೀರಿದೆ. ಆ ಪೈಕಿ ರಾಯಚೂರಿನ ಮಾಜಿ ಸಂಸದ ಬಿ.ವಿ.ನಾಯಕ್, ಆಪರೇಷನ್ ಕಮಲದಿಂದ ಬಿಜೆಪಿ ಬಂದು ಈಗ ಸೋತಿರುವ ಮಾಜಿ ಶಾಸಕ ಶ್ರೀಮಂತ ಪಾಟೀಲ್ ಕೂಡ ಇದ್ದರು. ದಿನೇ ದಿನೇ ಅತೃಪ್ತರ ಟೀಂ ಹೆಚ್ಚಾಗ್ತಿದೆ, ಒಂಟಿಯಾಗಿದ್ದ ಯತ್ನಾಳ್‌ಗೆ ಜಂಟಿಯಾಗ್ತಿದ್ದಾರೆ. ಪ್ಲಾನ್ ಮಾಡಿಕೊಳ್ತಿರೋದೆಲ್ಲವೂ ಅಂದುಕೊಂಡಂತೆಯೇ ಆದರೆ, ಪರ್ಯಾಯ ಪಾದಯಾತ್ರೆಯೂ ನಡೆಯಬಹುದು. ಹಾಗೇನಾದರೂ ಆದ್ರೆ, ಬಿಜೆಪಿಯೊಳಗೊಂದು ಪರ್ಯಾಯ ಬಿಜೆಪಿ ಸೃಷ್ಟಿಯಾಗುತ್ತೆ. ಅಷ್ಟರೊಳಗೆ ಹೈಕಮಾಂಡ್ ಏನ್ ಮಾಡುತ್ತೆ ಅನ್ನೋ ಸಸ್ಪೆನ್ಸ್ ಇದೆ.

## ಮತ್ತೆ ಮುಜುಗರ ಭೀತಿ

» ಮಾಧ್ಯಮದವರನ್ನು ಹೊರಗಿಟ್ಟು ಸಭೆಗೆ ಪ್ಲ್ಯಾನ್

**ಮಂಡ್ಯ:** ನಾಗಮಂಗಲದಲ್ಲಿ ಇಂದು ಶಾಂತಿ ಸಭೆ ನಡೆಸಲು ಜಿಲ್ಲಾಡಳಿತ ಸಿದ್ಧತೆ ನಡೆಸಿದೆ. ಈ ಸಭೆಗೆ ಮಾಧ್ಯಮಗಳನ್ನ ನಿರ್ಬಂಧಿಸಲು ಪ್ಲ್ಯಾನ್ ಮಾಡಲಾಗಿದೆ. ಈ ಮೂಲಕ ಒಲೈಕೆ ರಾಜಕಾರಣಕ್ಕೆ ಸರ್ಕಾರ ಮುಂದಾಗಿದ್ಯಾ ಎಂಬ ಪ್ರಶ್ನೆ ಎದ್ದಿದೆ.

ಜಿಲ್ಲಾಡಳಿತ, ಉಸ್ತುವಾರಿ ಸಚಿವರ ಈ ನಡೆ ಮತ್ತೆ ಅನುಮಾನಕ್ಕೆ ಕಾರಣವಾಗಿದೆ. ಸಭೆಯಲ್ಲಿ ವಸ್ತು ಸ್ಥಿತಿ ಬಯಲಾಗಬಹುದು ಎಂಬ ಭಯಕ್ಕೆ ಮಾಧ್ಯಮಗಳಿಗೆ ನಿರ್ಬಂಧ ಹೇರಲು ಜಿಲ್ಲಾಡಳಿತ ಮುಂದಾಗಿದ್ಯಾ ಎಂಬ ಪ್ರಶ್ನೆ ಎದ್ದಿದೆ. ಪುಟ 2



### ಗುತ್ತಿಗೆದಾರನಿಗೆ ಬೆದರಿಕೆ. 30 ಲಕ್ಷ ರೂಪಾಯಿ ಲಂಚಕ್ಕೆ ಬೇಡಿಕೆ?

## ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಎಫ್‌ಐಆರ್

**ಬೆಂಗಳೂರು:** ಘನತ್ಯಾಜ್ಯ ವಿಲೇವಾರಿ ಗುತ್ತಿಗೆ ನೀಡಲು 30 ಲಕ್ಷಕ್ಕೆ ಬೇಡಿಕೆ ಇಟ್ಟು ಬೆದರಿಕೆ ಹಾಕಿದ್ದಾರೆ ಎಂಬ ಆರೋಪದ ಅಡಿ ರಾಜರಾಜೇಶ್ವರಿ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ಸೇರಿದಂತೆ ನಾಲ್ವರ ವಿರುದ್ಧ ವೈಯ್ಯಾಲಿಕಾವಲ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಬಿಬಿಎಂಪಿ ಗುತ್ತಿಗೆದಾರ ಚೆಲುವರಾಜ್ ನೀಡಿದ ದೂರು ಆಧರಿಸಿ ಮುನಿರತ್ನ, ಸರ್ಕಾರಿ ಅಧಿಕಾರಿ ವಿಜಯ್ ಕುಮಾರ್, ಕಾರ್ಯದರ್ಶಿ ಅಭಿಷೇಕ್ ಹಾಗೂ ಶಾಸಕರ ಆಪ್ತ ವಸಂತಕುಮಾರ್ ವಿರುದ್ಧ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಜಾತಿ ನಿಂದನೆ ಆರೋಪದ ಅಡಿ ಇದೇ ಠಾಣೆಯಲ್ಲಿ ಶಾಸಕರ ವಿರುದ್ಧ ಮತ್ತೊಂದು ಎಫ್‌ಐಆರ್ ದಾಖಲಾಗಿದೆ. ವೇಲುನಾಯಕ್ ಎಂಬುವವರು ನೀಡಿದ ದೂರು ಆಧರಿಸಿ ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.



### ರೇಣುಕಾಸ್ವಾಮಿಗೆ ಆದ ಗತಿ ನಿನಗೂ ಆಗುತ್ತೆ!

ಬೆಂಗಳೂರು: ಮುನಿರತ್ನ ಮತ್ತು ಬಿಬಿಎಂಪಿ ಗುತ್ತಿಗೆದಾರ ಚಲುವರಾಜು ಎಂಬುವವರ ನಡುವೆ ನಡೆದ ಸಂಭಾಷಣೆ ಎನ್ನಲಾದ ಆಡಿಯೋ ಒಂದು ವೈರಲ್ ಆಗಿದೆ. ಇದರ ಬೆನ್ನಲ್ಲೇ ಮುನಿರತ್ನ ವಿರುದ್ಧ ಕೊಲೆ ಬೆದರಿಕೆ, ಜಾತಿ ನಿಂದನೆ ಆರೋಪದಡಿ ಗುತ್ತಿಗೆದಾರ ಚಲುವರಾಜು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದಗೆ ದೂರು ನೀಡಿ ಬಳಿಕ ಶಾಸಕ ಮುನಿರತ್ನ ವಿರುದ್ಧ ಕ್ರಮ ಕೈಗೊಳ್ಳಬೇಕು ಮತ್ತು ತಮಗೆ ರಕ್ಷಣೆ ನೀಡಬೇಕೆಂದು ಆಗ್ರಹಿಸಿದ್ದಾರೆ. ಪೊಲೀಸ್ ಆಯುಕ್ತರಿಗೆ ದೂರು ನೀಡಿದ ಬಳಿಕ ಚಲುವರಾಜು ಅವರು ಮಾಧ್ಯಮದವರೊಂದಿಗೆ ಮಾತನಾಡಿದ್ದು, ಶಾಸಕ ಮುನಿರತ್ನ ನನ್ನನ್ನು ಕರೆದು ಬೆದರಿಕೆ ಹಾಕಿ 20 ಲಕ್ಷ ಹಣ ಕೇಳಿದ್ದರು. ನಾನು ಆತ್ಮಹತ್ಯೆಗೆ ಯತ್ನಿಸಿದ್ದೆ, ಕುಟುಂಬದವರಿಗಾಗಿ ಉಳಿದುಕೊಂಡಿದ್ದೇನೆ. ರೇಣುಕಾಸ್ವಾಮಿಗೆ ಆದ ಗತಿಯೇ ನಿನಗೂ ಆಗುತ್ತೆ ನೋಡು. ರೇಣುಕಾಸ್ವಾಮಿಗೆ ಗತಿ ಕಾಣಿಸಿದ್ದು ನಮ್ಮ ಕಡೆಯವರೇ ಎಂದು ಆವಾಜ್ ಹಾಕಿದ್ದಾರೆ ಎಂದು ಆರೋಪಿಸಿದ್ದಾರೆ. ಪುಟ 2

### ಬಾರಾಮುಲ್ಲಾದಲ್ಲಿ ಎನ್ ಕೌಂಟರ್

## ಮೂವರು ಉಗ್ರರ ಹತ್ಯೆ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಬಾರಾಮುಲ್ಲಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳೊಂದಿಗೆ ಕಳೆದ ರಾತ್ರಿಯಿಂದ ನಡೆಯುತ್ತಿರುವ ಎನ್ ಕೌಂಟರ್ ನಲ್ಲಿ ಇಂದು ಶನಿವಾರ ನಸುಕಿನ ಜಾವ ಮೂವರು ಉಗ್ರರನ್ನು ಭದ್ರತಾ ಪಡೆ ಯೋಧರು ಹೊಡೆದುರುಳಿಸಿದ್ದಾರೆ. ನಿನ್ನೆ ಶುಕ್ರವಾರ ತಡರಾತ್ರಿ ಉತ್ತರ ಕಾಶ್ಮೀರ ಜಿಲ್ಲೆಯ ಪಟ್ಟಾನ್ ಪ್ರದೇಶದ ಚಕ್ ಟಪ್ಪರ್ ಕ್ರೀರಿಯಲ್ಲಿ ಪ್ರದೇಶಗಳನ್ನು ಸುತ್ತುವರಿದ ಭದ್ರತಾ ಪಡೆ ಯೋಧರು ಕಾರ್ಯಾಚರಣೆಯನ್ನು ಪ್ರಾರಂಭಿಸಿದರು. ಪುಟ 2



### ವಾಲ್ಮೀಕಿ ನಿಗಮ ಹಗರಣ

## ಬಿಜೆಪಿ ಹೊಸ ಅಸ್ತ್ರ ಪ್ರಯೋಗ



**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಹಗರಣದ ಬಗ್ಗೆ ಜಾರಿ ನಿರ್ದೇಶನಾಲಯ ಎಳೆಎಳೆಯಾಗಿ ಬಿಚ್ಚಿಟ್ಟಿದೆ. ನಿಗಮದ 21 ಕೋಟಿ ರೂ. ಹಣವನ್ನು ಬಳ್ಳಾರಿ ಲೋಕಸಭೆ ಚುನಾವಣೆಗೆ ಬಳಸಿಕೊಳ್ಳಲಾಗಿದೆ ಎಂದು ಇಡಿ ನ್ಯಾಯಾಲಯಕ್ಕೆ ಸಲ್ಲಿಸಿದ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ವಿಚಾರ ಇಡಿ ಬಯಲು ಮಾಡುತ್ತಿದ್ದಂತೆ ಕರ್ನಾಟಕ ಬಿಜೆಪಿ ಹೊಸ ಅಸ್ತ್ರ ಪ್ರಯೋಗಿಸಲು ಮುಂದಾಗಿದೆ. ಮಾಜಿ ಸಚಿವ ಬಿ. ನಾಗೇಂದ್ರ ತಲೆದಂಡ ಬಳಿಕ ರಾಜ್ಯ ಬಿಜೆಪಿ ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದ ಇ. ತುಕಾರಂ ಅವರನ್ನು ಟಾರ್ಗೆಟ್ ಮಾಡಿದೆ. ಮಾಜಿ ಸಚಿವ ಶ್ರೀರಾಮುಲು ಸಂಸದ ತುಕಾರಾಂ ವಿರುದ್ಧ ಕೋರ್ಟ್‌ನಲ್ಲಿ ದಾವೆ ಹೂಡಲು ಮುಂದಾಗಿದ್ದಾರೆ. ಬಳ್ಳಾರಿ ಸಂಸದ ಸ್ಥಾನವನ್ನು ಅನರ್ಹಗೊಳಿಸುವಂತೆ ದಾವೆ ಹೂಡಲು ಸಿದ್ದರಾಗಿದ್ದಾರೆ ಎಂದು ಮೂಲಗಳಿಂದ ಮಾಹಿತಿ ದೊರೆತಿದೆ. ಪುಟ 2

## ವಾಟರ್‌ಮ್ಯಾನ್ ಹತ್ಯೆ

**ಹಾಸನ:** ಪಾನಮತ್ತನಾಗಿ ಬಂದ ರೌಡಿಶೀಟರ್ ವಾಟರ್‌ಮ್ಯಾನ್‌ಗೆ ಚಾಕುವಿನಿಂದ ಇರಿದು ಬರ್ಬರವಾಗಿ ಹತ್ಯೆಗೈದ ಘಟನೆ ಚೀಕನಹಳ್ಳಿ ಗ್ರಾಮದಲ್ಲಿ ನಡೆದಿದೆ. ಗಣೇಶ್ (27) ಕೊಲೆಯಾದ ವ್ಯಕ್ತಿ ಎಂದು ತಿಳಿದು ಬಂದಿದೆ. ಚೀಕನಹಳ್ಳಿ ಗ್ರಾಮದಲ್ಲಿ ವಾಟರ್‌ಮ್ಯಾನ್ ಆಗಿದ್ದ ಗಣೇಶ್ ಶುಕ್ರವಾರ ರಾತ್ರಿ ಗ್ರಾಮದ ಆಟೋ ನಿಲ್ದಾಣದ ಬಳಿ ನಿಂತಿದ್ದ. ಈ ವೇಳೆ ಕಂಠ ಪೂರ್ತಿ ಕುಡಿದು ಸ್ಥಳಕ್ಕೆ ಬಂದಿದ್ದ ರೌಡಿಶೀಟರ್ ಮಧು ಕ್ಷುಲ್ಲಕ ಕಾರಣಕ್ಕೆ ಗಣೇಶ್ ಜೊತೆ ಜಗಳ ತೆಗೆದಿದ್ದಾನೆ. ಬಳಿಕ ಮಾತಿಗೆ ಮಾತು ಬೆಳೆದು ಜಗಳ ವಿಕೋಪಕ್ಕೆ ತಿರುಗಿದೆ. ಬಳಿಕ ಆರೋಪಿ ಚಾಕು ಇರಿದಿದ್ದಾನೆ. ತೀವ್ರ ರಕ್ತಸ್ರಾವದಿಂದ ಗಣೇಶ್ ಸ್ಥಳದಲ್ಲೇ ಮೃತಪಟ್ಟಿದ್ದಾನೆ.



ಬೆಂಗಳೂರಿನಲ್ಲಿ ವಾಸವಾಗಿದ್ದ ರೌಡಿಶೀಟರ್ ಮಧು ಗೌರಿ-ಗಣೇಶ ಹಬ್ಬಕ್ಕೆ ಗ್ರಾಮಕ್ಕೆ ಬಂದಿದ್ದ. ಹತ್ಯೆ ಬಳಿಕ ಆರೋಪಿ ಪರಾರಿಯಾಗಿದ್ದಾನೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಜಿಲ್ಲಾಸ್ಪತ್ರೆ ಶವಾಗಾರಕ್ಕೆ ರವಾನಿಸಲಾಗಿದೆ. ಅರೇಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

### ಪತಿಯನ್ನು ಗುಂಡಿಟ್ಟು ಕೊಲ್ಲುವುದಾಗಿ ಬೆದರಿಸಿ ಜಿಪಂ ಮಾಜಿ ಸದಸ್ಯೆಗೆ ಲೈಂಗಿಕ ದೌರ್ಜನ್ಯ

## ಪ್ರಜ್ವಲ್ ಕಾಮಕಾಂಡ

**ಬೆಂಗಳೂರು:** ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ, ಅತ್ಯಾಚಾರ ಎಸಗಿದ ಆರೋಪದಲ್ಲಿ ಬಂಧನವಾಗಿರುವ ಹಾಸನ ಲೋಕಸಭಾ ಕ್ಷೇತ್ರದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಮೂರನೇ ಚಾರ್ಜ್‌ಶೀಟ್ ಸಲ್ಲಿಕೆಯಾಗಿದೆ. ಜಿಲ್ಲಾ ಪಂಚಾಯತ್ ಮಾಜಿ ಸದಸ್ಯೆ ಮೇಲಿನ ಅತ್ಯಾಚಾರ ಪ್ರಕರಣ ಸಂಬಂಧ ತನಿಖೆ ಪೂರ್ಣಗೊಳಿಸಿ ಎಸ್‌ಐಟಿ 120 ಸಾಕ್ಷಿಗಳ 1691 ಪುಟಗಳ ಚಾರ್ಜ್‌ಶೀಟ್ ಅನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಿದೆ. ಎಸ್‌ಐಟಿ ಚಾರ್ಜ್‌ಶೀಟ್‌ನಲ್ಲಿ ಪ್ರಜ್ವಲ್ ರೇವಣ್ಣ ಕಾಮಕಾಂಡ ಬಯಲಾಗಿದೆ.

ಪತಿಯನ್ನು ಗುಂಡಿಟ್ಟು ಕೊಲ್ಲುವುದಾಗಿ ಬೆದರಿಸಿ ಜೆಡಿಎಸ್ ಪಕ್ಷದ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯೆ ಮೇಲೆ ಪ್ರಜ್ವಲ್ ರೇವಣ್ಣ ಅತ್ಯಾಚಾರ ಎಸಗಿರುವುದು ಎಸ್‌ಐಟಿ ತನಿಖೆಯಲ್ಲಿ ಸಾಬೀತಾಗಿದೆ. ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ ಅವರಿಗೆ ಸರ್ಕಾರ ಹಂಚಿಕೆ ಮಾಡಿದ್ದ ಹಾಸನದ ರೇಸ್ ಕೋರ್ಸ್ ರಸ್ತೆಯಲ್ಲಿರುವ ಅತಿಥಿ ಗೃಹದಲ್ಲಿ ಪ್ರಜ್ವಲ್ ರೇವಣ್ಣ ಅತ್ಯಾಚಾರ ಎಸಗಿದ್ದಾರೆ.



### ಇತಿಹಾಸದಲ್ಲಿ ಮೊದಲ ಬಾರಿಗೆ ಮೂರು ಪಕ್ಷದ ಮೈತ್ರಿ | ಇಬ್ಬರೂ ಅವಿರೋಧವಾಗಿ ಆಯ್ಕೆ

# ಹುಳಿಯಾರು ಪಪಂಗೆ ರತ್ನಮ್ಮ, ಕಾವ್ಯರಾಣಿ ಸಾರಥಿ

**ಹುಳಿಯಾರು:** ಹುಳಿಯಾರು ಪಂಚಾಯ್ತಿ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಮೂರು ಪಕ್ಷದ ಕೆಲ ಸದಸ್ಯರು ಮೈತ್ರಿ ಮಾಡಿಕೊಂಡು ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಅವಿರೋಧವಾಗಿ ಆಯ್ಕೆ ಮಾಡಿದ ಘಟನೆ ಶುಕ್ರವಾರ ನಡೆಯಿತು. ನೂತನ ಅಧ್ಯಕ್ಷೆಯಾಗಿ ಬಿಜೆಪಿಯ ರತ್ನಮ್ಮ, ಉಪಾಧ್ಯಕ್ಷೆಯಾಗಿ ಜೆಡಿಎಸ್‌ನ ಕಾವ್ಯರಾಣಿ ಆಯ್ಕೆಯಾದರು.

ಹುಳಿಯಾರು ಪಂಚಾಯ್ತಿ ಚುನಾವಣೆ ಎಂದಾಕ್ಷಣ ಎರಡು ಬಣಗಳ ನಡುವೆ ಜಿದ್ದಾಜಿದ್ದಿ ಸ್ಪರ್ಧೆ ಏರ್ಪಡುತ್ತದೆ. ಪ್ರವಾಸ ಹೋದವರಲ್ಲೇ ಕೆಲವರು ಚುನಾವಣೆಯಲ್ಲಿ ಅಡ್ಡಮತದಾನ ಮಾಡಿದ, ಚುನಾವಣೆಯಲ್ಲಿ ಗೈರಾಗಿ ಗೆಲುವಿನ ನಿರೀಕ್ಷೆಯನ್ನು ಉಲ್ಟಾಪಲ್ಟಾ ಮಾಡಿಕೊಟ್ಟ ನಿದರ್ಶನ ಇದೆ. ಹಾಗಾಗಿಯೇ ಈಗಿನ ಚುನಾವಣೆಯೂ ಸಹ ತೀವ್ರ ಕುತೂಹಲ ಸೃಷ್ಟಿಸಿತ್ತು. 16 ಚುನಾಯಿತ ಸದಸ್ಯರ ಪೈಕಿ ಮೂರು ಪಕ್ಷಗಳ 8 ಸದಸ್ಯರು ಮೈತ್ರಿ ಮಾಡಿಕೊಂಡು ಪ್ರವಾಸಕ್ಕೆ ಹೋಗಿದ್ದರಾದರೂ 8 ಮಂದಿ ಪ್ರವಾಸ ಹೋಗದೆ ಊರಿನಲ್ಲೇ ಉಳಿದಿದ್ದರು. ಇದು ಯಾವಾಗ ಏನು ಬೇಕಾದರೂ ಆಗಬಹುದೆಂಬ ನಿರೀಕ್ಷೆ ಸಾರ್ವಜನಿಕ ವಲಯದಲ್ಲಿ ಉಂಟುಮಾಡಿತ್ತು. ಆದರೆ ಇಬ್ಬರೂ ಅವಿರೋಧವಾಗಿ ಆಯ್ಕೆಯಾಗುವ ಮೂಲಕ ಈ ಚುನಾವಣೆ ಹೊಸ ಮೈತ್ರಿ ಧರ್ಮಕ್ಕೆ ಸಾಕ್ಷಿಯಾಯಿತು.

ಶುಕ್ರವಾರ ಬೆಳಗ್ಗೆ 10 ಗಂಟೆಯಿಂದ 11 ಗಂಟೆಯವರೆಗೆ ಒಂದು ಗಂಟೆಗಳ ಕಾಲ ಚುನಾವಣೆಯ ನಾಮಪತ್ರ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಅಧ್ಯಕ್ಷ ಸ್ಥಾನಕ್ಕೆ ಬಿಜೆಪಿಯ ರತ್ನಮ್ಮ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಜೆಡಿಎಸ್‌ನ ಕಾವ್ಯರಾಣಿ ಮಾತ್ರ ನಾಮಪತ್ರ ಸಲ್ಲಿಸಿದ್ದರು. ನಾಮಪತ್ರ ಸಲ್ಲಿಸುವ ಸಮಯಾವಕಾಶ ಮುಗಿದರೂ ಸಹ ಮತ್ಯಾರೂ ನಾಮಪತ್ರ ಸಲ್ಲಿಸದಿದ್ದ ಕಾರಣ ತಹಸೀಲ್ದಾರ್ ಕೆ.ಪುರಂದರ ಅವರು ಇವರಿಬ್ಬರನ್ನೇ ಅಧ್ಯಕ್ಷ ಮತ್ತು ಉಪಾಧ್ಯಕ್ಷೆಯಾಗಿ ಆಯ್ಕೆ ಮಾಡಿ ಘೋಷಿಸಿದರು. ಶಾಸಕ ಸಿ.ಬಿ.ಸುರೇಶ್‌ಬಾಬು ಸಹ ಉಪಸ್ಥಿತರಿದ್ದು ಇಬ್ಬರನ್ನೂ ಅಭಿನಂಧಿಸಿದರು.



### ಮತ್ತೆ ಬಿಜೆಪಿ ತೆಕ್ಕೆಗೆ ಪಪಂ ಅಧಿಕಾರ

**ಹು**ಳಿಯಾರು ಪಪಂನಲ್ಲಿ ಯಾವ ಪಕ್ಷಕ್ಕೂ ಸ್ಪಷ್ಟ ಬಹುಮತ ಇಲ್ಲದಿದ್ದರಿಂದ ಮೈತ್ರಿ ಮಾಡಿಕೊಂಡು ಚುನಾವಣೆ ಎದುರಿಸುವುದು ಅನಿವಾರ್ಯ. ಕಳೆದ ಬಾರಿ ಬಿಜೆಪಿ ಮೈತ್ರಿ ಮಾಡಿಕೊಳ್ಳದೆ ಸಂಸದರ, ಶಾಸಕರ ಹಾಗೂ ಓರ್ವ ಪಕ್ಷೇತರ ಸದಸ್ಯೆಯ ಮತ ನೆಚ್ಚಿಕೊಂಡು ಚುನಾವಣೆ ಎದುರಿಸಿತ್ತು. ಇತ್ತ ಜೆಡಿಎಸ್ ಹಾಗೂ ಕಾಂಗ್ರೆಸ್ ಮೈತ್ರಿ ಮಾಡಿಕೊಂಡು ಓರ್ವ ಪಕ್ಷೇತರ ಅಭ್ಯರ್ಥಿ ಸೇರಿಸಿಕೊಂಡು ಚುನಾವಣೆ ಎದುರಿಸಿತ್ತು. ಎರಡೂ ಕಡೆಯೂ ಸಮಬಲ 9 ಮತಗಳಿತ್ತು. ಆದರೆ ಗೆಲ್ಲಲು 10 ಮತಗಳ ಅವಶ್ಯಕತೆಯಿದ್ದು ತೀವ್ರ ಕುತೂಹಲ ಸೃಷ್ಟಿಸಿತ್ತು. ಆದರೆ ಕೊನೆಕ್ಷಣದಲ್ಲಿ ಕಾಂಗ್ರೆಸ್ ಸದಸ್ಯ ರಾಜುಬಡಗಿ ಗೈರಾಗುವ ಮೂಲಕ ಬಿಜೆಪಿ ಗೆಲುವಿಗೆ ದಾರಿ ಮಾಡಿಕೊಟ್ಟರು. ಈ ಬಾರಿ ಕಳೆದ ಚುನಾವಣೆಯಲ್ಲಿ ಮೈತ್ರಿ ಮಾಡಿಕೊಂಡಿತ ಕಾಂಗ್ರೆಸ್, ಜೆಡಿಎಸ್ ಮೈತ್ರಿ ಮಾಡಿಕೊಂಡು ಪಕ್ಷೇತರ ಸದಸ್ಯ ಹಾಗೂ ಶಾಸಕರ ಮತ ಸೇರಿಸಿ ಸುಲಭವಾಗಿ ಜೆಡಿಎಸ್ ಅಧಿಕಾರ ಹಿಡಿಯಬಹುದಿತ್ತು. ಆದರೆ ಬಿಜೆಪಿ ಮಾಸ್ಟರ್ ಪ್ಲಾನ್ ಮಾಡಿ 3 ಪಕ್ಷದ ಕೆಲ ಸದಸ್ಯರ ಬಣವನ್ನು ಮಾಡಿಕೊಂಡು ಚುನಾವಣೆ ಎದುರಿಸಿ ಮತ್ತೆ ಅಧಿಕಾರವನ್ನು ತನ್ನ ತೆಕ್ಕೆಯಲ್ಲೇ ಉಳಿಸಿಕೊಂಡಿತು.

### ಅವಿರೋಧ ಆಯ್ಕೆಗೆ ಸಹಕರಿಸಿದ ಸದಸ್ಯರು ಯಾರ್‍ಯಾರು?

ಹುಳಿಯಾರು ಪಪಂನ ನೂತನ ಅಧ್ಯಕ್ಷೆಯಾಗಿ ಬಿಜೆಪಿಯ ರತ್ನಮ್ಮ ಆಯ್ಕೆಯಾಗಿದ್ದರೂ ಸಹ ಬಿಜೆಪಿಯ 6 ಮಂದಿ ಸದಸ್ಯರ ಪೈಕಿ ರತ್ನಮ್ಮ, ಹೇಮಂತ್, ಚಂದ್ರಶೇಖರ್ ಮಾತ್ರ ಚುನಾವಣೆಯಲ್ಲಿ ಹಾಜರಿದ್ದರು. ಜೆಡಿಎಸ್‌ನ ಕಾವ್ಯರಾಣಿ ಉಪಾಧ್ಯಕ್ಷರಾಗಿದ್ದು ಇವರಿಗೆ ಜೆಡಿಎಸ್‌ನ ಕಾವ್ಯರಾಣಿ, ಮಂಜಣ್ಣಯ್ಯ ಹಾಗೂ ಪ್ರೀತಿ ಮೂವರೂ ಬೆಂಬಲ ಸೂಚಿಸಿದ್ದರು. ಇನ್ನು ಕಾಂಗ್ರೆಸ್‌ನ ಐವರು ಸದಸ್ಯರ ಪೈಕಿ ರಾಜು ಬಡಗಿ, ಎಸ್‌ಆರ್‌ಎಸ್ ದಯಾನಂದ್, ದಸ್ತುಗಿರಿಸಾಬ್ ಮಾತ್ರ ಬಂದಿದ್ದರು. ಇಬ್ಬರು ಪಕ್ಷೇತರ ಸದಸ್ಯರ ಪೈಕಿ ಜಹೀರ್ ಸಾಬ್ ಮಾತ್ರ ಉಪಸ್ಥಿತರಿದ್ದರು. ಶಾಸಕರು ಮತ್ತು ಸಂಸದರು ಭಾಗವಹಿಸಬಹುದಾಗಿದ್ದರೂ ಸಹ ಶಾಸಕ ಸಿ.ಬಿ.ಸುರೇಶ್‌ಬಾಬು ಮಾತ್ರ ಇದ್ದರು.

### ನಾಲ್ವರು ತಡವಾಗಿ ಬಂದರು, ಇಬ್ಬರು ಗೈರಾದರು

ಹುಳಿಯಾರು ಪಪಂ ಅಧ್ಯಕ್ಷೆ, ಉಪಾಧ್ಯಕ್ಷೆಯ ಆಯ್ಕೆ 3 ಪಕ್ಷದ ಸದಸ್ಯರು ಅವಿರೋಧವಾಗಿ ಆಯ್ಕೆ ಮಾಡಿದರೆಂಬ ಸಂದೇಶ ಹೊರಗಡೆ ಹರಿದಾಡುತ್ತಿದೆಯಾದರೂ ಒಳಗೊಳಗೆ ವಿರೋಧ ಇದೆ. ಇದಕ್ಕೆ ಕಾಂಗ್ರೆಸ್‌ನ ಸದಸ್ಯರುಗಳಾದ ಸಿದ್ದಿಕ್ ಹಾಗೂ ಜುಬೇರ್ ಗೈರಾಗಿರುವುದು, ಬಿಜೆಪಿಯ ಸದಸ್ಯರುಗಳಾದ ಕೆಂಎಂಎಲ್ ಕಿರಣ್, ಸಂಧ್ಯಾ, ಬೀಬೀಫಾತಿಮಾ ಹಾಗೂ ಪಕ್ಷೇತರ ಸದಸ್ಯೆ ಶೃತಿ 10 ನಿಮಿಷ ತಡವಾಗಿ ಬಂದು ಚುನಾವಣಾ ಪ್ರಕ್ರಿಯೆಯಲ್ಲಿ ಭಾಗಿಯಾಗುವ ಅವಕಾಶ ಕಳೆದುಕೊಂಡಿದ್ದು ಸ್ಪಷ್ಟ ನಿದರ್ಶನವಾಗಿದೆ. ಪರಿಣಾಮ ಮುಂದಿನ ಸಾಮಾನ್ಯ ಸಭೆಗಳನ್ನು ಸುಗಮವಾಗಿ ನೂತನ ಅಧ್ಯಕ್ಷೆ ಹಾಗೂ ಉಪಾಧ್ಯಕ್ಷೆಯರು ನಡೆಸುವುದು ಕಷ್ಟಸಾಧ್ಯ ಎನ್ನಲಾಗುತ್ತಿದೆ. ವಿರೋಧ ತಂಡದಲ್ಲಿ ಈಗಾಗಲೇ ಪಂಚಾಯಿತಿಯ ಹಣಕಾಸಿನ ವಹಿವಾಟನ್ನು ಹತ್ತಿರದಿಂದ ನೋಡಿರುವ ಮಾಜಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಇದ್ದಾರೆ. ಹಾಗಾಗಿ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸಭೆ ನಡೆಸುವುದು ಸವಾಲಾಗಿದೆ.

**ಚು**ನಾವಣೆಯಲ್ಲಿ ಗೆಲ್ಲುವವರೆಗಿನ ಮಾತ್ರ ಪಕ್ಷ, ಗೆದ್ದನಂತರ ಪಕ್ಷಾತೀತವಾಗಿ ಕೆಲಸ ಮಾಡಬೇಕು. ಆಗ ಮಾತ್ರ ಊರಿನ ಅಭಿವೃದ್ಧಿ ಮಾಡಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಹುಳಿಯಾರು ಪಂಚಾಯ್ತಿಯ ಮೂರು ಪಕ್ಷದ ಸದಸ್ಯರು ಒಂದಾಗಿ ಅಧ್ಯಕ್ಷೆ ಮತ್ತು ಉಪಾಧ್ಯಕ್ಷೆಯನ್ನು ಅವಿರೋಧವಾಗಿ ಆಯ್ಕೆ ಮಾಡಿರುವುದು ಅಭಿನಂದನಾರ್ಹ ಬೆಳವಣಿಗೆ. ತಾಲೂಕು ಸರಿಸಮಾನಾಗಿ ಬೆಳೆದಿರುವ ಹುಳಿಯಾರು ಪಟ್ಟಣವನ್ನು ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಈಗಾಗಲೇ ಕೋಟ್ಯಾಂತರ ರೂ. ನೀಲನಕ್ಷೆ ಸಿದ್ಧಪಡಿಸಲಾಗಿದೆ. ಕುಡಿಯುವ ನೀರು, ರಸ್ತೆ, ನೈರ್ಮಲ್ಯಕ್ಕೆ ಈಗಾಗಲೇ ಹಣ ಸಹ ಬಿಡುಗಡೆಯಾಗಿದೆ. ಇದನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಎಲ್ಲರೂ ಒಂದಾಗಿ ಹೋಗುವುದು ಅನಿವಾರ್ಯವಾಗಿತ್ತು. ಅದರಂತೆ 3 ಪಕ್ಷವೂ ಒಂದಾಗಿದೆ. ಇದು ಒಳ್ಳೆಯ ಸಂದೇಶ ಕೂಡ.

| ಸಿ.ಬಿ.ಸುರೇಶ್‌ಬಾಬು ಶಾಸಕರು, ಚಿಕ್ಕನಾಯಕನಹಳ್ಳಿ

# ವಿವಿಧ ಸೌಲಭ್ಯ ಪಡೆಯಲು ಅರ್ಜಿ

**ಬೆಂಗಳೂರು ಗ್ರಾಮಾಂತರ :** ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅನುಷ್ಠಾನಗೊಳಿಸುತ್ತಿರುವ 2024-25ನೇ ಸಾಲಿಗೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿಯ ಜನರ ಆರ್ಥಿಕ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ-ನೇರಸಾಲ ಯೋಜನೆ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ-1(ಸಹಾಯಧನ ಗರಿಷ್ಠ ರೂ.1.00 ಲಕ್ಷ), ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ-2 (ಸಹಾಯಧನ ಗರಿಷ್ಠ ರೂ.2.00 ಲಕ್ಷ), ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ-3-ಸ್ವಾವಲಂಭಿ ಸಾರಥಿ ಯೋಜನೆ (ಸರಕು ವಾಹನ/ಟ್ಯಾಕ್ಸಿ(ಹಳದಿ ಬೋರ್ಡ್) ಸಹಾಯಧನ ಗರಿಷ್ಠ ರೂ.4.00 ಲಕ್ಷ), ಮೈಕ್ರೋ ಕ್ರೆಡಿಟ್ (ಪ್ರೇರಣಾ) (ಮಹಿಳಾ ಸ್ವ ಸಹಾಯ ಗುಂಪುಗಳಿಗೆ), ಭೂ ಒಡೆತನ ಯೋಜನೆಯಡಿ ಭೂ ರಹಿತ ಮಹಿಳಾ ಕೃಷಿ ಕಾರ್ಮಿಕರಿಗೆ ಹಾಗೂ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆಯುವ ಸಲುವಾಗಿ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಫಲಾಪೇಕ್ಷಿಗಳು ಆನ್ಲೈನ್ ಮೂಲಕ ಅರ್ಜಿಗಳನ್ನು ಸೆಪ್ಟೆಂಬರ್ 10 ರಿಂದ ಅಕ್ಟೋಬರ್ 10 ರವರೆಗೆ ಸಲ್ಲಿಸಬಹುದಾಗಿದೆ.

ನಿಗಮದಿಂದ ವಿವಿಧ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಜಿದಾರರು ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದವರಾಗಿರಬೇಕು ಹಾಗೂ ಕಳೆದ ಕನಿಷ್ಠ 15 ವರ್ಷಗಳಿಂದ ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. ಅರ್ಜಿದಾರರು ಕನಿಷ್ಠ 21 ರಿಂದ 50 ವರ್ಷ ಮೇಲ್ಪಟ್ಟವರಾಗಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನವು ಗ್ರಾಮೀಣ ಪ್ರದೇಶವಾದಲ್ಲಿ ರೂ.1,50,000 ಹಾಗೂ ನಗರ ಪ್ರದೇಶವಾದಲ್ಲಿ ರೂ. 2,00,000 ಮಿತಿಯೊಳಗಿರಬೇಕು. ಅರ್ಜಿದಾರರ ಕುಟುಂಬದ ಯಾವುದೇ ಸದಸ್ಯರು ಸರ್ಕಾರಿ/ಅರೆ ಸರ್ಕಾರಿ ಸಂಸ್ಥೆಯಲ್ಲಿ ನೌಕರಿಯಲ್ಲಿರಬಾರದು. ಅರ್ಜಿದಾರರು ಹಾಗೂ ಅವರ ಕುಟುಂಬದವರು ಯಾವುದೇ ನಿಗಮಗಳಿಂದ ಈ ಹಿಂದೆ ಸಾಲ ಸೌಲಭ್ಯ ಪಡೆದಿರಬಾರದು.

ಅರ್ಜಿದಾರರು ಆನ್ಲೈನ್ನಲ್ಲಿ ಸಲ್ಲಿಸಬೇಕಾದ ದಾಖಲಾತಿಗಳ ವಿವರ. ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ. ಆರ್.ಡಿ ನಂಬರ್ ಹೊಂದಿರುವ ಜಾತಿ ಹಾಗೂ ಆದಾಯ ಪ್ರಮಾಣ ಪತ್ರ. ಪಡಿತರ ಚೀಟಿ/ಆಧಾರ್ ಕಾರ್ಡ್/ಮತದಾರರ ಗುರುತಿನ ಚೀಟಿ ಅರ್ಜಿದಾರರ ಬ್ಯಾಂಕ್ ಉಳಿತಾಯ ಖಾತೆಯ ವಿವರಗಳನ್ನೊಳಗೊಂಡ ಪಾಸ್ಬುಕ್ ಪ್ರತಿ. ಇಚ್ಛಿಸುವ ಯೋಜನೆಗಳ ಯೋಜನಾ ವರದಿ. ವಾಹನದ ಪರವಾನಗಿ. ಗಂಗಾ ಕಲ್ಯಾಣ ಯೋಜನೆಯಡಿ ಅರ್ಜಿ ಸಲ್ಲಿಸುವವರು ಸಣ್ಣ ಮತ್ತು ಅತಿ ಸಣ್ಣ ರೈತರಾಗಿರಬೇಕು. ಅರ್ಹ ಫಲಾಪೇಕ್ಷಿಗಳು ಆನ್ಲೈನ್ ಮೂಲಕ ಆಯಾ ನಿಗಮದ ವ್ಯಾಪ್ತಿಯಲ್ಲಿ ಬರುವ ಸಮುದಾಯಗಳ ಅರ್ಜಿಗಳನ್ನು ಸಲ್ಲಿಸಬೇಕಾದ ವೆಬ್ಸೈಟ್ ವಿಳಾಸ https://sevasindhu.karnatak.gov.in ದಲ್ಲಿ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್, ಇವುಗಳ ಮೂಲಕ ಅಪ್ಲೋಡ್ ಮಾಡಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ಕಛೇರಿ ಅಥವಾ ದೂರವಾಣಿ ಸಂಖ್ಯೆ:080-29781036 ಹಾಗೂ ನಿಗಮದ ವೆಬ್ಸೈಟ್ ನಲ್ಲಿ ಸಂಪರ್ಕಿಸಬಹುದಾಗಿದೆ. 2023-24 ನೇ ಸಾಲಿನಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ ಎಂದು ಆದಿಜಾಂಬವ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಜಾಪ್ರಭುತ್ವ ದಿನಾಚರಣೆಗೆ ಮಾನವ ಸರಪಳಿ

**ಚಾಮರಾಜನಗರ:** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಸೆಪ್ಟೆಂಬರ್ 15ರಂದು ಆಚರಿಸಲಾಗುತ್ತಿದ್ದು, ಇದರ ಅಂಗವಾಗಿ ಮಾನವ ಸರಪಳಿಯನ್ನು ನಿರ್ಮಿಸಲಾಗುತ್ತಿದ್ದು, ಜಿಲ್ಲೆಯ ಸರ್ವರು ಪಾಲ್ಗೊಂಡು ಈ ಮಹತ್ತರ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ವೆಂಕಟೇಶ್ ಅವರು ಮನವಿ ಮಾಡಿದ್ದಾರೆ.



ಭಾರದದೇಶದ ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಜೀವಾಳವಾದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಸೆಪ್ಟೆಂಬರ್ 15ರಂದು ಹಮ್ಮಿಕೊಳ್ಳಲಾಗಿದ್ದು, ಅಂದು ರಾಜ್ಯದ ಬೀದರ್ ಜಿಲ್ಲೆಯ ಬಸವಕಲ್ಯಾಣದಿಂದ ಚಾಮರಾಜನಗರ ಜಿಲ್ಲೆಯವರೆಗೆ ರಾಜ್ಯದ ಎಲ್ಲಾ 31 ಜಿಲ್ಲೆಗಳನ್ನು ಒಳಗೊಂಡಿರುವ ಅತಿ ಉದ್ದದ ಮಾನವ ಸರಪಳಿಯನ್ನು ರಚಿಸಲಾಗುತ್ತಿದೆ. ಕರ್ನಾಟಕ ಸರ್ಕಾರವು ರೋಟರಿ ಇಂಟರ್‌ನ್ಯಾಷನಲ್, ಸಿವಿಲ್ ಸೊಸೈಟಿ, ಎನ್‌ಜಿಓರವರ ಸಹಯೋಗದೊಂದಿಗೆ ಸುಮಾರು 25 ಲಕ್ಷ ಜನರು, 2,500 ಕಿಲೋ ಮೀಟರ್ ಒಳಗೊಂಡ ಮಾನವ ಸರಪಳಿ ನಿರ್ಮಾಣ ಮಾಡುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. 10 ಲಕ್ಷ ಸಸಿ ನೆಡುವುದು, 5 ಸಾವಿರ ಸಂವಿಧಾನ ಪೀಠಿಕೆ ಓದುವ ಕಾರ್ಯಕ್ರಮ ನಡೆಯಲಿದೆ.

ಮಾನವ ಸರಪಳಿ ನಿರ್ಮಾಣವು ಸೆಪ್ಟೆಂಬರ್ 15ರಂದು ಭಾನುವಾರ ಬೆಳಿಗ್ಗೆ 8.30 ರಿಂದ 10.30ರವರೆಗೆ ಏಕಕಾಲದಲ್ಲಿ ರಾಜ್ಯಾದ್ಯಂತ ಆರಂಭವಾಗಲಿದೆ. ಚಾಮರಾಜನಗರ ಜಿಲ್ಲೆಯ ಆರಂಭದ ಮೂಗೂರು ಕ್ರಾಸ್‌ನಿಂದ ಚಾಮರಾಜನಗರ ಪಟ್ಟಣದವರೆಗೆ ಮಾನವ ಸರಪಳಿಯನ್ನು ಅಂದರೆ ಸುಮಾರು 24 ಕಿ.ಮೀವರೆಗೆ ರಚಿಸಲಾಗುತ್ತದೆ. ಈ ಕಾರ್ಯಕ್ರಮಕ್ಕೆ ಚಾಮರಾಜನಗರ ಜಿಲ್ಲೆಯಲ್ಲಿ ಸುಮಾರು 19,200 ಜನರು ಭಾಗವಹಿಸಲಿದ್ದಾರೆ. ಚಾಮರಾಜನಗರ ಪಟ್ಟಣದಲ್ಲಿ ಉದ್ದನೆಯ ಭಾರತದ ತ್ರಿವರ್ಣ ಧ್ವಜವನ್ನು ಪ್ರದರ್ಶಿಸಲಾಗುತ್ತದೆ.

ಮೂಗೂರು ಕ್ರಾಸ್‌ನಿಂದ ಪ್ರತಿ 100 ಮೀಟರ್‌ಗೆ ಓರ್ವ ಇಲಾಖೆಯ ಸಿಬ್ಬಂದಿ, ಒಬ್ಬರು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಪ್ರತಿ 500 ಮೀಟರ್‌ಗೆ ಓರ್ವ ತಾಲೂಕುಮಟ್ಟದ ಅಧಿಕಾರಿ ಹಾಗೂ 1 ಕಿಲೋ ಮೀಟರ್‌ಗೆ ಜಿಲ್ಲಾ ಮಟ್ಟದ ಅಧಿಕಾರಿಯನ್ನು ಉಸ್ತುವಾರಿಯಾಗಿ ನೇಮಿಸಲಾಗಿದೆ. ಭಾಗವಹಿಸುವವರ ಆರೋಗ್ಯ ದೃಷ್ಟಿಯಿಂದ ಪ್ರತಿ 100 ಮೀಟರ್‌ಗೆ ಒಬ್ಬ ಆಶಾ ಕಾರ್ಯಕರ್ತೆ ಹಾಗೂ 500 ಮೀಟರ್ ಅಂತರಕ್ಕೆ ಒಬ್ಬ ಆರೋಗ್ಯ ಅಧಿಕಾರಿಯನ್ನು ನಿಯೋಜಿಸಲಾಗಿದೆ.

ಈ ಮಹತ್ವದ ಮಾನವ ಸರಪಳಿ ನಿರ್ಮಾಣ ಕಾರ್ಯಕ್ರಮದಲ್ಲಿ ಸಾರ್ವಜನಿಕರು, ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ರೋಟರಿ ಇಂಟರ್‌ನ್ಯಾ?ನಲ್, ಸಿವಿಲ್ ಸೊಸೈಟಿ, ಎನ್‌ಜಿಓ, ವಕೀಲರ ಸಂಘದವರು, ಶಿಕ್ಷಕರು, ವಿದ್ಯಾರ್ಥಿಗಳು, ಮಹಿಳಾ ಸಂಘಟನೆಗಳು, ಮಾಧ್ಯಮದವರು, ರಾಜಕೀಯ ಪಕ್ಷದ ಮುಖಂಡರು, ಎಲ್ಲಾ ಸಮುದಾಯದ ಯಜಮಾನರು ಮತ್ತು ಮುಖಂಡರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ವೆಂಕಟೇಶ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮಾನವ ಸರಪಳಿ ರಚನೆಗೆ ಗಡಿ ಜಿಲ್ಲೆ ಚಾಮರಾಜನಗರದಲ್ಲಿ ಸರ್ವ ಸಿದ್ಧತೆ

**ಚಾಮರಾಜನಗರ:** ಮಾನವ ಹಕ್ಕುಗಳ ರಕ್ಷಣೆ, ಅಭಿವೃದ್ದಿ, ಶಾಂತಿ ಮತ್ತು ಸ್ಥಿರತೆಯ ಮೂಲಕ ಪ್ರಜಾಪ್ರಭುತ್ವವನ್ನು ಬಲಪಡಿಸಲು ಇದರ ಮೌಲ್ಯ ತತ್ವಗಳನ್ನು ಎತ್ತಿಹಿಡಿಯಲು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಸೆಪ್ಟೆಂಬರ್ 15ರಂದು ಆಚರಿಸಲಾಗುತ್ತಿದೆ. ಈ ಮಹತ್ತರ ದಿನದ ಅಂಗವಾಗಿ ಕರ್ನಾಟಕದ ಉತ್ತರ ತುದಿಯಾದ ಬೀದರ್ ಜಿಲ್ಲೆಯಿಂದ ದಕ್ಷಿಣ ತುದಿ ಚಾಮರಾಜನಗರ ಜಿಲ್ಲೆಯವರೆಗೆ ಜಾಗೃತಿಗಾಗಿ ಉದ್ದನೆಯ ಮಾನವ ಸರಪಳಿಯನ್ನು ರಚಿಸಲಾಗುತ್ತಿದೆ. ಚಾಮರಾಜನಗರ ಜಿಲ್ಲೆಯಲ್ಲಿ ಈ ಅರ್ಥಪೂರ್ಣ ಕಾರ್ಯಕ್ರಮಕ್ಕೆ ಸಕಲ ಸಿದ್ದತೆಯಾಗಿದೆ. ಮಾನವ ಸರಪಳಿಯು ರಾಜ್ಯದ 31 ಜಿಲ್ಲೆಗಳನ್ನು ಒಳಗೊಂಡಿದೆ. ಗಡಿ ಜಿಲ್ಲೆ ಚಾಮರಾಜನಗರದಲ್ಲಿ ಮೂಗೂರು ಕ್ರಾಸ್ ನಿಂದ ಮಾನವ ಸರಪಳಿ ಆರಂಭವಾಗಲಿದೆ. 24 ಕಿ.ಮೀ ನಷ್ಟು ಉದ್ದದ ಮಾನವ ಸರಪಳಿ ಚಾಮರಾಜನಗರ ಜಿಲ್ಲಾ ವ್ಯಾಪ್ತಿಯಲ್ಲಿ ರಚನೆಯಾಗಲಿದ್ದು, ಚಾಮರಾಜನಗರ ಪಟ್ಟಣದವರೆಗೂ ಇರಲಿದೆ. ರಾಜ್ಯದಲ್ಲಿ ಮಾನವ ಸರಪಳಿಯು ಸುಮಾರು 2,500 ಕಿಲೋಮೀಟರ್ ಉದ್ದ ಇರಲಿದೆ. ಇದರಲ್ಲಿ ಅಂದಾಜು 25 ಲಕ್ಷಕ್ಕೂ ಹೆಚ್ಚಿನ ಜನರು ಪಾಲ್ಗೊಳ್ಳಲಿದ್ದಾರೆ. 10 ಲಕ್ಷ ಸಸಿಗಳನ್ನು ನೆಡುವ ಕಾರ್ಯಕ್ರಮ ಆಯೋಜಿಸಲಾಗಿದೆ. ಚಾಮರಾಜನಗರ ಜಿಲ್ಲೆಯಲ್ಲಿ ನಿರ್ಮಾಣವಾಗಲಿರುವ 24 ಕಿ.ಮೀ ಮಾನವ ಸರಪಳಿಯಲ್ಲಿ 19,200 ಜನರು ಭಾಗವಹಿಸಲಿದ್ದಾರೆ.

ಜಿಲ್ಲೆಯ ಜನಪ್ರತಿನಿಧಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು, ವಿವಿಧ ಸಂಘ ಸಂಸ್ಥೆಗಳ ಮುಖಂಡರು, ಪದಾಧಿಕಾರಿಗಳು, ಸದಸ್ಯರು, ಸರ್ಕಾರಿ, ಖಾಸಗಿ ಸಂಸ್ಥೆಗಳ ಅಧಿಕಾರಿಗಳು, ನೌಕರರು ಸೇರಿದಂತೆ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಾನವ ಸರಪಳಿಯಲ್ಲಿ ಭಾಗವಹಿಸುವುದರ ಜೊತೆಗೆ ಪರಿಸರ ಕಾಳಜಿ ಕಾರ್ಯಕ್ರಮವು ಏರ್ಪಾಡಾಗಿದ್ದು, ಸಸಿ ನೆಡುವ ಕಾರ್ಯವು ಇರಲಿದೆ. ಸಂವಿಧಾನ ಪೀಠಿಕೆ ವಾಚನ ಸಹ ನಡೆಯಲಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು 2007ರಲ್ಲಿ ಅಂಗೀಕರಿಸಿದ ನಿರ್ಣಯದಂತೆ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಪ್ರಾರಂಭಿಸಲಾಯಿತು. ಸೆಪ್ಟೆಂಬರ್ 15ರಂದು ಪ್ರಜಾಪ್ರಭುತ್ವ ದಿನವನ್ನು ಆಚರಿಸಲಾಗುತ್ತಿದ್ದು, ಈ ದಿನವು ವಿಶ್ವದ ಪ್ರಜಾಪ್ರಭುತ್ವದ ಸ್ಥಿತಿಗತಿಯನ್ನು ಪರಿಶೀಲಿಸಲು ಮತ್ತು ಜಾಗತಿಕವಾಗಿ ಪ್ರಜಾಪ್ರಭುತ್ವದ ತತ್ವಗಳನ್ನು ಉತ್ತೇಜಿಸುವ ಉದ್ದೇಶವನ್ನು ಹೊಂದಿದೆ.

ಭಾರತ ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ. ಕರ್ನಾಟಕ ರಾಜ್ಯದಲ್ಲಿ 2023ನೇ ಸಾಲಿನಲ್ಲಿ ಸಂವಿಧಾನ ಜಾಗೃತಿ ಜಾಥಾವನ್ನು ಯಶಸ್ವಿಯಾಗಿ ನಡೆಸಿ ವ್ಯಾಪಕವಾಗಿ ಪ್ರಶಂಸಿಸಲ್ಪಟ್ಟಿತು. ಪ್ರಜಾಪ್ರಭುತ್ವವು ಸಮಾನತೆ, ಸ್ವಾತಂತ್ರ್ಯ ಮತ್ತು ಬ್ರಾತೃತ್ವದ ಭದ್ರ ಬುನಾದಿ ಮೇಲೆ ನಿಂತಿದೆ. ಈ ಭದ್ರ ಬುನಾದಿ ಬಲಿಷ್ಠವಾಗದಿದ್ದರೆ ಪ್ರಜಾಪ್ರಭುತ್ವ ಬಲಿಷ್ಠವಾಗಲಾರದು. ಆದ್ದರಿಂದ ಸಮಾನತೆ, ಸ್ವಾತಂತ್ರ್ಯ, ಬ್ರಾತೃತ್ವದ ಆದರ್ಶಗಳು ಭಾರತೀಯ ಸಂವಿಧಾನದ ಪೀಠಿಕೆಯ ಭಾಗವಾಗಿದೆ. ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದಂದು ವಿಶೇಷವಾಗಿ ನಾಗರಿಕರಿಗೆ ಅರಿವು ಮೂಡಿಸುವುದು ಬಹಳ ಮುಖ್ಯವಾಗಿದ್ದು ಈ ದಿಸೆಯಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಾಗುತ್ತಿದೆ. ಇದರ ಪ್ರಯುಕ್ತ ಬೀದರ್‌ನಿಂದ ಚಾಮರಾಜನಗರದವರೆಗೆ ಮಾನವ ಸರಪಳಿ ರಚಿಸುವ ಮೂಲಕ ಅರ್ಥಪೂರ್ಣವನ್ನಾಗಿಸಲು ಎಲ್ಲಾ ಸಿದ್ದತೆ ನಡೆಸಲಾಗಿದೆ.

### ಭಾಗವಹಿಸಲು ಕಲಾವಿದರು, ಸಾಹಿತಿಗಳು, ಕನ್ನಡಪರ ಸಂಘಟನೆಗಳ ಮುಖಂಡರಿಗೆ ಮನವಿ

**ಅಂತರಾಷ್ಟೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸೆಪ್ಟೆಂಬರ್ 15ರಂದು ಜಿಲ್ಲೆಯಲ್ಲಿ ಮೂಗೂರು ಕ್ರಾಸ್‌ನಿಂದ ಚಾಮರಾಜನಗರ ಪಟ್ಟಣದವರೆಗೆ ಮಾನವ ಸರಪಳಿ ನಿರ್ಮಿಸಲಾಗುತ್ತಿದ್ದು, ಜನಪದ, ರಂಗಭೂಮಿ, ವೃತ್ತಿ ರಂಗಭೂಮಿ ಕಲಾವಿದರು ಹಾಗೂ ಸಾಹಿತಿಗಳು, ಕನ್ನಡ ಪರ ಸಂಘಟನೆಗಳು, ಸ್ವಯಂ ಸೇವಾ ಸಂಸ್ಥೆಗಳು ಭಾಗವಹಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮನವಿ ಮಾಡಿದೆ. ಬೆಳಿಗ್ಗೆ 9 ಗಂಟೆಗೆ ನಿರ್ಮಿಸಲಾಗುವ ಮಾನವ ಸರಪಳಿಯಲ್ಲಿ ಸಂವಿಧಾನದ ಆಶಯಗಳನ್ನು ಬಲಿ?ಗೊಳಿಸಲು ಜಿಲ್ಲೆಯ ಸರ್ವ ಕಲಾವಿದರು ತಮ್ಮ ಕಲೆಯ ವೇಷ ಭೂಷಣದೊಂದಿಗೆ ಭಾಗವಹಿಸಿ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉದಯ್ ಕುಮಾರ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.**

# ನಾಳೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನ

**ಕೋಲಾರ:** ವಿಶ್ವಸಂಸ್ಥೆಯು 2007 ರ ಸೆಪ್ಟೆಂಬರ್ 15 ರಂದು ಪ್ರಜಾಪ್ರಭುತ್ವ ದಿನವನ್ನು ಆಚರಿಸುವ ಕುರಿತು ಘೋ?ಣೆ ಹೊರಡಿಸಿದೆ. ಈ ದಿನವನ್ನು ಜಗತ್ತಿನಾದ್ಯಂತ ವಿಶ್ವ ಪ್ರಜಾಪ್ರಭುತ್ವ ದಿನವನ್ನಾಗಿ ಆಚರಿಸಲಾಗುತ್ತಿದ್ದು, ವಿಶ್ವ ಮಟ್ಟದಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಅರಿಯುವ ವೇದಿಕೆಯಾಗಿದೆ. ರಾಜ್ಯದಲ್ಲಿ ಸೆಪ್ಟೆಂಬರ್ 15 ರಂದು ನಡೆಯುವ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಪ್ರತಿಯೊಬ್ಬ ಸಾರ್ವಜನಿಕರೂ ಭಾಗವಹಿಸಿ, ಪ್ರಜಾಪ್ರಭುತ್ವದ ಮೌಲ್ಯಗಳಾದ ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಸಂದೇಶವನ್ನು ಇಡೀ ಜಗತ್ತಿಗೆ ಸಾರಲು ನಾವೆಲ್ಲಾ ಮುಂದಾಗಬೇಕೆಂದು ಕೋಲಾರ ಜಿಲ್ಲಾಧಿಕಾರಿಗಳಾದ ಅಕ್ರಂ ಪಾ? ಅವರ ಆಶಯ ಹಾಗೂ ಆಸೆಯಾಗಿದ್ದು ಇಂದೇ ನಾವೆಲ್ಲರೂ ಕಂಕಣಬದ್ಧರಾಗೋಣ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ಹಮ್ಮಿಕೊಳ್ಳುವ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ, ಅಚ್ಚುಕಟ್ಟಾಗಿ ಹಮ್ಮಿಕೊಂಡು ಯಶಸ್ವಿಗೊಳಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ಸೆಪ್ಟೆಂಬರ್ 15 ಮುಂಜಾನೆ 9 ಗಂಟೆಗೆ ಜಿಲ್ಲೆಯ ಚಿಕ್ಕೊಡಹಳ್ಳಿ ಗ್ರಾಮದಿಂದ ವೆಂಕಟಾಪುರ ಗ್ರಾಮದ ವರೆಗೆ ಏಕಕಾಲಕ್ಕೆ ಮಾನವ ಸರಪಳಿ ಕಾರ್ಯಕ್ರಮ ಜರಗುತ್ತಿದೆ. ಕೋಲಾರ ತಾಲೂಕಿನಲ್ಲಿ ಮಾನವ ಸರಪಳಿ ಹಾದು ಹೋಗುತ್ತಿದ್ದು, ಪ್ರತಿ ಕಿಲೋ ಮೀಟರ್ ಗೆ ಒಬ್ಬರು ನೋಡಲ್ ಅಧಿಕಾರಿಯನ್ನು ನೇಮಿಸಿ, ಮುಖ್ಯ ವೃತ್ತಗಳಲ್ಲಿ ತೋರಣ ,ಬ್ಯಾನರ್ ಹಾಕಿಸಿ ಮಾನವ ಸರಪಳಿ ನಿರ್ಮಿಸಿ 100 ಮೀಟರ್ ವ್ಯಾಪ್ತಿಯಲ್ಲಿ ಜನರನ್ನು ಸೇರಿಸಿ ಸಂವಿಧಾನದ ಪೀಠಿಕೆ ಓದಿಸಿ, ರಾ?ಗೀತೆ ಯನ್ನು ಹಾಡಿಸಲಾಗುವುದು.

ತಹಶಿಲ್ದಾರರು ಮತ್ತು ತಾಲೂಕಾ ಪಂಚಾಯಿತಿ ಕಾರ್ಯನಿರ್ವಾಹಕರನ್ನೊಳಗೊಂಡು ಸಂಪೂರ್ಣ ಯೋಜನೆ ಜೊತೆಗೆ ಸೂಕ್ಷ್ಮ ಯೋಜನೆ ತಯಾರಿಸಿ ಮಾನವ ಸರಪಳಿ ಹಾದು ಹೋಗುವ ಗ್ರಾಮ ಸೇರಿದಂತೆ,10 ಕಿಲೋ ವ್ಯಾಪ್ತಿಯಲ್ಲಿರುವ ಗ್ರಾಮಗಳಲ್ಲಿ ಗ್ರಾಮ ಸಭೆಯನ್ನು ನಡೆಸಿ ಮತ್ತು ಗ್ರಾಮದ ಶಾಲೆಗಳಲ್ಲಿ ಸಭೆಯನ್ನು ನಡೆಸಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು, ಗ್ರಾಮಸ್ಥರು, ಅಧಿಕಾರಿಗಳು ಸಿಬ್ಬಂದಿಯವರು ಈ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ



ಪ್ರೋತ್ಸಾಹಿಸಲಾಗುವುದು. ಆಯಾ ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ತಾಲೂಕಾ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಸೀಲ್ದಾರರು, ಪಿಡಿಓ, ನರೇಗಾ, ಗ್ರಾಮ ಪಂಚಾಯತ್ ಅಧಿಕಾರಿ ಸಿಬ್ಬಂದಿಗಳು ಅವಶ್ಯಕ ಪೂರ್ವಸಿದ್ದತಾ ಕ್ರಮ ಕೈಗೊಳ್ಳಲಾಗುತ್ತದೆ.

ಮಾನವ ಸರಪಳಿ ಕಾರ್ಯಕ್ರಮದಲ್ಲಿ ಯುವಕರು ಉತ್ಸಾಹದಿಂದ ಪಾಲ್ಗೊಂಡು ಮಾನವ ಸರಪಳಿಯ ಪ್ರಾರಂಭ ಮತ್ತು ಅಂತ್ಯ ಸ್ಥಳವನ್ನು ಗುರುತಿಸಲಾಗುವುದು. ಪ್ರತಿ ಕಿಲೋಮೀಟರ್ ಗೆ ಬಣ್ಣ ಹಚ್ಚಿ ಗುರುತು ಮಾಡಿಕೊಂಡು ಪ್ರತಿ 1ಕಿ.ಮೀಗೆ ಒಬ್ಬರಂತೆ ನೋಡಲ್ ಅಧಿಕಾರಿಯನ್ನು ನೇಮಿಸಿ ಪೂರ್ವ ಯೋಜನೆ ತಯಾರಿಸಿಕೊಳ್ಳಲಾಗುವುದು.

ಗ್ರಾಮ ಮತ್ತು ತಾಲೂಕಗಳಲ್ಲಿರುವ ವಿವಿಧ ಸಂಘಟನೆಗಳ ಮತ್ತು ಸ್ವ ಸಹಾಯ ಗುಂಪುಗಳ ಜೊತೆ ಸಭೆ ನಡೆಸಿ ಹೆಚ್ಚಿನ ಸಂಖ್ಯೆಯಲ್ಲಿ ಸಂಘದ ಸದಸ್ಯರು, ಪದಾಧಿಕಾರಿಗಳು, ಮತ್ತು ಸಾರ್ವಜನಿಕರನ್ನು ಸೇರಿಸಬೇಕು ಮತ್ತು ಮಾನವ ಸರಪಳಿಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳ ಸುರಕ್ಷತೆ ಕಡೆ ಗಮನ ನೀಡಿ, ಮಕ್ಕಳನ್ನು ಕರೆ ತರುವ ಮತ್ತು ಕಳಿಸುವ ಕೆಲಸ ಸರಿಯಾಗಿ ಆಗಬೇಕೆಂದು ವ್ಯವಸ್ಥೆ ಮಾಡಲಾಗುವುದು. ಪೊಲೀಸ್ ಇಲಾಖೆಯಿಂದ ಪಿ ಎಸ್ ಐ, ಡಿ ವಾಯ್ ಎಸ್ ಪಿ ಮತ್ತು ಸಂಚಾರಿ ಪೊಲೀಸ್ ಗಳು ಕಾರ್ಯನಿವಹಿಸಿ ಮಾನವ ಸರಪಳಿಗೆ ಸಂಪೂರ್ಣ ಬಂದೂಬಸ್ತ್ ಒದಗಿಸಲಾಗುವುದು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಮಾನವ ಸರಪಳಿಯ ಕಾರ್ಯಕ್ರಮದ ನೋಂದಣಿ ಪ್ರಕ್ರಿಯೆ ಕೈಗೊಂಡಿದ್ದು, ಎಲ್ಲಾ ಅಧಿಕಾರಿಗಳು, ಸಿಬ್ಬಂದಿ, ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಕೊಂಡಿಕೊಳ್ಳಲು ಸಜ್ಜಾಗಿದ್ದಾರೆ.

# ಆದಿಜಾಂಬವ ಅಭಿವೃದ್ಧಿ ನಿಗಮದಿಂದ ಆಹ್ವಾನ

**ಕೋಲಾರ:** ಕೋಲಾರ ಜಿಲ್ಲೆ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿ.,, ಹಾಗೂ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ, 2023-24ನೇ ಸಾಲಿಗೆ ಸ್ವಯಂ ಉದ್ಯೋಗ ಯೋಜನೆ ರೂ.50000/- ಗಳ ಸಹಾಯಧನ ರೂ:50000-00ಗಳ ಅವಧಿಸಾಲ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ (ರೂ:1,00,000-00, ರೂ:2,00,000-00 ಹಾಗೂ ಸರಕು ಸಾಗಾಣಿಕೆ ವಾಹನ-4,00,000-00 ಯೋಜನೆ), ಮೈಕ್ರೊ ಕ್ರೆಡಿಟ್ (ಪ್ರೇರಣಾ) ಯೋಜನೆ-ರೂ:2,50,000-00, ಭೂ ಒಡೆತನ ಯೋಜನೆ ಮತ್ತು ಗಂಗಾ ಕಲ್ಯಾಣ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಇಚ್ಛಿಸುವ ಪರಿಶಿಷ್ಟ ಜಾತಿಗೆ ಸೇರಿದ ಅರ್ಹ ಫಲಾಪೇಕ್ಷಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು.

ಅರ್ಜಿಗಳನ್ನು http://sevasindhu.karnataka.gov.in ವೆಬ್ ಸೈಟ್ ಮೂಲಕ ಅಕ್ಟೋಬರ್ 10 ರೊಳಗೆ ಸಲ್ಲಿಸಬಹುದು. ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ www.adcl.karnataka.gov.in ಹಾಗೂ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ www.adijiambava.karnataka.gov.in ಮಾಹಿತಿ ಪಡೆಯಬಹುದು. ಅವಧಿ ಮೀರಿ ಬಂದ ಅರ್ಜಿಗಳನ್ನು ಸಾಲ ಸೌಲಭ್ಯ ಮಂಜೂರಾತಿಗೆ ಪರಿಗಣಿಸಲಾಗುವುದಿಲ್ಲ. ಈ ಹಿಂದೆ ಅರ್ಜಿ ಸಲ್ಲಿಸಿ ಸವಲತ್ತು ಪಡೆಯದೆ ಇರುವವರು ಪುನಃ ಹೊಸದಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂ: 08152243561ರ ಮೂಲಕ ಮಾಹಿತಿ ಮಡೆಯಬಹುದು. ನಿಗಮದ ಜಿಲ್ಲಾ ಕಛೇರಿಯ ಅಧಿಕಾರಿಗಳನ್ನು/ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಚಾರಿ ಕುರಿಗಾಹಿಗಳಿಗೆ ಗುರುತಿನ ಚೀಟಿ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿ., ವತಿಯಿಂದ ಸಂಚಾರಿ ಕುರಿಗಾಹಿಗಳಿಗೆ/ವಲಸೆ ಕುರಿಗಾರರಿಗೆ ಗುರುತಿನ ಚೀಟಿ ವಿತರಿಸುವ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದ್ದು, ಕೊಲಾರ ಜಿಲ್ಲೆಯಲ್ಲಿರುವ ಕನಿಷ್ಠ 20 ಕುರಿ/ಮೇಕೆಗಳನ್ನು ಹೊಂದಿರುವ ಅರ್ಹ ಸಂಚಾರಿ ಕುರಿಗಾರರು/ವಲಸೆ ಕುರಿಗಾರರು ತಮ್ಮ ವ್ಯಾಪ್ತಿಯ ಪಶು ಚಿಕಿತ್ಸಾಲಯ/ಪಶು ಆಸ್ಪತ್ರೆಯ ಪಶುವೈದ್ಯಾಧಿಕಾರಿಗಳಿಂದ ಅರ್ಜಿಗಳನ್ನು ಪಡೆದು, ವಲಸೆ ಹೋಗುವುದಕ್ಕೆ ಸಂಬಂಧಪಟ್ಟಂತೆ ಸ್ಥಳೀಯ ಗ್ರಾಮ ಲೆಕ್ಕಾಧಿಕಾರಿಗಳಿಂದ ಮಹಜರ್ ಪ್ರಮಾಣ ಪತ್ರ ಪಡೆದು, ದಾಖಲಾತಿಗಳೊಂದಿಗೆ ಸೆಪ್ಟೆಂಬರ್ 30 ರೊಳಗೆ ಭರ್ತಿ ಮಾಡಿದ ಅರ್ಜಿಯನ್ನು ಅದೇ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗಾಗಿ ಸ್ಥಳೀಯ ಪಶು ಚಿಕಿತ್ಸಾಲಯ/ಪಶು ಆಸ್ಪತ್ರೆಯ ಪಶುವೈದ್ಯಾಧಿಕಾರಿರವರನ್ನು, ಆಯಾ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯಪಶುವೈದ್ಯಾಧಿಕಾರಿಗಳು ಆಡಳಿತ ಹಾಗೂ ಸಹಾಯಕ ನಿರ್ದೇಶಕರವರನ್ನು ಸಂಪರ್ಕಿಸಬಹುದು ಎಂದು ಟಮಕ, ಕುರಿ ಮತ್ತು ಉಣ್ಣೆ ಅಭಿವೃದ್ಧಿ ಯೋಜನೆಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಮಂಡ್ಯ:** 2023-24ನೇ ಶೈಕ್ಷಣಿಕ ಸಾಲಿನಲ್ಲಿ ಪಿ.ಯು.ಸಿ ಪದವಿ/ ಸ್ನಾತಕೋತ್ತರ/ ಪದವಿ/ ಮೆಡಿಕಲ್/ ಇಂಜಿನಿಯರಿಂಗ್ ಇತರೆ ಕೋರ್ಸ್‌ಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಇಲಾಖೆಯ ವೆಬ್ ಸೈಟ್: https://twd.karnataka.gov.in/IndexKan.aspx ತಂತ್ರಾಂಶದ ಮೂಲಕ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಮಂಡ್ಯ ಸಮಾಜ ಕಲ್ಯಾಣ ಇಲಾಖಯೆ ಉಪ ನಿರ್ದೇಶಕರು ಹಾಗೂ ತಾಲ್ಲೂಕುಗಳ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರುಗಳ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

## ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಮಂಡ್ಯ:** ಪಾಂಡವಪುರ ಟೌನ್‌ನಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ, ಪಾಂಡವಪುರ ಇಲ್ಲಿ ವೃತ್ತಿಗಳಾದ ಎಲೆಕ್ಟ್ರೀಷಿಯನ್, ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್, ಫಿಟ್ಟರ್ ಮತ್ತು ಕಂಪ್ಯೂಟರ್ ಆಪರೇಟರ್ ವೃತ್ತಿಗಳಲ್ಲಿ ಕೆಲವು ಸೀಟುಗಳು ಖಾಲಿಯಿದ್ದು, ಖಾಲಿಯಿರುವ ಸ್ಥಾನಗಳಿಗೆ ಎಸ್.ಎಸ್.ಎಲ್.ಸಿ ಉತ್ತೀರ್ಣಗೊಂಡ, ಪಿಯುಸಿ ಅನುತ್ತೀರ್ಣ ಅಭ್ಯರ್ಥಿಗಳು ಮತ್ತು ವೆಲ್ಡರ್ ವೃತ್ತಿಯಲ್ಲಿ ಖಾಲಿಯಿರುವ ಸ್ಥಾನಗಳಿಗೆ ಎಸ್.ಎಸ್.ಎಲ್.ಸಿ ಅನುತ್ತೀರ್ಣ ಅಭ್ಯರ್ಥಿಗಳು ಪ್ರವೇಶ ಪಡೆಯಬಹುದಾಗಿದ್ದು, ಸದರಿ ವೃತ್ತಿಗಳಿಗೆ ಎಸ್‌ಎಸ್‌ಎಲ್‌ಸಿ ಪಾಸ್‌ಫೇಲ್ ಆಗಿರುವ ಅಭ್ಯರ್ಥಿಗಳು ನೇರವಾಗಿ ಪ್ರವೇಶ ಹೊಂದಬಹುದಾಗಿರುತ್ತದೆ. ಪ್ರವೇಶ ಬಯಸುವ ಆಸ್ತಕ ಅಭ್ಯರ್ಥಿಗಳು ಸೆಪ್ಟೆಂಬರ್ 30ರೊಳಗೆ ನೇರವಾಗಿ ಸಂಸ್ಥೆಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08236-295060ನ್ನು ಸಂಪರ್ಕಿಸಬಹುದಾಗಿದೆ ಎಂದು ಪಾಂಡವಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗಳಿಗೆ ಅರ್ಜಿ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹುದ್ದೆ 10 ಹಾಗು ಅಂಗನವಾಡಿ ಸಹಾಯಕಿಯರ 43 ಹುದ್ದೆಗಳಿಗೆ ಸ್ಥಳೀಯ ಅರ್ಹ ಮಹಿಳಾ ಅಭ್ಯರ್ಥಿಗಳು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಸ್ಥಳೀಯರು ವೆಬ್ ಸೈಟ್ https://karnemakaone.kar.nic.in/abcd ಮೂಲಕ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸಲು ಅಕ್ಟೋಬರ್ 19 ಕೊನೆ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಅಂಬಿಕಾ ಕೆ. ಶಾಂತಮೂರ್ತಿ ಬಿಲ್ಡಿಂಗ್, ವಾಪಸಂದ್ರ ವಾರ್ಡ್ ನಂ:2, ಚಿಕ್ಕಬಳ್ಳಾಪುರ ದೂರವಾಣಿ ಸಂ:08156-271161 ಗೆ ಸಂಪರ್ಕಿಸಬಹುದು.

## ದಸರಾಕ್ಕೆ ಕಲಾವಿದರಿಂದ ಅರ್ಜಿ

**ಮಂಡ್ಯ:** ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನ ಶ್ರೀರಂಗಪಟ್ಟಣ ದಸರಾ ಕಾರ್ಯಕ್ರಮವನ್ನು ಅಕ್ಟೋಬರ್ 04 ರಿಂದ ಹಮ್ಮಿಕೊಳ್ಳಲಾಗಿದ್ದು, ಸದರಿ ಕಾರ್ಯಕ್ರಮಕ್ಕೆ ಕಲಾವಿದರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು ಸೆಪ್ಟಂಬರ್ 20 ರೊಳಗೆ ತಮ್ಮ ಕಲಾಪ್ರಕಾರ ಮಾಹಿತಿಯೊಂದಿಗೆ ಬ್ಯಾಂಕ್ ಖಾತೆ ಜೆರಾಕ್ಸ್ ಪ್ರತಿ ಸಹಿತ ಮಂಡ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ದೂ. ಸಂ: 08232-223197 ಅನ್ನು ಸಂಪರ್ಕಿಸಬಹುದು.

## ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024ನೇ ಸಾಲಿನ ವಿಶ್ವ ವಿಕಲರಚೇತನರ ದಿನಾಚರಣೆ ಅಂಗವಾಗಿ ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದ ಸಂಸ್ಥೆಗಳಿಗೆ, ವಿಶೇಷ ಶಿಕ್ಷಕರಿಗೆ ಮತ್ತು ವೈಯಕ್ತಿಕ ಪ್ರಶಸ್ತಿಗಳನ್ನು ರಾಜ್ಯ ಮಟ್ಟದಲ್ಲಿ ಆಯ್ಕೆ ಮಾಡಿ ವಿತರಿಸಬೇಕಾಗಿರುವ ಹಿನ್ನೆಲೆಯಲ್ಲಿ ರಾಜ್ಯ ಪ್ರಶಸ್ತಿಗಾಗಿ ನಿಗದಿತ ನಮೂನೆಯಲ್ಲಿ ಅಕ್ಟೋಬರ್ 15ರೊಳಗೆ ಅಗತ್ಯ ದಾಖಲಾತಿಗಳೊಂದಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಬಹುದು. ವಿ.ಸೂ: ಈ ಹಿಂದೆ ಇಲಾಖೆಯಿಂದ ರಾಜ್ಯ ಪ್ರಶಸ್ತಿ ಪಡೆದಿರಬಾರದು. ಪೊಲೀಸ್ ಪ್ರಕರಣಗಳು ಇರಬಾರದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ದೂರವಾಣಿ ಸಂಖ್ಯೆ:08156-200122 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಎನ್.ಎಂ.ಜಗದೀಶ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಂದು ಕೊರತೆಗಳ ಸಭೆ

**ಚಿಕ್ಕಬಳ್ಳಾಪುರ:** ಲೋಕಾಯುಕ್ತ ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 19 ರಂದು ಬೆಳಿಗ್ಗೆ 11:00 ಗಂಟೆಗೆ ಗೌರಿಬಿದನೂರು ತಾಲ್ಲೂಕಿಗೆ ಸಂಬಂಧಪಟ್ಟಂತೆ ಸಾರ್ವಜನಿಕರ ಕುಂದು ಕೊರತೆಗಳ ಸಭೆಯನ್ನು ಗೌರಿಬಿದನೂರು ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡದೆ ವಿಳಂಬ ನಿರ್ಲಕ್ಷ್ಯ ಮಾಡುತ್ತಿದ್ದಲ್ಲಿ ಮತ್ತು ಸರ್ಕಾರಿ ಯೋಜನೆಗಳ ಅನುಷ್ಠಾನದಲ್ಲಿ ಅಕ್ರಮಗಳನ್ನು ನಡೆಸಿ ಹಣ ದುರುಪಯೋಗಪಡಿಸಿದ್ದಲ್ಲಿ ಆ ಬಗ್ಗೆ ಸಾರ್ವಜನಿಕರು ನಿರ್ದಿಷ್ಟ ಮಾಹಿತಿಯೊಂದಿಗೆ ಸದರಿ ಸಭೆಗೆ ಹಾಜರಾಗಿ ದೂರು ಅರ್ಜಿ, ದಾಖಲೆಗಳನ್ನು ನೀಡಬಹುದು.

ಕರ್ನಾಟಕ ಸರ್ಕಾರ
ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ,
**ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಕೆ.ಆರ್.ನಗರ**
**Ph: 08223-262228 Email: eepred.krn09@yahoo.com**
ಸಂ.: ಕಾಅ/ಪಂರಾ.ಇಂ.ವಿ/ಕೃರಾನ/ಇ-ಪ್ರಕ್ಯೂರ್‌ಮೆಂಟ್/ಸ.ಇಂ

**ಅಲ್ಪಾವಧಿ ಇ-ಪ್ರಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ ಸಂಖ್ಯೆ 06/2024-25**
**ದಿನಾಂಕ: 05.09.2024**

ಕರ್ನಾಟಕ ಸರ್ಕಾರದ ರಾಜ್ಯಪಾಲರ ಪರವಾಗಿ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ.ವಿಭಾಗ ಕೆ.ಆರ್.ನಗರ ಕರ್ನಾಟಕ ಸರ್ಕಾರದ ವಿದ್ಯುನ್ಮಾನ ಸಂಗ್ರಹಣೆ ವೇದಿಗೆ ಬೆಂಗಳೂರು ರವರ ಸಹಯೋಗದೊಂದಿಗೆ, ಅರ್ಹ ಸರಬರಾಜುದಾರರಿಂದ ಟೆಂಡರ್ ನಮೂನೆ ರೀತ್ಯಾ (ದ್ವಿ-ಲಕೋಟೆ ಪದ್ಧತಿಯಂತೆ) ಇ-ಪ್ರಕ್ಯೂರ್‌ಮೆಂಟ್ ಮೂಲಕ ಇ-ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ಫಾರಂಗೆ ಅರ್ಜಿ ಸಲ್ಲಿಸಲು ಮತ್ತು ಭರ್ತಿ ಮಾಡಿದ ಫಾರಂಗಳನ್ನು ಆನ್ ಲೈನ್‌ನಲ್ಲಿ ಸಲ್ಲಿಸಲು ನಿಗಧಿತ ಅವಧಿ ದಿ: 12.09.2024 ರಿಂದ 23.09.2024 ಸಂಜೆ 5.00 ಘಂಟೆಯವರೆಗೆ. ಸಾಧ್ಯವಾದರೆ ಟೆಂಡರ್ ತೆರೆಯುವ ದಿ: 24.09.2024ರ ಸಂಜೆ ಸಂಜೆ 5.00 ಘಂಟೆಯ ನಂತರ.
ಲೆಕ್ಕಶೀರ್ಷಿಕೆ 2059-00-101-0-28 ವಾಹನಗಳ/ಯಂತ್ರೋಪಕರಣಗಳ/ನಿರ್ವಹಣೆ ಮತ್ತು ದುರಸ್ಥಿ
**ಕ್ರ.ಸಂ.1 ತಾಲ್ಲೂಕು:** 2024-25ನೇ ಸಾಲಿಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಪಂ.ರಾ.ಇಂ.ಉಪವಿಭಾಗ, ಕೆ.ಆರ್.ನಗರ, ಹುಣಸೂರು, ಪಿರಿಯಾಪಟ್ಟಣ, ಹೆಚ್.ಡಿ.ಕೋಟೆ ಕಛೇರಿಗಳಿಗೆ ಸ್ಥಳ ಪರಿಶೀಲನೆ ಕರ್ತವ್ಯಕ್ಕಾಗಿ ಚಾಲಕರ ಸಹಿತ ಹವಾ ನಿಯಂತ್ರಣ ರಹಿತ (Non A.C) ಇರುವಂತಹ ವಾಹನವನ್ನು ಒದಗಿಸುವುದು. **ವಾಹನಗಳ ಸಂಖ್ಯೆ:** 04 ಸಂಖ್ಯೆ Bolero/Swift desire/Toyota-ETIOS or Similar Compact sedan or sean type **ಟೆಂಡರ್‌ಗಿಟ್ಟ ಮೊತ್ತ (ರೂ.ಲಕ್ಷಗಳಲ್ಲಿ):** 18.20
ಟೆಂಡರ್ ಫಾರಂ ಬೆಲೆ ಇ-ಪ್ರಕ್ಯೂರ್‌ಮೆಂಟ್‌ನಂತೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಕರ್ನಾಟಕ ಸರ್ಕಾರದ ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ (kppp-portal) ವೆಬ್ ಸೈಟ್‌ನಲ್ಲಿ ಪಡೆಯಬಹುದು. ಈ ಬಗ್ಗೆ ಇನ್ನೂ ಹೆಚ್ಚಿನ ವಿವರಗಳಿಗಾಗಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಕೆ.ಆರ್.ನಗರ (ಫೋನ್ ನಂ 9972961399) ರವರ ಕಛೇರಿಯ ವೇಳೆಯಲ್ಲಿ ಪಡೆಯಬಹುದು.
DIPR/DDMYS-545/KSMCA-383/2024-25 ಸಹಿ/- ಕಾರ್ಯಪಾಲಕ ಇಂಜಿನಿಯರ್

# ಪ್ರಜಾಪ್ರಭುತ್ವ ದಿನ, ಸ್ವಚ್ಛತೆಯೇ ಸೇವೆ ಕಾರ್ಯಕ್ರಮ ಯಶಸ್ವಿಗೊಳಿಸಿ

**ಚಿಕ್ಕಬಳ್ಳಾಪುರ:** ಸೆಪ್ಟೆಂಬರ್ 14ರಿಂದ ಅಕ್ಟೋಬರ್ 1 ರವರೆಗೆ ಚಿಕ್ಕಬಳ್ಳಾಪುರ ಜಿಲ್ಲೆಯ ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ವಚ್ಛತೆಯೇ ಸೇವೆ ಕಾರ್ಯಕ್ರಮದಡಿ ಅಮ್ಮನ ಹೆಸರಿನಲ್ಲಿ ಪ್ರತಿಯೊಬ್ಬರೂ ಗಿಡ ನೆಡುವುದು ಹಾಗೂ ಹಲವು ಸ್ವಚ್ಛತಾ ಕಾರ್ಯಕ್ರಮಗಳು ನಡೆಯಲಿವೆ. ಈ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಸಾರ್ವಜನಿಕರೂ ಕೈ ಜೋಡಿಸಬೇಕೆಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಮನವಿ ಮಾಡಿದರು.



ನಾಳೆಯಿಂದ ಅಕ್ಟೋಬರ್ 01 ರವರೆಗೆ ನಡೆಯಲಿರುವ ಸ್ವಚ್ಛತಾ ಹಿ ಸೇವಾ..ಅಂದರೆ ಸ್ವಚ್ಛತೆಯೇ ಸೇವೆ ಕಾರ್ಯಕ್ರಮದಡಿ ಜಿಲ್ಲೆಯಲ್ಲಿ ನಡೆಯಲಿರುವ ವಿವಿಧ ಚಟುವಟಿಕೆಗಳ ಕುರಿತು ಸುದ್ದಿಗಾರರೊಂದಿಗೆ ಇಂದು ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮಾತನಾಡಿದರು. ಸ್ವಚ್ಛತಾ ಹಿ ಸೇವಾದ ಘೋಷ ವಾಕ್ಯ ಸ್ವಭಾವ ಸ್ವಚ್ಛತೆ ಮತ್ತು ಸಂಸ್ಕಾರ ಸ್ವಚ್ಛತೆ ಎಂಬುದಾಗಿದೆ. ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ವಚ್ಛತೆಯೇ ಸೇವೆ ಆಂದೋಲನದ ರೂಪದಲ್ಲಿ ನಡೆಯಲಿದೆ. ಇದರಡಿ ನಾಲ್ಕು ಭಾಗಗಳಿದ್ದು, ಗಿಡಗಳನ್ನು ನೆಡುವುದು, ಸ್ಥಳೀಯ ನೃತ್ಯ ಸೇರಿದಂತೆ ಸಾಂಸ್ಕೃತಿಕ ಉತ್ಸವಗಳನ್ನು ಆಯೋಜಿಸುವುದು, ಸಾರ್ವಜನಿಕ ಕಚೇರಿ ಮತ್ತು ಶೌಚಾಲಯ,ಉದ್ಯಾನಗಳನ್ನು ಸ್ವಚ್ಛ ಮಾಡುವುದು ಹಾಗೂ ಅಮ್ಮನ ಹೆಸರಿನಲ್ಲಿ ಪ್ರತಿಯೊಬ್ಬರೂ ಒಂದು ಗಿಡ ನೆಡುವ ಕಾರ್ಯಕ್ರಮಗಳು ಸೇರಿವೆ. ಇದರ ಜೊತೆಗೆ ಪೌರ ಕಾರ್ಮಿಕರ, ಸಫಾಯಿ ಕರ್ಮಚಾರಿಗಳ ಆರೋಗ್ಯ ತಪಾಸಣೆಯೂ ಸೇರಿದೆ. ಅಕ್ಟೋಬರ್ 02 ರ ಗಾಂಧೀ ಜಯಂತಿ ದಿನದಂದು ಸ್ವಚ್ಛತಾ ದಿವಸ್ ನಡೆಯಲಿದೆ ಎಂದರು.

ಸೆಪ್ಟೆಂಬರ್ 15ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ರಾಜ್ಯ ಸರ್ಕಾರ ಹಮ್ಮಿಕೊಂಡಿರುವ ಬೃಹತ್ ಮಾನವ ಸರಪಳಿ ಕಾರ್ಯಕ್ರಮವನ್ನು ಸಂಪೂರ್ಣ ಯಶಸ್ವಿಗೊಳಿಸಲು ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ ಎಂದು ಪ್ರಜಾಪ್ರಭುತ್ವ ದಿನಾಚರಣೆ ಸಿದ್ಧತೆಗಳ ಕುರಿತು ಮಾಹಿತಿ ನೀಡಿದರು.
ರಾಜ್ಯ ಸರ್ಕಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಬೀದರ್ ನಿಂದ ಚಾಮರಾಜನಗರದವರೆಗೂ 2500 ಕಿ.ಮೀ ಉದ್ದದ ಮಾನವ ಸರಪಳಿ ನಿರ್ಮಿಸುವ ಮೂಲಕ ವಿಶಿಷ್ಟವಾಗಿ ಆಚರಿಸುತ್ತಿದೆ. ಸೆ.15 ರ ಭಾನುವಾರದಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ ಮಾನವ ಸರಪಳಿ ನಿರ್ಮಾಣವಾಗಲಿದ್ದು, 47.5 ಕಿ.ಮೀ ಉದ್ದದ ಮಾನವ ಸರಪಳಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಗಡಿಯ ಮೊಡಕು ಹೊಸಹಳ್ಳಿ ಯಿಂದ ಕೋಲಾರ ಜಿಲ್ಲೆಯ ಗಡಿಭಾಗ ನಮ್ಮ ಜಿಲ್ಲೆಯ ಹೆಚ್.ಕ್ರಾಸ್ ವರೆಗೆ ನಿರ್ಮಾಣವಾಗಲಿದೆ. ಈ ಬೃಹತ್ ಮಾನವ ಸರಳಿಯಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳು, ವಿವಿಧ ಸ್ವಯಂ ಸೇವಾ ಮತ್ತು ಸಂಘ ಸಂಸ್ಥೆಗಳು, ಸರ್ಕಾರಿ ಅಧಿಕಾರಿ ಮತ್ತು ಸಿಬ್ಬಂದಿ ಸೇರಿದಂತೆ ಜಿಲ್ಲೆಯ ಎಲ್ಲಾ ಸಾರ್ವಜನಿಕರು ಸಕ್ರಿಯವಾಗಿ ಕೈ ಜೋಡಿಸಲಿದ್ದಾರೆ. ಈಗಾಗಲೇ ಹಲವು ಸಭೆಗಳನ್ನು ನಡೆಸಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಪ್ರತಿ ಒಂದು ಕಿ.ಮೀ ಗೆ ಒಂದರಂತೆ ಸಸಿ ನೆಟ್ಟು ನೀರೆಯಯಲು ಉದ್ದೇಶಿಸಲಾಗಿದೆ. ಈ ನಿಟ್ಟಿನಲ್ಲಿ ಅರಣ್ಯ ಇಲಾಖೆಯೂ ಸಿದ್ಧತೆಗಳನ್ನು ಮಾಡಿಕೊಂಡಿದೆ ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದರೆಡ್ಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಎಂ.ಜುಂಜಣ್ಣ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಸಮಿತಿ ಸದಸ್ಯರ ನೇಮಕಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನಲ್ಲಿ ತಾಲ್ಲೂಕು ಅಲೆಮಾರಿ, ಅರೆಅಲೆಮಾರಿ ಜನಾಂಗದವರ ಸಲಹಾ ಸಮಿತಿ/ಪ್ರಗತಿ ಪರಿಶೀಲನಾ ಸಮಿತಿಗೆ ತಾಲ್ಲೂಕು ಮಟ್ಟದಲ್ಲಿ ಒಬ್ಬರು ಅಲೆಮಾರಿ, ಅರೆಅಲೆಮಾರಿ ಅಭಿವೃದ್ಧಿ ಸಂಸ್ಥೆಯ ಪ್ರತಿನಿಧಿಯನ್ನು ನೇಮಕ ಮಾಡಬೇಕಾಗಿದ್ದು, ಈ ಸಂಬಂಧ ತಾಲ್ಲೂಕು ಮಟ್ಟದಲ್ಲಿ ಅಲೆಮಾರಿ, ಅರೆಅಲೆಮಾರಿ ಜನಾಂಗದ ಪ್ರತಿನಿಧಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.
ಆಸಕ್ತಿಯುಳ್ಳ ಪ್ರತಿನಿಧಿಗಳು, ಸಮುದಾಯದ ಮುಖಂಡರು ತಮ್ಮ ಜಾತಿ ಪ್ರಮಾಣ ಪತ್ರ, ಸಮುದಾಯಗಳಿಗೆ ಸೇವೆ ಸಲ್ಲಿಸಿರುವ ಸೇವಾ ಅನುಭವ ಪ್ರಮಾಣ ಪತ್ರ ಹಾಗೂ ಸಂಘ ಸಂಸ್ಥೆಗಳಲ್ಲಿ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ದೃಢೀಕರಣ ದಾಖಲಾತಿಗಳನ್ನು ಅರ್ಜಿಯೊಂದಿಗೆ ಸಲ್ಲಿಸುವುದು. ಸದರಿ ಅರ್ಜಿಗಳನ್ನು ಸೆಪ್ಟೆಂಬರ್ 21 ರೊಳಗೆ ಗೌರಿಬಿದನೂರು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದು.
ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಡಿ.ದೇವರಾಜ ಅರಸು ಭವನ, ಗ್ರಾಮಾಂತರ ಪೊಲೀಸ್ ಠಾಣೆ ಹಿಂಭಾಗ, ಮಾದನಹಳ್ಳಿ ಕೆರೆ ಅಂಗಳ, ಗೌರಿಬಿದನೂರು ತಾಲ್ಲೂಕು, ದೂ.ಸಂ:08155-284016, 9741043703 ಗೆ ಸಂಪರ್ಕಿಸಬಹುದೆಂದು ಗೌರಿಬಿದನೂರು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರೋತ್ಸಾಹ ಧನಕ್ಕಾಗಿ ಅರ್ಜಿ

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿನಲ್ಲಿ ಪರೀಕ್ಷೆಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ದ್ವಿತೀಯ ಪಿಯುಸಿ/ 3 ವರ್ಷದ ಡಿಪ್ಲೊಮಾ ಪಾಲಿಟೆಕ್ನಿಕ್ ವಿದ್ಯಾರ್ಥಿಗಳಿಗೆ -20,000/-, ಪದವಿ ವಿದ್ಯಾರ್ಥಿಗಳಿಗೆ-25,000/-, ಸ್ನಾತಕೋತ್ತರ ಪದವಿಯಲ್ಲಿ(ಎಂ.ಎ, ಎಂ.ಎಸ್ಸಿ, ಎಂ.ಕಾಂ, ಎಂ.ಬಿ.ಎ, ಎಂ.ಸಿ.ಎ, ಎಂ.ಎಫ್.ಎ ಇತರೆ) ವಿದ್ಯಾರ್ಥಿಗಳಿಗೆ-30,000/-, ಅಗ್ರಿಕಲ್ಚರ್/ ಎಂಜಿನಿಯರಿಂಗ್/ಮೆಡಿಸಿನ್/ವೆಟರ್ನರಿ ವಿದ್ಯಾರ್ಥಿಗಳಿಗೆ-35,000/- ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರೋತ್ಸಾಹ ಧನ ಮಂಜೂರು ಮಾಡಲಾಗುತ್ತದೆ. ಅರ್ಹ ವಿದ್ಯಾರ್ಥಿಗಳು ಇಲಾಖಾ ವೆಬ್‌ಸೈಟ್ www.twd.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸಲು 2024-25ನೇ ಸಾಲಿನಲ್ಲಿ ಅವಕಾಶ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳು ಅರ್ಜಿಯನ್ನು ಸಲ್ಲಿಸಿ, ಮತ್ತು ಸಲ್ಲಿಸಿದ ಅರ್ಜಿಯನ್ನು ಕಡ್ಡಾಯವಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಕೊಠಡಿ ಸಂಖ್ಯೆ:205,2ನೇ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ ಗ್ರಾಮ, ದೇವನಹಳ್ಳಿ ತಾಲ್ಲೂಕು ಈ ಕಛೇರಿಗೆ ಪಿ.ಯು.ಸಿ ಹಾಗೂ ನಂತರದ ಕೋರ್ಸ್ಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ದೃಡೀಕೃತ ದಾಖಲಾತಿಗಳನ್ನು ಸಲ್ಲಿಸುವುದು. ಅರ್ಜಿ ಸಲ್ಲಿಸಲು ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಪ್ರತಿ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಹಿಂದಿನ ತರಗತಿಯ ವ್ಯಾಸಂಗ ಪ್ರಮಾಣ ಪತ್ರಗಳು/ ಅಂಕಪಟ್ಟಿಗಳು, ಚಾಲ್ತಿಯಲ್ಲಿರುವ ಮತ್ತು ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಯ ವಿವರ ಇವುಗಳು ಕಡ್ಡಾಯವಾಗಿ ಸಲ್ಲಿಸಬೇಕಾಗುವ ದಾಖಲೆಗಳಾಗಿವೆ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-29787448 ಅನ್ನು ಸಂಪರ್ಕಿಸುವುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿನಲ್ಲಿ ಕೃಷಿ ಪಂಡಿತ ಪ್ರಶಸ್ತಿ ಯೋಜನೆ ಕಾರ್ಯಕ್ರಮದಲ್ಲಿ ಬೆಳೆ ಸ್ಪರ್ಧೆಗೆ ಆಸಕ್ತ ಪುರುಷ ರೈತರು ಹಾಗೂ ರೈತ ಮಹಿಳೆಯರನ್ನು ಪ್ರೋತ್ಸಾಹಿಸುವ ಸಲುವಾಗಿ ಹಾಗೂ ಕೃಷಿಯತ್ತ ಆಕರ್ಷಿಸಲು ಪ್ರತ್ಯೇಕವಾಗಿ ಕೃಷಿ ಪಂಡಿತ ಪ್ರಶಸ್ತಿ ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಜಿ ಸಲ್ಲಿಸಲು ಮುಂಗಾರು ಹಂಗಾಮಿಗೆ 30ನೇ ಸೆಪ್ಟೆಂಬರ್ 2024ರಂದು ಕೊನೆ ದಿನವಾಗಿರುತ್ತದೆ. ಕೃಷಿ ಪಂಡಿತ ಪ್ರಶಸ್ತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಆಸಕ್ತ ರೈತರು ಹಾಗೂ ರೈತ ಮಹಿಳೆಯರು ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರಗಳು, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಲು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುರಿ ಸಾಕಾಣಿಕೆಗೆ ತರಬೇತಿ

**ಬೆಂಗಳೂರು ಗ್ರಾಮಾಂತರ:** ಶ್ರೀಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್ ಸಹಯೋಗದಲ್ಲಿ ನಡೆಸುತ್ತಿರುವರುಡ್ ಸೆಟ್ ಸಂಸ್ಥೆಯ ವತಿಯಿಂದಹಮ್ಮಿಕೊಂಡಿರುವ 10ದಿನಗಳಕುರಿ ಸಾಕಾಣಿಕೆಉಚಿತ ತರಬೇತಿಯುಬರುವ17 ಸೆಪ್ಟಂಬರ್2024 ರಿಂದ ಆಯೋಜಿಸಲಾಗಿದ್ದು,ಬೆಂಗಳೂರು ಗ್ರಾಮಾಂತರ,ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿಯುವಕ, ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.
ಆಸಕ್ತ18ರಿಂದ45ವರ್ಷ ವಯೋಮಾನದವರಾಗಿದ್ದು,ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಗ್ರಾಮೀಣ ಪ್ರದೇಶದಆಧಾರ್ ಕಾರ್ಡ್‌ಹಾಗೂಬಿಪಿಎಲ್ ಕಾಡ್ ್ಹೊಂದಿರುವವರಿಗೆಆದ್ಯತೆ ನೀಡಲಾಗುವುದು. ತರಬೇತಿಯು ವಸತಿಯುತವಾಗಿದ್ದು, ತರಬೇತಿಯಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರುಅರ್ಜಿ ಸಲ್ಲಿಸಲು ಹಾಗೂಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ,ಅರಿಶಿನಕುಂಟೆ,ನೆಲಮಂಗಲ ತಾಲ್ಲೂಕು,ಬೆಂಗಳೂರು ಗ್ರಾಮಾಂತರ ಜಿಲ್ಲೆ,ಮೊಬೈಲ್ ಸಂಖ್ಯೆ8105526792ಅನ್ನು ಸಂಪರ್ಕಿಸಬಹುದಾಗಿದೆ ಎಂದುರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದರವಿಕುಮಾರ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಮಂಡ್ಯ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024-25 ನೇ ಸಾಲಿನಲ್ಲಿ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಐ.ಎ.ಎಸ್?ಕೆ.ಎ.ಎಸ್ ಪರೀಕ್ಷಾ ಪೂರ್ವ ತರಬೇತಿ ರಾಜ್ಯಧ್ಯಂತ ಅಲ್ಪಸಂಖ್ಯಾತರ ಸಮುದಾಯದ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿಸಲು ಅಭ್ಯರ್ಥಿಗಳ ಸುರಕ್ಷತಾ ಹಿತೈದೃಷ್ಟಿಯಿಂದ ಕಲಿಕಾ ಪೂರಕ ವಾತಾವರಣ ಒದಗಿಸಲು ಉತ್ತಮ ಫಲಿತಾಂಶ ಮತ್ತು ಸರ್ಕಾರಿ ಉದ್ಯೋಗ ಪಡೆದುಕೊಳ್ಳಲು ಅನುಕೂಲವಾಗುವಂತೆ ಬೆಂಗಳೂರು ನಗರದಲ್ಲಿ ನಿರ್ಮಿಸಿರುವ ಹಜ್ ಭವನದಲ್ಲಿ 10 ತಿಂಗಳ ವಸತಿ ಸಹಿತ ಐ.ಎ.ಎಸ್-ಕೆ.ಎ.ಎಸ್ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ನೀಡಲು ಆನ್ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಅರ್ಜಿಯನ್ನು ಸೆಪ್ಟೆಂಬರ್ 20 ರೊಳಗೆ https://sevasindhu.karnataka.gov.in ವೆಬ್ ಸೈಟ್ ಮೂಲಕ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ದೂ.ಸಂ: 8277799990 https://dom.Karnataka.gov.in ವೆಬ್ ಸೈಟ್ ಅಥವಾ ಜಿಲ್ಲಾ ಅಲ್ಪಸಂಖ್ಯಾತರ ಅಧಿಕಾರಿಗಳ ಕಛೇರಿ ದೂ.ಸಂ: 082322972240 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಹುಲ್ ಗಾಂಧಿ ವಿರುದ್ಧ ಘೋಷಣೆ

**ಚಾಮರಾಜನಗರ:** ಮೀಸಲಾತಿ ರದ್ದುಪಡಿಸುವ ಕುರಿತು ರಾಹುಲ್ ಗಾಂಧಿ ಹೇಳಿಕೆ ಖಂಡಿಸಿ ಜಿಲ್ಲಾಬಿಜೆಪಿ ಘಟಕದ ವತಿಯಿಂದ ಚಾಮರಾಜನಗರದಲ್ಲಿ ಪ್ರತಿಭಟನೆನಡೆಯಿತು. ಚಾಮರಾಜನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗಜಮಾಯಿಸಿದ ಪ್ರತಿಭಟನಾಕಾರರು ಅಲ್ಲಿಂದ ಮೆರವಣಿಗೆಯಲ್ಲಿಪಚ್ಚಪ್ಪ ವೃತ್ತಕ್ಕೆ ತೆರಳಿ ಕೆಲ ಕಾಲ ಮಾನವ ಸರಪಳಿ ನಿರ್ಮಿಸಿರಸ್ತೆ ತಡೆದು ಪ್ರತಿಭಟನೆ ನಡೆಸಿ, ರಾಹುಲ್ ಗಾಂಧಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಮಾತನಾಡಿ, ಅಮೇರಿಕಾ ಪ್ರವಾಸದಲ್ಲಿರುವ ರಾಹುಲ್ ಗಾಂಧಿ ಅವರು ಜಾರ್ಜ್ ಟೌನ್ ವಿಶ್ವ ವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳೊಂದಿಗೆ ನಡೆಸಿರುವ ಸಂವಾದದಲ್ಲಿ ಭಾರತದಲ್ಲಿರುವ ಮೀಸಲಾತಿ ವಿಚಾರವನ್ನು ಪ್ರಸ್ತಾಪ ಮಾಡಿದ್ದಾರೆ. ಅಲ್ಲದೇ ಕಾಂಗ್ರೆಸ್ ಪಕ್ಷವೇ ಮೀಸಲಾತಿಯನ್ನು ತೆಗೆಯಲು ಸಾಧ್ಯ ಎಂಬ ಹೇಳಿಕೆಯನ್ನು ನೀಡಿರುವುದು ದುರದೃಷ್ಟಕರ ಎಂದು ಕಿಡಿಕಾರಿದರು. ನಿಜವಾದ ಮೀಸಲಾತಿ ಹಾಗೂ ಸಂವಿಧಾನ ವಿರೋಧಿಗಳು ಕಾಂಗ್ರೆಸ್ ನವರು ಎಂಬುವುದು ಅಮೇರಿಕಾದಲ್ಲಿ ರಾಹುಲ್ ಗಾಂಧಿನೀಡಿರುವ ಹೇಳಿಕೆಯಿಂದ ಸಾಬೀತಾಗಿದೆ. ರಾಹುಲ್ ಗಾಂಧಿಅವರ ತಾತ ಜವಾಹಲ್ ನೆಹರು ಸಹ ಇದೇ ಹೇಳಿಕೆಯನ್ನುನೀಡಿದ್ದರು. ಕಾಂಗ್ರೆಸ್ ಹಾಗೂ ನೆಹರು ಕುಟುಂಬ ಅಂಬೇಡ್ಕರ್ ಹಾಗೂ ಸಂವಿಧಾನ ವಿರೋಧಿಯಾಗಿದ್ದು, ಮೀಸಲಾತಿನೀಡುತ್ತಿರುವುದು ಕಾಂಗ್ರೆಸ್‌ಗೆ ಇಷ್ಟವಿಲ್ಲ ಎಂದು ದೂರಿದರು. ಕಾಂಗ್ರೆಸ್ ಪಕ್ಷ ಸ್ವಾತಂತ್ರ್ಯ ಪೂರ್ವ ಹಾಗೂ ನಂತರವು ಸಹಮೀಸಲಾತಿ ವಿರುದ್ಧ ವಾಗಿತ್ತು. ಮಹಾತ್ಮ ಗಾಂಧೀಜಿ ಹಾಗೂಜವಾಹಲ್ ನೆಹರು ಅವರು ಮೀಸಲಾತಿ



ನೀಡು ವುದನ್ನು ವಿರೋಧಿ ಸುತ್ತಿದ್ದರು. ಇದು ಅಂಬೇಡ್ಕರ್ ಅವರ ಆಶಯದ ವಿರುದ್ಧವಾಗಿದೆ ಎಂದರು. ಬಿಜೆಪಿ ಹಿಂದುಳಿತ ಮೋರ್ಚಾ ಅಧ್ಯಕ್ಷ ಬಿ.ವೆಂಕಟೇಶ್, ಪ್ರಕಾಶ್, ಜಿಲ್ಲಾ ವಕ್ತಾರ ಕಾಡಹಳ್ಳಿ ಕುಮಾರ್, ಸಹ ವಕ್ತಾರ ಮಂಜುನಾಥ್, ಮುಖಂಡರಾದ ಅರಕಲವಾಡಿ ನಾಗೇಂದ್ರ, ವೆಂಕಟೇಶ್, ಅಗರ ರಾಜು, ಸುಂದ್ರಪ್ಪ, ಭಾನುಪ್ರಕಾಶ್, ಶಿವುವಿರಾಟ್, ವೀರೇಂದ್ರ, ಆನಂದ್ ಭಗೀರಥ, ಕುಲಗಾಣ ಶಾಂತಮೂರ್ತಿ, ರಾಜಶೇಖರ ಮೂರ್ತಿ ಸೇರಿದಂತೆ ಇತರರು ಪ್ರತಿಭಟನೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡಾಕೂಡು ಭಾಗವಹಿಸಿದ್ದರು.




**ಪ್ರೊ.ಬಿ.ಎಸ್.ಪಂಡಿತ್ ಸ್ಥಾಪಿತ ಕೆ.ಆರ್.ಎಸ್. ಮುಖ್ಯ ರಸ್ತೆಯಲ್ಲಿರುವ ಜಿಎಸ್‌ಎಸ್‌ಎಸ್ ಸಿಂಹ ಸುಬ್ಬ ಮಹಾಲಕ್ಷ್ಮಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಇತ್ತೀಚೆಗೆ ಸೈಬರ್ ಅಪರಾಧಗಳ ಕುರಿತು ಅನುಪಮಾ ಬಿ.ಪಂಡಿತ್ ಇವರ ಮಾರ್ಗದರ್ಶನದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗಿತ್ತು. ಚಿತ್ರದಲ್ಲಿ ಮೈಸೂರು ಕ್ರೈಮ್ ವಿಭಾಗದ ಎಸಿಪಿ ಸ್ನೇಹರಾಜ್, ಪಿಎಸ್‌ಐ ಅನಿಲ್‌ಕುಮಾರ್, ಕಾಲೇಜಿನ ಪ್ರಾಂಶುಪಾಲ ಡಾ.ಟಿ.ಎಸ್.ರಾಕೇಶ್, ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ಪುನೀತ್‌ಕುಮಾರ್ ಅವರನ್ನು ಕಾಣಬಹುದು.**

## ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಅನಿಸಿಕೆ

# ಪ್ರತಿ ಕುಟುಂಬಕ್ಕೆ ಉದ್ಯೋಗ ಸಿಗಲಿ

**ಬೆಂಗಳೂರು ಗ್ರಾಮಾಂತರ:** ಜಿಲ್ಲೆಯಲ್ಲಿ ಕಾಲಕಾಲಕ್ಕೆ ಉದ್ಯೋಗ ಮೇಳವನ್ನು ಆಯೋಜಿಸುವ ಮೂಲಕ ಜಿಲ್ಲೆಯ ಪ್ರತಿಯೊಂದು ಕುಟುಂಬದ ಒಬ್ಬರಿಗೆ ಉದ್ಯೋಗ ಸಿಗುವಂತೆ ಮಾಡುವುದು ನನ್ನ ಗುರಿ ಎಂದು ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಚ್ ಮುನಿಯಪ್ಪ ಅವರು ಹೇಳಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕೌಶಲ್ಯ ಮಿಷನ್, ಜಿಲ್ಲಾ ಕೈಗಾರಿಕೆ ಕೇಂದ್ರ, ಸಹಯೋಗದಲ್ಲಿ ದೇವನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 101 ಗ್ರಾಮ ಪಂಚಾಯಿತಿಗಳಿದ್ದು, ಸುಮಾರು 2 ಲಕ್ಷ ಕುಟುಂಬಗಳಿವೆ. ಪ್ರತಿ ಕುಟುಂಬದ ಒಬ್ಬರಿಗೆ ಉದ್ಯೋಗ ಕಲ್ಪಿಸಿಕೊಡುವ ಗುರಿ ಹೊಂದಲಾಗಿದೆ. ಈ ನಿಟ್ಟಿನಲ್ಲಿ ಉದ್ಯೋಗ ಮೇಳ ಅಯೋಜಿಸಲಾಗಿದ್ದು, ಇಂದು ಆರಂಭ, ಮುಂದಿನ ದಿನಗಳಲ್ಲಿ ಕಾಲಕಾಲಕ್ಕೆ ಉದ್ಯೋಗ ಮೇಳ ಆಯೋಜಿಸಿ ಮನೆ ಮನೆಗೆ ಉದ್ಯೋಗ ಕಲ್ಪಿಸಿಕೊಡಲಾಗುವುದು ಎಂದು ಸಚಿವರು ಹೇಳಿದರು.

ಕಂಪನಿಗಳು ಕೂಡ ಉದ್ಯೋಗ ನೀಡುವ ನಿಟ್ಟಿನಲ್ಲಿ ಜಿಲ್ಲಾಡಳಿತದ ಜೊತೆ ಕೈ ಜೋಡಿಸಬೇಕು. ಕೌಶಲ್ಯ ಆಧಾರಿತ ಅಭ್ಯರ್ಥಿಗಳ ಅವಶ್ಯಕತೆ ಇದ್ದಲ್ಲಿ ಕಂಪನಿಗಳು ಮಾಹಿತಿಯನ್ನು ಸಂಬಂಧಪಟ್ಟ ಜಿಲ್ಲಾಡಳಿತಕ್ಕೆ ನೀಡಿದರೆ ಕಂಪನಿಗಳ ಬೇಡಿಕೆಗೆ ಅನುಗುಣವಾಗಿ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ಇಲಾಖೆಯಿಂದ ಕೌಶಲ್ಯ ತರಬೇತಿ ಕಲ್ಪಿಸಿಕೊಡಲಾಗುವುದು ಎಂದರು.

ಕೈಗಾರಿಕಾ ವಲಯದ ಅಭಿವೃದ್ಧಿಯಿಂದ ದೇಶದ ಪ್ರಗತಿ ಸಾಧ್ಯ. ಈಗಾಗಲೇ ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಮನೆ ಮನೆಯ ಉದ್ಯೋಗಿಗಳ ಸರ್ವೆ ನಡೆಸಲಾಗುತ್ತಿದ್ದು, ಉದ್ಯೋಗ ಇಲ್ಲದ ಮನೆಗೆ ಒಂದು ಉದ್ಯೋಗ ಕೊಡಿಸುವ ಕೆಲಸ ಆರಂಭಗೊಂಡಿದೆ ಎಂದು ಸಚಿವರು ಹೇಳಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್ ಅವರು ಮಾತನಾಡಿ, ಪ್ರಧಾನಮಂತ್ರಿಯವರು 10 ವರ್ಷಗಳಲ್ಲಿ 50 ಲಕ್ಷ ಕೋಟಿ ರೂ. ಮೂಲಸೌಕರ್ಯಕ್ಕೆ ಅನುದಾನ ನೀಡಿ, ಉದ್ಯಮ ಕ್ಷೇತ್ರದಲ್ಲಿ ಅಭಿವೃದ್ಧಿ ತಂದಿದ್ದಾರೆ. ಯುವಕರು ಕೇವಲ ಡಿಗ್ರಿ ಪಡೆದರೆ ಪ್ರಯೋಜನವಿಲ್ಲ, ಕೌಶಲ್ಯ ಭರಿತ ಶಿಕ್ಷಣ ಪಡೆದ್ರೆ, ತಕ್ಷಣವೇ ಸಾಕಷ್ಟು ಉದ್ಯೋಗ ಪಡೆದುಕೊಳ್ಳಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಸ್ಕಿಲ್ ಇಂಡಿಯಾ, ಪಿ.ಎಮ್ ವಿಶ್ವಕರ್ಮ ಸೇರಿದಂತೆ ಅನೇಕ ಜನಪರ ಯೋಜನೆ ಜಾರಿಗೆ ತಂದು ಕೌಶಲ್ಯ ತರಬೇತಿ ನೀಡಿ, ಉದ್ಯೋಗ ಕಲ್ಪಿಸಿಕೊಡುತ್ತಿದೆ ಎಂದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಂಟಿಯಾಗಿ ತಯಾರಿಕಾ ಕೈಗಾರಿಕೆಗಳು ಹೆಚ್ಚು ಸ್ಥಾಪನೆಯಾಗುವಂತೆ ಕ್ರಮ ವಹಿಸಿ, ಯುವಕರಿಗೆ ಉದ್ಯೋಗ ಕೊಡಿಸುವ ಗ್ಯಾರಂಟಿಗೆ ಒತ್ತು ನೀಡುವ ಕೆಲಸ ಆಗಬೇಕಿದೆ ಎಂದು ಹೇಳಿದರು.

ಕಿಯೋನಿಕ್ಸ್ ಅಧ್ಯಕ್ಷರು ಹಾಗೂ ಹೊಸಕೋಟೆ ವಿಧಾನಸಭಾ ಕ್ಷೇತ್ರ ಶಾಸಕರಾದ ಶರತ್ ಕುಮಾರ್ ಬಚ್ಚೇಗೌಡ ಅವರು ಮಾತನಾಡಿ, ಯುವಕರಿಗೆ ವಿದ್ಯಾಭ್ಯಾಸವಷ್ಟೇ ನೀಡಿದರೇ ಸಾಕಾಗದು, ಅವರ ಶಿಕ್ಷಣಕ್ಕೆ ತಕ್ಕ ಉದ್ಯೋಗ ಕೊಡಿಸಿ, ಕುಟುಂಬದ ಆರ್ಥಿಕ ಸ್ಥಿತಿಗತಿ ಸುಧಾರಿಸುವ ಮೂಲಕ ಸಬಲರಾಗಿಸಬೇಕೆನ್ನುವ ಸದುದ್ದೇಶದಿಂದ ಜಿಲ್ಲೆಯಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜನೆ ಮಾಡಿದೆ. ಸುಮಾರು 26 ಸಾವಿರ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗ ನೀಡಲು 200 ಕ್ಕೂ ಅಧಿಕ ಪ್ರತಿಷ್ಠಿತ ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿವೆ. ಜಿಲ್ಲೆ ವ್ಯಾಪ್ತಿಯಲ್ಲಿ ಅಂತರಾಷ್ಟ್ರೀಯ ಉದ್ಯಮಿಗಳಿದ್ದು, ನಿರುದ್ಯೋಗಿಗಳಿಗೆ ಸಾಕಷ್ಟು ಉದ್ಯೋಗವನ್ನು ನೀಡುತ್ತಾ ಸಾವಿರಾರು ಕುಟುಂಬಗಳಿಗೆ ನೆರವಾಗಲಿದ್ದಾರೆ. ರಾಜ್ಯ ಸರ್ಕಾರ ಯುವಕರ ಅಭಿವೃದ್ಧಿಗಾಗಿ 100 ಕೋಟಿ ರೂ. ಅನುದಾನವನ್ನು ಮೀಸಲು ಇಟ್ಟಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರ ಜಂಟಿಯಾಗಿ ಕೆಲಸ ಮಾಡಿದ್ರೇ ಎಲೆಕ್ಟ್ರಾನಿಕ್ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಸಾಧಿಸಬಹುದಾಗಿದೆ ಎಂದು ಹೇಳಿದರು.

ಸಭೆಯಲ್ಲಿ ದೊಡ್ಡಬಳ್ಳಾಪುರ ಶಾಸಕರಾದ ಧೀರಜ ಮುನಿರಾಜು, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಅಧ್ಯಕ್ಷ ಶಾಂತಕುಮಾರ್, ಗ್ಯಾರಂಟಿ ಅನುಷ್ಠಾನಗಳ ಜಿಲ್ಲಾಧ್ಯಕ್ಷ ರಾಜಣ್ಣ, ಗ್ಯಾರಂಟಿ ಅನುಷ್ಠಾನಗಳ ದೇವನಹಳ್ಳಿ ತಾಲೂಕು ಅಧ್ಯಕ್ಷ ಜಗನ್ನಾಥ, ದೊಡ್ಡಬಳ್ಳಾಪುರ ಮಾಜಿ ಶಾಸಕರಾದ ವೆಂಕಟರಮಣಯ್ಯ, ಅಪರ ಜಿಲ್ಲಾಧಿಕಾರಿ ಸುಮಾ, ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿ ದುರ್ಗಾಶ್ರೀ, ಜಿ.ಪಂ ಉಪಕಾರ್ಯದರ್ಶಿ ಟಿ.ಕೆ ರಮೇಶ್, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಜಂಟಿ ನಿರ್ದೇಶಕರಾದ ನರೇಂದ್ರ ಬಾಬು, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಗನ್ನಾಥ, ದೇವನಹಳ್ಳಿ ತಹಶೀಲ್ದಾರ್ ಬಾಲಕೃಷ್ಣ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಾಥಗೌಡ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಪ್ರತಿಷ್ಠಿತ ಕಂಪನಿಗಳ ಮುಖ್ಯಸ್ಥರು, ಉದ್ಯೋಗಾಕಾಂಕ್ಷಿಗಳು ಉಪಸ್ಥಿತರಿದ್ದರು.

# ಚಿಕ್ಕಬಳ್ಳಾಪುರದಲ್ಲಿ 17ಕ್ಕೆ ವಿಶ್ವಕರ್ಮ ಜಯಂತಿ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವಕರ್ಮ ಜಯಂತಿಯನ್ನು ಸೆಪ್ಟೆಂಬರ್ 17 ರಂದು ಬೆಳಿಗ್ಗೆ 10:30 ಗಂಟೆಗೆ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿಯ 2ನೇ ಮಹಡಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ರವರು ನೆರವೇರಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ.ಇ. ಪ್ರದೀಪ್ ಈಶ್ವರ್ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ್ ಎಸ್ ತಂಗಡಗಿ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ. ಮಲ್ಲೇಶ್ ಬಾಬು, ಶಾಸಕರಾದ ಎಸ್.ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ವಿಧಾನ ಪರಿಷತ್ತಿನ ಶಾಸಕರಾದ ಚಿದಾನಂದ ಎಂ. ಗೌಡ, ಎಂ.ಎಲ್. ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ್, ಚಿಕ್ಕಬಳ್ಳಾಪು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸರ್ಕಾರದ ಕಾರ್ಯದರ್ಶಿಗಳಾದ ಡಾ. ಎಂ.ಎನ್. ಅಜಯ್ ನಾಗಭೂಷಣ್, ಮೂಲ ಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಹಾಗೂ ಸರ್ಕಾರದ ಕಾರ್ಯದರ್ಶಿಗಳು, ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಎನ್. ಮಂಜುಳ ರವರು ಭಾಗವಹಿಸುವರು. ಆಹ್ವಾನಿತರಾಗಿ ವಿಶ್ವಕರ್ಮ ಉತ್ಸವ ಸಮಿತಿ ಅಧ್ಯಕ್ಷ ಸಿ.ಬಿ. ನವೀನ್ ಕುಮಾರ್, ವಿಶೇಷ ಉಪನ್ಯಾಸಕರಾಗಿ ಶಿಡ್ಲಘಟ್ಟ ಅಕ್ಷರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರದ ಬಿ.ವಿ. ಪ್ರಕಾಶ್ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ವಿಶ್ವಕರ್ಮ ಉತ್ಸವ ಸಮಿತಿಯ ಎಲ್ಲಾ ಪದಾಧಿಕಾರಿಗಳು ಮತ್ತು ಎಲ್ಲಾ ಸಮುದಾಯಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು ಮತ್ತು ಸಮಸ್ತ ನಾಗರೀಕರು ಭಾಗವಹಿಸುವರು.

# ಲಕ್ಷ್ಮೀಪುರದಲ್ಲಿ ಆಂಜನೇಯಸ್ವರೂಪ ದುರ್ಜಾ ಗಣಪ

**ಬೇಲೂರು:** ಪಟ್ಟಣದ ಲಕ್ಷ್ಮೀಪುರ ಬಡಾವಣೆ ಯಲ್ಲಿರುವ ಶ್ರೀರಾಮಹನುಮ ಭಕ್ತ ಸಮಿತಿಯಿಂದ ಪರಿಸರ ಪ್ರೇಮಿ ದುರ್ಜಾ ಗಣಪತಿಯನ್ನು ಪ್ರತಿಷ್ಠಾಪಿಸಲಾಗಿದೆ. ಈ ಗಣಪತಿಯು ಆಂಜನೇಯ ಸ್ವರೂಪದಲ್ಲಿದೆ. ಗಣಪತಿ ಪ್ರತಿಷ್ಠಾಪನೆ ಅಂಗವಾಗಿ ಶುಕ್ರವಾರ ಮತ್ತು ಶನಿವಾರ ಬಡಾವಣೆ ನಿವಾಸಿಗಳಿಗೆ ವಿವಿಧ ಆಟೋಟ ಸ್ಪರ್ಧೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ಸಮಿತಿ ಪ್ರಮುಖರು ತಿಳಿಸಿದ್ದಾರೆ.



# ಸಾಕ್ಷರತೆಯು ಅಭಿವೃದ್ಧಿಶೀಲ ರಾಷ್ಟ್ರದ ಬೆನ್ನೆಲುಬು

**ಚಿಕ್ಕಬಳ್ಳಾಪುರ:** ಸರ್ಕಾರ, ಸಂಸ್ಥೆಗಳು, ವೈಯಕ್ತಿಕ ಪ್ರಯತ್ನಗಳು ದ್ವಿಗುಣಗೊಂಡು ಸಂಪೂರ್ಣ ಸಾಕ್ಷರತೆ ಸಾಧಿಸಲು ಪ್ರಯತ್ನಿಸಬೇಕಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಲೋಕಶಿಕ್ಷಣ ಸಮಿತಿ, ಡಿಎಸ್‌ಇಆರ್‌ಟಿ ಲೋಕಶಿಕ್ಷಣ ವಿಭಾಗಗಳ ವತಿಯಿಂದ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯದ ಸಭಾಂಗಣದಲ್ಲಿ ಗುರುವಾರ ನಡೆದ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಆರ್ಥಿಕ ವ್ಯವಹಾರದ ಶಿಸ್ತು, ಮಹಿಳಾ ಸಬಲೀಕರಣಕ್ಕೆ ಸಾಕ್ಷರತೆ ಅಗತ್ಯವಿದೆ. ಆರೋಗ್ಯ, ಲಿಂಗಸಮಾನತೆ, ಶಾಂತಿ, ಸುಸ್ಥಿರ ಅಭಿವೃದ್ಧಿಗಾಗಿ ಎಲ್ಲಾ ವಯಸ್ಕರು, ಯುವಕರು, ಹೆಣ್ಣು ಮತ್ತು ಗಂಡು ಮೂಲಭೂತ ಸಾಕ್ಷರತೆ ಮತ್ತು ಸಂಖ್ಯಾಜ್ಞಾನ ಪಡೆಯಬೇಕಾದ ಅಗತ್ಯವಿದೆ. ಪುರುಷ ಮತ್ತು ಮಹಿಳಾ ಸಾಕ್ಷರತೆಯ ಪ್ರಮಾಣದ ನಡುವಿನ ಅಂತರವನ್ನು ಕಡಿಮೆಗೊಳಿಸಬೇಕಿದೆ. ಪಂಚಾಯಿತಿ ಪ್ರತಿನಿಧಿಗಳು ಸಾಕ್ಷರರಾಗಬೇಕಲ್ಲದೇ ಹಿಂದುಳಿದ ತಾಲ್ಲೂಕುಗಳಲ್ಲಿ ಆಯ್ದ ಪಂಚಾಯಿತಿಗಳನ್ನು ಸಂಪೂರ್ಣ ಸಾಕ್ಷರ ಪಂಚಾಯಿತಿಗಳನ್ನಾಗಿ ಮಾಡಬೇಕು ಎಂದರು.

ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲ ಮುನಿಕೆಂಪೇಗೌಡ ಮಾತನಾಡಿ, 15 ವರ್ಷ ಮತ್ತು ಮೇಲ್ಪಟ್ಟ ಎಲ್ಲರಿಗೂ ವಿಮರ್ಶಾತ್ಮಕ ಜೀವನಕೌಶಲಗಳ ತರಬೇತಿ ನೀಡುವುದು, ಆರ್ಥಿಕ ಮತ್ತು ಕಾನೂನಿನ ಸಾಕ್ಷರತೆ ಡಿಜಿಟಲ್ ಸಾಕ್ಷರತೆ, ವಿಪತ್ತು ನಿರ್ವಹಣೆ, ವಾಣಿಜ್ಯ ಮತ್ತು ಆರೋಗ್ಯ ಸುರಕ್ಷತೆ. ಶಿಕ್ಷಣ ಮತ್ತು ಕುಟುಂಬಕಲ್ಯಾಣಗಳಿಗಾಗಿ ಸಾಕ್ಷರತೆ ಸಾಧಿಸಬೇಕಿದೆ ನವಸಾಕ್ಷರರಿಗೆ ಜೀವನಪರ್ಯಂತ ಕಲಿಕೆ ಮತ್ತು ಬಳಕೆಗೆ ಹೆಚ್ಚು ಆದ್ಯತೆ ನೀಡಲಾಗುವುದು ಎಂದರು

ಶಿಕ್ಷಕ ಎಚ್.ಎಸ್.ರುದ್ರೇಶಮೂರ್ತಿ ಮಾತನಾಡಿ, ದಕ್ಷಿಣ ಏಷ್ಯಾವು ಕಡಿಮೆ ಪ್ರಾದೇಶಿಕ ವಯಸ್ಕರ ಸಾಕ್ಷರತೆಯ ಪ್ರಮಾಣವನ್ನು ಹೊಂದಿದ್ದು, ಶಾಲೆ, ಗ್ರಂಥಾಲಯ, ಸಮುದಾಯಕೇಂದ್ರಗಳು, ಸ್ತ್ರೀಶಕ್ತಿ ಗುಂಪುಗಳ ಮೂಲಕಸಾಕ್ಷರತೆ ಸಾಧಿಸಬಹುದಾಗಿದೆ. ಶಾಲೆಯಿಂದ ಮಕ್ಕಳು ಹೊರಗುಳಿಯದಂತೆ ಕಾಯ್ದುಕೊಳ್ಳುವ ಪ್ರಯತ್ನ ನಡೆದಿದೆ. ಕರ್ನಾಟಕದಲ್ಲಿ ಹಿಂದಿನಿಂದಲೂ ನಡೆದ ಸಾಕ್ಷರತಾಕಾರ್ಯಕ್ರಮಗಳು ಮಾದರಿಯಾದುವು ಎಂದರು.

ಈ ವೇಳೆ ನವಸಾಕ್ಷರರಿಗೆ ಅಂಕಪಟ್ಟಿ ಮತ್ತು ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಸಾಕ್ಷರತಾ ಕಾರ್ಯಕ್ರಮಗಳ ಕುರಿತಾದ ಭಿತ್ತಿಪತ್ರ ಮತ್ತು ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು. ಸಾಕ್ಷರತಾ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ಬಿಸಿಎಂ ಇಲಾಖೆಯ ರಾಮಾನುಜಂ, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಆಂಜನೇಯ, ಶಿಡ್ಲಘಟ್ಟ ಬಿಆರ್‌ಸಿಯ ಲಕ್ಷ್ಮಿನಾರಾಯಣ್, ಬಾಗೇಪಲ್ಲಿಯ ಶಿವಪ್ಪ, ಸುರೇಶ್, ವಿವಿಧ ತಾಲ್ಲೂಕುಗಳ ಬಿಆರ್‌ಪಿಗಳು, ಸಿಆರ್‌ಪಿ, ಮುಖ್ಯಶಿಕ್ಷಕರು, ನವಸಾಕ್ಷರರು, ಸ್ವಯಂಸೇವಕರು ಕಾರ್ಯಕ್ರಮ ಸಹಾಯಕ ಎಂ.ಮನು ಮತ್ತಿತರರು ಇದ್ದರು.

# ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದ ಸ್ಪರ್ಧೆ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಚಿಕ್ಕಬಳ್ಳಾಪುರ ಜಿಲ್ಲೆಯ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದ ಆಯ್ಕೆ ಸ್ಪರ್ಧೆಗಳನ್ನು ಪುರುಷ ಮತ್ತು ಮಹಿಳೆಯರಿಗೆ ತಾಲ್ಲೂಕುವಾರು ಆಯೋಜಿಸಲಾಗುತ್ತಿದೆ. ಸಂಬಂಧಪಟ್ಟ ತಾಲೂಕಿನ ದೈಹಿಕ ಶಿಕ್ಷಣ ಪರಿವೀಕ್ಷಕರನ್ನು ಸಂಪರ್ಕಿಸಲು ಈ ಮೂಲಕ ತಿಳಿಸಲಾಗಿದೆ. ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದ ಸ್ಪರ್ಧೆಗಳನ್ನು ದಿನಾಂಕ: 24-09-24 ಮತ್ತು 25-09-24 ರಂದು ಸರ್. ಎಂ.ವಿ.ಜಿಲ್ಲಾ ಕ್ರೀಡಾಂಗಣ, ಚಿಕ್ಕಬಳ್ಳಾಪುರ ಇಲ್ಲಿ ಆಯೋಜಿಸಲಾಗುವುದು. ದಿನಾಂಕ:17.09.24 ಮತ್ತು 18.09.24 ರಂದು ಚಿಕ್ಕಬಳ್ಳಾಪುರ ತಾಲ್ಲೂಕಿನ ಸರ್. ಎಂ.ವಿ.ಜಿಲ್ಲಾ ಕ್ರೀಡಾಂಗಣದಲ್ಲಿ, ಅರುಣ್ ಕುಮಾರ್, ಶಿಕ್ಷಣ ಪರಿವೀಕ್ಷಕರು, ಚಿಕ್ಕಬಳ್ಳಾಪುರ ತಾಲ್ಲೂಕು. ಮೊ:9141117977 ದಿನಾಂಕ:17.09.24 ಮತ್ತು 18.09.24 ರಂದು ಗುಡಿಬಂಡೆ ತಾಲ್ಲೂಕಿನ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಮುರಳಿ, ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಗುಡಿಬಂಡೆ ತಾಲ್ಲೂಕು. ಮೊ:9945246569
ದಿನಾಂಕ:19.09.24 ಮತ್ತು 20.09.24 ರಂದು ಶಿಡ್ಲಘಟ್ಟ ತಾಲ್ಲೂಕಿನ ನೆಹರೂ ಕ್ರೀಡಾಂಗಣದಲ್ಲಿ, ದೇವೇಂದ್ರ.ವೈ. ಆರ್.ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಶಿಡ್ಲಘಟ್ಟ ತಾಲ್ಲೂಕು.ಮೊ:8951312521 ದಿನಾಂಕ:20.09.24 ಮತ್ತು 21.09.24 ರಂದು ಬಾಗೇಪಲ್ಲಿ ತಾಲ್ಲೂಕು ಕ್ರೀಡಾಂಗಣದಲ್ಲಿ ರಂಗನಾಥ್ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಬಾಗೇಪಲ್ಲಿ ತಾಲ್ಲೂಕು. ಮೊ:9008189666 ದಿನಾಂಕ:20.09.24 ಮತ್ತು 21.09.24 ರಂದು ಗೌರಿಬಿದನೂರು ತಾಲ್ಲೂಕು ನೇತಾಜಿ ಕ್ರೀಡಾಂಗಣದಲ್ಲಿ, ಹನುಮಂತರಾಯಪ್ಪ.ಡಿ, ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಗೌರಿಬಿದನೂರು ತಾಲ್ಲೂಕು. ಮೊ:7829252616. ದಿನಾಂಕ:21.09.24 ಮತ್ತು 22.09.24 ರಂದು ಚಿಂತಾಮಣಿ ತಾಲ್ಲೂಕಿನ ಝೂನ್ಸಿರಾಣಿ ಲಕ್ಷ್ಮೀಬಾಯಿ ತಾಲ್ಲೂಕು ಕ್ರೀಡಾಂಗಣದಲ್ಲಿ, ಎಸ್.ಪಕ್ರುಸಾಭಿ, ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಚಿಂತಾಮಣಿ ತಾಲ್ಲೂಕು. ಮೊ:9036989149
**ಅಥ್ಲೆಟಿಕ್ಸ್:** ಪುರುಷರು, 100 ಮೀ, 200 ಮೀ, 400 ಮೀ, 800 ಮೀ, 1500 ಮೀ, 5000ಮೀ, 10000ಮೀ, ಉದ್ದಜಿಗಿತ, ಎತ್ತರಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಥ್ರೋ, ಡಿಸ್ಕಸ್ ಥ್ರೋ, 110ಮೀ ಹರ್ಡಲ್ಸ್, 4X100 ಮೀ ರಿಲೇ, 4X400 ಮೀ ರಿಲೇ ಅಥ್ಲೆಟಿಕ್ಸ್: ಮಹಿಳೆಯರು, 100 ಮೀ, 200 ಮೀ, 400 ಮೀ, 800 ಮೀ, 1500 ಮೀ, 3000ಮೀ, ಉದ್ದಜಿಗಿತ, ಎತ್ತರಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಥ್ರೋ, ಡಿಸ್ಕಸ್ ಥ್ರೋ, 100ಮೀ ಹರ್ಡಲ್ಸ್, 4X100 ಮೀ ರಿಲೇ, 4X400 ಮೀ ರಿಲೇ ಅಥ್ಲೆಟಿಕ್ಸ್, ವಾಲಿಬಾಲ್, ಪುಟ್ಬಾಲ್, ಖೋ-ಖೋ, ಕಬ್ಬಡಿ, ಥ್ರೋಬಾಲ್, ಯೋಗ ಟೆನ್ನಿಸ್, ನೆಟ್ ಬಾಲ್, ಈಜು ಅಥ್ಲೆಟಿಕ್ಸ್, ವಾಲಿಬಾಲ್, ಪುಟ್ಬಾಲ್, ಖೋ-ಖೋ, ಕಬ್ಬಡಿ, ಥ್ರೋಬಾಲ್, ಯೋಗ, ಬಾಸ್ಕೆಟ್ ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹ್ಯಾಂಡ್ ಬಾಲ್, ಟೇಬಲ್ ಟೆನ್ನಿಸ್, ಬಾಲ್ ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್, ಹಾಕಿ.

# ಸಂಜೆ ಟಿಪ್ಸ್

## ಮೊಟೊರೊಲಾ "ರೇಜರ್ 50" ಬಿಡುಗಡೆ

ಮೊಬೈಲ್ ತಂತ್ರಜ್ಞಾನ ಮತ್ತು ಅನ್ವೇಷಣೆಯಲ್ಲಿ ಜಾಗತಿಕವಾಗಿ ಮುಂಚೂಣಿಯಲ್ಲಿರುವ ಮೊಟೊರೊಲಾ ಮತ್ತೊಮ್ಮೆ ಫೋಲ್ಡ್ ಮಾಡಬಹುದಾದ ಸ್ಮಾರ್ಟ್‌ಫೋನ್ ವಲಯದಲ್ಲಿ ಕ್ರಾಂತಿ ಎಬ್ಬಿಸಿದ್ದು, ಅತ್ಯಂತ ನಿರೀಕ್ಷಿತ ರೇಝರ್ ಫ್ರಾಂಚೈಸಿಯ ''ಮೊಟೊರೊಲಾ ರೇಝರ್ 50'' ಅನ್ನು ಬಿಡುಗಡೆ ಮಾಡಿದೆ. ರೇಝರ್ ಫ್ರಾಂಚೈಸಿಗೆ ಇತ್ತೀಚಿನ ಸೇರ್ಪಡೆಯು ಸ್ಮಾರ್ಟ್‌ಫೋನ್ ತಂತ್ರಜ್ಞಾನದಲ್ಲಿ ಸುಧಾರಣೆಗೆ ಮೊಟೊರೊಲಾ ಹೊಂದಿರುವ ಬದ್ಧತೆಯನ್ನು ಪ್ರದರ್ಶಿಸುತ್ತದೆ. ಈ ಸೆಗ್ಮೆಂಟ್‌ನಲ್ಲೇ ಅತಿದೊಡ್ಡ 3.6 ಬಾಹ್ಯ ಡಿಸ್ಪ್ಲೇ ಇದಾಗಿದ್ದು, ಗೂಗಲ್ ಜೆಮಿನೈಗೆ ನೇರ ಆಕ್ಸೆಸ್ ಅನ್ನು ಇದು ಹೊಂದಿದೆ. ಮೊಟೊ ಎಐ ಹೊಂದಿರುವ ಆಕರ್ಷಕ 50 ಎಂಪಿ ಕ್ಯಾಮೆರಾ ಸಿಸ್ಟಮ್‌ನಲ್ಲಿ ಒಐಎಸ್ ಮತ್ತು ಇನ್‌ಸ್ಟಂಟ್ ಆಲ್ ಪಿಕ್ಸೆಲ್ ಫೋಕಸ್ ಇದೆ. ಅತ್ಯಾಧುನಿಕ ತಂತ್ರಜ್ಞಾನ ಹೊಂದಿರುವ ರೇಝರ್ 50 ಆಕರ್ಷಕ ಹಬ್ಬದ ಸೀಮಿತ ಅವಧಿಯ ಕೊಡುಗೆಯಲ್ಲಿ ರೂ. 49,999 ದರದಲ್ಲಿ ಲಭ್ಯವಿದೆ. ಹೀಗಾಗಿ, ಈ ಹಬ್ಬದ ಸಮಯದಲ್ಲಿ ಖರೀದಿ ಮಾಡಲು ಅತ್ಯಂತ ಆಕರ್ಷಕವಾಗಿದೆ. ಇದರ ಹಿಂದಿನ ಸ್ಮಾರ್ಟ್‌ಫೋನ್ ರೇಝರ್ 50 ಅಲ್ಟ್ರಾ ರೀತಿಯಲ್ಲೇ ರೇಝರ್ 50 ಕೂಡಾ ಫೋಲ್ಡಬಲ್ ತಂತ್ರಜ್ಞಾನಕ್ಕೆ ಹೊಸ ಸ್ಪರ್ಶ ನೀಡಿದೆ. ಇದರಲ್ಲಿ ಸೆಗ್ಮೆಂಟ್‌ನಲ್ಲೇ ಅತಿದೊಡ್ಡ ಮತ್ತು ಅತ್ಯಂತ ಆಧುನಿಕವಾದ ಬಾಹ್ಯ ಡಿಸ್ಪ್ಲೇ ಇದೆ. 3.6 ಇಂಚಿನಷ್ಟು ದೊಡ್ಡ ಪಿಒಎಲ್‌ಇಡಿ ಬಾಹ್ಯ ಡಿಸ್ಪ್ಲೇ ಇದ್ದು, ಇದಕ್ಕೆ ಕಾರ್ನಿಂಗ್ ಗೊರಿಲ್ಲಾ ಗ್ಲಾಸ್ ವಿಕ್ಟಸ್ ಸುರಕ್ಷತೆ ಇದೆ. ಹೀಗಾಗಿ, 90 ಹರ್ಟ್ಸ್ ಡೈನಾಮಿಕ್ ರಿಫ್ರೆಶ್ ರೇಟ್‌ನಲ್ಲಿ ಅದ್ಭುತ ದೃಶ್ಯ ಅನುಭವವನ್ನು ಒದಗಿಸುತ್ತದೆ ಮತ್ತು 1700 ನಿಟ್ಸ್ ಗರಿಷ್ಠ ಬ್ರೈಟ್ನೆಸ್ ಅನ್ನು ಒದಗಿಸುತ್ತದೆ. ಇದು 1056 X 1066 ಪಿಕ್ಸೆಲ್ಲಳನ್ನು ಇದು ಹೊಂದಿದ್ದು, ಅದ್ಭುತ ಸ್ಪಷ್ಟತೆ ಮತ್ತು ಪ್ರಕಾಶಮಾನ ಬಣ್ಣಗಳನ್ನು ನೀಡುತ್ತದೆ. 10 ಬಿಟ್ ಡೆಪ್ತ್, 100% ಡಿಸಿಐ-ಪಿ3 ಕವರೇಜ್ ಮತ್ತು ಎಸ್ಜಿಎಸ್ ಐ ಪ್ರೊಟೆಕ್ಷನ್ ಇದೆ. ರೇಜರ್ 50 ರೊಂದಿಗೆ, ಬಳಕೆದಾರರು Google ನ ಜೆಮಿನಿ ಆಪ್ ಅನ್ನು ಬಾಹ್ಯ ಪ್ರದರ್ಶನದಿಂದ ನೇರವಾಗಿ ಸುಲಭವಾಗಿ ಪ್ರವೇಶಿಸಬಹುದು. ಜೆಮಿನಿ ಸೃಜನಶೀಲತೆ ಮತ್ತು ಉತ್ಪಾದಕತೆಯನ್ನು ಸೂಪರ್‌ಚಾರ್ಜ್ ಮಾಡಲು ವೈಯಕ್ತಿಕ ಎಐ ಸಹಾಯಕರಾಗಿದ್ದಾರೆ. ಟ್ರಿಪ್ಗಳನ್ನು ಯೋಜಿಸಲು ಸಹಾಯ ಮಾಡಲಿ ಅಥವಾ ಇಮೇಲ್ಗಳು ಮತ್ತು ಧನ್ಯವಾದ ಟಿಪ್ಪಣಿಗಳನ್ನು ರಚಿಸಲಿ, ಜೆಮಿನಿ ಸಹಾಯ ಮಾಡಲು ಸಿದ್ಧವಾಗಿದೆ. ಈ ಕಾರ್ಯಗಳನ್ನು ಮೀರಿ, ಇದು ದೈನಂದಿನ ಜೀವನವನ್ನು ಸುಧಾರಿಸಲು ಬೆಂಬಲವನ್ನು ನೀಡುತ್ತದೆ ಮತ್ತು ನಕ್ಷೆಗಳು, YouTube, ವಿಮಾನಗಳು, Gmailಮತ್ತು ಹೈವ್ವಂತಹ Google ಸೇವೆ ಒದಗಿಸುತ್ತದೆ. ಯಾವಾಗಲೂ ಲಭ್ಯವಿದೆ, ನಿಮ್ಮ ಬೆರಳ ತುದಿಯಲ್ಲಿ ನಿಮಗೆ ಅಗತ್ಯವಿರುವ ಬೆಂಬಲವನ್ನು ನೀವು ಹೊಂದಿರುವಿರಿ ಎಂದು ಜೆಮಿನಿ ಖಚಿತಪಡಿಸುತ್ತದೆ.

## ರಾಗಿ ಚಕ್ಕುಲಿ

### ಪಾಕ ಶಾಲೆ



### ಮಾಡುವ ವಿಧಾನ

ಮೊದಲಿಗೆ ಒಂದು ಅಗಲವಾದ ಪಾತ್ರೆಗೆ ರಾಗಿಹಿಟ್ಟು, ಕಡಲೇ ಹಿಟ್ಟು, ಬೆಳ್ಳುಳ್ಳಿ ಪೇಸ್ಟ್, ಖಾರದಪುಡಿ, ಶುಂಠಿ ಪೇಸ್ಟ್, ಉಪ್ಪು, ತುಸು ಎಣ್ಣೆ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಅಗತ್ಯವಿರುವಷ್ಟು ನೀರು ಸೇರಿಸಿ ಚಕ್ಕುಲಿ ಹಿಟ್ಟಿನ ಹದಕ್ಕೆ ಕಲಸಿಕೊಳ್ಳಿ. ನಂತರ ಎಣ್ಣೆ ಕಾಯಲು ಇಟ್ಟು ಚಕ್ಕುಲಿ ಅಚ್ಚಿಗೆ ಈ ಹಿಟ್ಟನ್ನು ಹಾಕಿಕೊಂಡು ಚಕ್ಕುಲಿ ಮಾಡಿ. ಗ್ಯಾಸ್ ಉರಿ ಹದವಾಗಿರಲಿ. ಗರಿಗರಿಯಾಗಿ ಕರಿದು ಗಾಳಿಯಾಡದ ಡಬ್ಬದಲ್ಲಿ ಇದನ್ನು ತುಂಬಿಸಿಡಿ.

### ಬೇಕಿರುವ ಸಾಮಗ್ರಿ

250 ಗ್ರಾಂ-ರಾಗಿ ಹಿಟ್ಟು, 150 ಗ್ರಾಂ ಕಡಲೇಹಿಟ್ಟು, 5 ಗ್ರಾಂ ಶುಂಠಿ ಪೇಸ್ಟ್, 5 ಗ್ರಾಂ ಖಾರದಪುಡಿ, 2 ಗ್ರಾಂ ಬೆಳ್ಳುಳ್ಳಿ ಪೇಸ್ಟ್, ರುಚಿಗೆ ತಕ್ಕಷ್ಟು ಉಪ್ಪು, ಕರಿಯಲು ಎಣ್ಣೆ.

## ನಯನತಾರಾ ಟ್ವಿಟರ್ ಖಾತೆ ಹ್ಯಾಕ್!



ಸಿನಿಮಾ ನಟ-ನಟಿಯರು ಸೋಶಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ಆಯಕ್ಟಿವ್ ಆಗಿರುತ್ತಾರೆ. ಹೊಸ ಚಿತ್ರಗಳ ಅಪ್ಡೇಟ್ ಹಾಗೂ ವೈಯಕ್ತಿಕ ವಿಚಾರಗಳನ್ನು ಶೇರ್ ಮಾಡಲು ಸಾಮಾಜಿಕ ಜಾಲತಾಣಗಳನ್ನು ಬಳಸುತ್ತಾರೆ. ಆದ್ರೆ, ಇದು ಎಷ್ಟು ಉಪಯುಕ್ತವೋ, ಅಷ್ಟೇ ಅಪಾಯಕಾರಿ ಆಗಿದೆ. ಕೆಲವೊಮ್ಮೆ ಹ್ಯಾಕರ್ ಗಳು ಸ್ಟಾರ್ ಗಳ ಖಾತೆಗೆ ಕನ್ನ ಹಾಕ್ತಾರೆ. ಇತ್ತೀಚೆಗೆ ಬಾಲಿವುಡ್ ನಟ ಅರ್ಜುನ್ ರಾಂಪಾಲ್ ತಮ್ಮ ಸಾಮಾಜಿಕ ಜಾಲತಾಣ ಖಾತೆಯನ್ನು ಹ್ಯಾಕ್ ಮಾಡಲಾಗಿದೆ ಎಂದು ಹೇಳಿದ್ದರು. ಇದೀಗ ಲೇಡಿ ಸೂಪರ್ ಸ್ಟಾರ್ ನಯನತಾರಾ ಕೂಡ ತಮ್ಮ ಟ್ವಿಟರ್ ಖಾತೆ ಹ್ಯಾಕ್ ಆಗಿದೆ ಎಂದು ಪೋಸ್ಟ್ ಮಾಡಿದ್ದಾರೆ. ನಟಿ ನಯನತಾರಾ ಈಗ ಸೋಶಿಯಲ್ ಮೀಡಿಯಾದಲ್ಲಿ ತುಂಬಾ ಆಯಕ್ಟಿವ್ ಆಗಿದ್ದಾರೆ. ಕೆಲ ದಿನಗಳ ಹಿಂದಷ್ಟೇ ಇನ್ ಸ್ಟಾಗ್ರಾಂ ಅಕೌಂಟ್ ತೆರೆದ ನಟಿ, ತನ್ನ ಪತಿ, ಮಕ್ಕಳೊಂದಿಗೆ ಕಳೆದ ಅಮೂಲ್ಯ ಕ್ಷಣಗಳನ್ನ ಆಗಾಗ ಪೋಸ್ಟ್ ಮಾಡುತ್ತಿರುತ್ತಾರೆ. ತನ್ನ ಇಬ್ಬರು ಪುತ್ರರೊಂದಿಗೆ ಕಳೆಯುವ ಸಮಯವನ್ನು ತನ್ನ ಅಭಿಮಾನಿಗಳೊಂದಿಗೆ ಹಂಚಿಕೊಳ್ಳುತ್ತಾಳೆ. ಟ್ವಿಟರ್ ನಲ್ಲೂ ಒಮ್ಮೊಮ್ಮೆ ಪೋಸ್ಟ್ ಮಾಡುತ್ತಾರೆ.



ಇದೀಗ ನಟಿ ನಯನತಾರಾ ನನ್ನ ಟ್ವಿಟರ್ ಖಾತೆ ಹ್ಯಾಕ್ ಆಗಿದೆ ಎಂದು ಟ್ವಿಟರ್ ನಲ್ಲಿ ಬರೆದು ಪೋಸ್ಟ್ ಮಾಡಿದ್ದಾರೆ. ತನ್ನ ಅಕೌಂಟ್ ನಿಂದ ಯಾರಾದರೂ ಸಂದೇಶ ಕಳುಹಿಸಿದ್ರೆ ಉತ್ತರಿಸ ಬೇಡಿ ಎಂದು ಹೇಳಿದ್ದಾರೆ ಎಂದು ನಟಿ ಫಾಲೋವರ್ಸ್ ಗೆ ಮನವಿ ಮಾಡಿದ್ದಾರೆ. ನಯನ ಸದ್ಯದ ಟ್ವೀಟ್ ವೈರಲ್ ಆಗಲಿದೆ. ಆಗಸ್ಟ್ 2013 ರಲ್ಲಿ ಟ್ವಿಟ್ಟರ್ ಖಾತೆಯನ್ನು ತೆರೆದಿರುವ ನಯನತಾರಾ, 3 ಮಿಲಿಯನ್ ಫಾಲೋವರ್ಸ್ ಹೊಂದಿದ್ದಾರೆ. ನಯನತಾರಾ ಕೊನೆಯದಾಗಿ ಜವಾನ್ ಚಿತ್ರದಲ್ಲಿ ಬಾಲಿವುಡ್ ಸೂಪರ್ ಸ್ಟಾರ್ ಶಾರುಖ್ ಖಾನ್ ಜೊತೆ ಕಾಣಿಸಿಕೊಂಡಿದ್ದರು. ಈ ಸಿನಿಮಾ ಮೂಲಕ ನೈನ್ಸ್ ಬಾಲಿವುಡ್ ಇಂಡಸ್ಟ್ರಿಗೆ ಪದಾರ್ಪಣೆ ಮಾಡಿದ್ರು. ಈ ಸಿನಿಮಾದಲ್ಲಿ ನಯನತಾರಾ ನರ್ಮದಾ ರಾಯ್ ಎಂಬ ಸ್ಟ್ರಾಂಗ್ ಎನ್ ಎಸ್ ಜಿ ಅಧಿಕಾರಿ ಪಾತ್ರದಲ್ಲಿ ನಟಿಸಿದ್ದರು.

## ಮಳೆಗಾಲದಲ್ಲಿ ರೋಗನಿರೋಧಕ ಶಕ್ತಿ ಹೆಚ್ಚಿಸಿಕೊಳ್ಳಲು ಸಲಹೆ

### ಹೆಲ್ತ್ ಟಿಪ್ಸ್



ಮಳೆಗಾಲ ಬಂದಂತೆ ಸೆಕೆ ಕಡಿಮೆಯಾಗುತ್ತದೆ. ಆಹ್ಲಾದಕರ ಉಲ್ಲಾಸಕರ ವಾತಾವರಣ ಸೃಷ್ಟಿಯಾಗುತ್ತದೆ. ಆದರೆ ಅದೇ ವೇಳೆ ವಿಶೇಷವಾಗಿ ಮಕ್ಕಳು ಸೇರಿದಂತೆ ಕಡಿಮೆ ರೋಗನಿರೋಧಕ ಶಕ್ತಿ ಹೊಂದಿರುವವರಿಗೆ ಮಳೆಗಾಲದ ಕಾಯಿಲೆಗಳು ಬಾಧಿಸುತ್ತವೆ. ತಾಪಮಾನ ಕಡಿಮೆ ಆದಾಗ ಆದ್ರ್ರತೆಯ ಮಟ್ಟ ಜಾಸ್ತಿಯಾಗುತ್ತದೆ. ಇಂಥಾ ಹೊತ್ತಲ್ಲಿ ಇನ್ ಫೆಕ್ಷನ್ ಕಾಟ ಜಾಸ್ತಿ. ಹಾಗಾಗಿಯೇ ಶೀತ, ಕೆಮ್ಮು, ಮಲೇರಿಯಾ, ಡೆಂಗ್ಯೂ, ಟೈಫಾಯಿಡ್ ಮತ್ತು ನ್ಯುಮೋನಿಯಾದಂತಹ ರೋಗ ಸಾಮಾನ್ಯವಾಗಿ ಕಾಡಲು ಶುರು ಮಾಡುತ್ತವೆ. ಇಂಥಾ ಹೊತ್ತಲ್ಲಿ ಡಾಬರ್ ಚ್ಯವನ್ಪ್ರಾಶ್ ರೋಗನಿರೋಧಕ ಶಕ್ತಿ ಹೆಚ್ಚಿಸಲು ಸೂಕ್ತವಾಗಿದೆ. ಶತಮಾನಗಳ ಚರಿತ್ರೆಯನ್ನು ಹೊಂದಿರುವ ಆಯುರ್ವೇದವು ಈ ಸೀಸನಲ್ ಕಾಯಿಲೆಗಳನ್ನು ಎದುರಿಸಲು ಪರಿಪೂರ್ಣವಾಗಿದೆ. ಆಧುನಿಕ ಔಷಧಗಳು ಕಾಯಿಲೆ ಗುಣಪಡಿಸಲು ಮದ್ದು ನೀಡಿದರೆ ಆಯುರ್ವೇದವು ಭಾರತೀಯ ಗಿಡಮೂಲಿಕೆಗಳು ಮತ್ತು ಆಯುರ್ವೇದದ ಸೂತ್ರಗಳನ್ನು ಒಟ್ಟಾಗಿಸಿಕೊಡು ಆರೋಗ್ಯಕರ ಮತ್ತು ಉಲ್ಲಾಸಕರ ಜೀವನಶೈಲಿ ನಡೆಸುವಂತೆ ಮಾಡುತ್ತದೆ. ಆ ಪ್ರಕಾರವೇ ಆಯುರ್ವೇದದ ರಸಾಯನ ತಂತ್ರದ ತತ್ವಗಳಲ್ಲಿ ಇರುವ ಒಂದು ಶಕ್ತಿಯುತ ಸೂತ್ರೀಕರಣವನ್ನು ಬಳಸಿಕೊಂಡು ಚ್ಯವನಪ್ರಾಶ್ ರಚಿಸಲಾಗಿದ್ದು, ಇದು ಪುನರುಜ್ಜೀವನದ ಮೇಲೆ ಗಮನ ಕೇಂದ್ರೀಕರಿಸಿದ ಆಯುರ್ವೇದದ ಎಂಟು ವಿಶೇಷತೆಗಳಲ್ಲಿ ಒಂದಾಗಿದೆ. ಈ ಕುರಿತು ಜಾಗೃತಿ ಮೂಡಿಸಲು ಬೆಂಗಳೂರು ಕೆಜಿ ಹಳ್ಳಿಯ ಸರ್ಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಸರ್ ಗಂಗಾ ರಾಮ್ ಆಸ್ಪತ್ರೆಯ ಬಿ.ಎಚ್.ಯು, ಎಂ.ಡಿ (ಆಯುರ್ವೇದ) ಡಾ. ಪರಮೇಶ್ವರ ಅರೋರಾ ಅವರು ಮಾತನಾಡಿ, ಚ್ಯವನಪ್ರಾಶ್ ಅತ್ಯುತ್ತಮ ಮತ್ತು ಜನಪ್ರಿಯ ಆಯುರ್ವೇದ ಉತ್ಪನ್ನವಾಗಿದೆ. ಇದನ್ನು ರೋಗನಿರೋಧಕ ಶಕ್ತಿ ಹೆಚ್ಚಿಸಲು ಮತ್ತು ಸೋಂಕುಗಳ ವಿರುದ್ಧ ಹೋರಾಡಲು ದೇಹಕ್ಕೆ ಪ್ರತಿರೋಧ ಶಕ್ತಿ ಒದಗಿಸಲು ದಶಕಗಳಿಂದ ಬಳಸಲಾಗುತ್ತಿದೆ. ವಿವಿಧ ಗಿಡಮೂಲಿಕೆಗಳು ಮತ್ತು ಖನಿಜ ಶಕ್ತಿಯಿಂದ ಸಿದ್ಧಪಡಿಸಿರುವ ಈ ಉತ್ಪನ್ನವು ವಿವಿಧ ರೋಗಗಳನ್ನು ತಡೆಗಟ್ಟಲು ಸಹಾಯ ಮಾಡುತ್ತದೆ. ಮೂಗಿನ ಅಲರ್ಜಿ ಮತ್ತು ಸೋಂಕುಗಳು ಇತ್ಯಾದಿಗಳನ್ನು ಚ್ಯವನ್ಪ್ರಾಶ್ ಕಡಿಮೆ ಮಾಡುತ್ತದೆ ಎಂದು ಅಧ್ಯಯನಗಳು ದೃಢಪಡಿಸಿವೆ. ಪ್ರಾಚೀನ ಆಯುರ್ವೇದ ಗ್ರಂಥಗಳಲ್ಲಿ ತಿಳಿಸಿರುವಂತೆ ವಾತ, ಪಿತ್ತ ಮತ್ತು ಕಫ ಎಬ ತ್ರಿದೋಷಗಳನ್ನು ಸಮತೋಲನದಲ್ಲಿರಿಸಲು ಚ್ಯವನ್ಪ್ರಾಶ್ ಸಹಾಯ ಮಾಡುತ್ತದೆ ಎಂದು ಹೇಳಿದರು. ಡಾಬರ್ ಇಂಡಿಯಾ ಲಿಮಿಟೆಡ್ನ ಹೆಲ್ತ್ ಸಪ್ಲಿಮೆಂಟ್ ವಿಭಾಗದ ಮಾರ್ಕೆಟಿಂಗ್ ಹೆಡ್ ಶ್ರೀ. ಪ್ರಶಾಂತ್ ಅಗರ್ವಾಲ್ ಅವರು, ಡಾಬರ್ ಸಂಸ್ಥೆಯು ಜನರಿಗೆ ಸುರಕ್ಷಿತ, ಕಡಿಮೆ ವೆಚ್ಚದ ಮತ್ತು ಪರಿಣಾಮಕಾರಿ ಆರೋಗ್ಯ ಸೇವೆ ಉತ್ಪನ್ನ ನೀಡುತ್ತಾ ಬಂದಿದೆ. ಡಾಬರ್ ಚ್ಯವನ್ಪ್ರಾಶ್ ಅಂಥಾ ಒಂದು ಜನಪ್ರಿಯ ಉತ್ಪನ್ನವಾಗಿದ್ದು, ದಿನನಿತ್ಯದ ಸೋಂಕುಗಳಿಂದ ನಮ್ಮನ್ನು ರಕ್ಷಿಸಿಕೊಳ್ಳಲು ಪರಿಪೂರ್ಣ ಉತ್ಪನ್ನವಾಗಿದೆ ಎಂದು ಹೇಳಿದರು. ಬೆಂಗಳೂರಿನ ಕೆ.ಜಿ.ಹಳ್ಳಿಯ ಸರ್ಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀ ದಿವಾಕರ್, ಡಾಬರ್ ಇಂಡಿಯಾದ ಕಾರ್ಪೊರೇಟ್ ಕಮ್ಯುನಿಕೇಷನ್ ವಿಭಾಗದ ಶ್ರೀ ದಿನೇಶ್ ಕುಮಾರ್ ಉಪಸ್ಥಿತರಿದ್ದರು.

## ಪರಿಕಲ್ಪನಾ ಭೌತಶಾಸ್ತ್ರ ಕಲಿಕೆಗೆ ಚಾಲನೆ ನೀಡಿದ ಪಿಯರ್ಸನ್




ಭಾರತದಲ್ಲಿ ವಿಜ್ಞಾನ, ತಂತ್ರಜ್ಞಾನ, ಎಂಜಿನಿಯರಿಂಗ್ ಮತ್ತು ಗಣಿತ (ಎಸ್ಟಿಇಎಂ) ಶಿಕ್ಷಣವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿನ ಮಹತ್ವದ ಕ್ರಮದಲ್ಲಿ, ಜೀವಮಾನದ ಕಲಿಕಾ ಕಂಪನಿಯಾಗಿರುವ ಪಿಯರ್ಸನ್ ಖ್ಯಾತ ಭೌತಶಾಸ್ತ್ರಜ್ಞ ಪ್ರೊ. ಪೌಲ್ ಜಿ. ಹೆವಿಟ್ ಅವರ ?ಕನ್ಸೆಪ್ಚುವಲ್ ಫಿಸಿಕ್ಸ್-ನ (ಪರಿಕಲ್ಪನಾ ಭೌತಶಾಸ್ತ್ರ) 13ನೇ ಆವೃತ್ತಿಯನ್ನು ಇಂದು ಇಲ್ಲಿ ಬಿಡುಗಡೆ ಮಾಡಿತು.

ಇನ್ಫೋಸಿಸ್ ವಿಜ್ಞಾನ ಫೌಂಡೇಷನ್ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಇನ್ಫೋಸಿಸ್ನ ಸಂಸ್ಥಾಪಕ ನಾರಾಯಣ ಮೂರ್ತಿ ಅವರು ಈ ಪುಸ್ತಕ ಬಿಡುಗಡೆ ಮಾಡಿದರು. ಭೌತಶಾಸ್ತ್ರದ ತತ್ವಗಳನ್ನು ಕರಗತ ಮಾಡಿಕೊಂಡು ವಿಷಯದ ಮೇಲೆ ಪ್ರಭುತ್ವ ಸಾಧಿಸಲು ಬಯಸುವ ಭಾರತದ ವಿದ್ಯಾರ್ಥಿಗಳಿಗೆ ಈ ಇದು ಅಗತ್ಯವಾದ ಗ್ರಂಥವಾಗಿದೆ ಎಂದು ಮೂರ್ತಿ ಅವರು ಅಭಿಪ್ರಾಯಪಟ್ಟರು.

ಇಂದು ಪರಿಚಯಿಸಿದ ಕನ್ಸೆಪ್ಚುವಲ್ ಫಿಸಿಕ್ಸ್ ಪುಸ್ತಕವು 2047ರ ವೇಳೆಗೆ ಭಾರತ ಸಾಧಿಸಲು ಉದ್ದೇಶಿಸಿರುವ 'ವಿಕಸಿತ ಭಾರತ್'ದ ದೂರದೃಷ್ಟಿಗೆ ಸೂಕ್ತವಾಗಿ ಹೊಂದಿಕೆಯಾಗುತ್ತದೆ. ಇದು ಉನ್ನತ-ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡುತ್ತದೆ. 'ಕನ್ಸೆಪ್ಚುವಲ್ ಫಿಸಿಕ್ಸ್' ನ ನವೀಕರಿಸಿದ ಆವೃತ್ತಿಯು ಭಾರತದ ಆಧುನಿಕ ಎಸ್ಟಿಇಎಂ ಪಠ್ಯಕ್ರಮದ ಗುರಿ ಸಾಧಿಸಲು ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ನೆರವಾಗಲಿದೆ. ಭಾರತದಲ್ಲಿ ಈ ಆವೃತ್ತಿಯನ್ನು ಬಿಡುಗಡೆ ಮಾಡುವ ಮೂಲಕ ಪಿಯರ್ಸನ್, ಡಿಜಿಟಲ್ ತಂತ್ರಜ್ಞಾನ, ಪರಿಸರ ಹಾಗೂ ಇಂಧನ ಕ್ಷೇತ್ರಗಳ ಪ್ರಸ್ತುತ ಅಪ್ಲಿಕೇಷನ್ಗಳ ಮೇಲೆ ಗಮನ ಕೇಂದ್ರೀಕರಿಸಿದ, ಮೆಕ್ಯಾನಿಕ್ಸ್, ಥರ್ಮೋಡೈನಾಮಿಕ್ಸ್, ವಿದ್ಯುತ್ ಮತ್ತು ಕಾಂತೀಯತೆ, ಅಲೆಗಳು ಮತ್ತು ಆಧುನಿಕ ಭೌತಶಾಸ್ತ್ರದಂತಹ ಪ್ರಮುಖ ವಿಷಯಗಳನ್ನು ಒಳಗೊಂಡಂತೆ ವಿದ್ಯಾರ್ಥಿಗಳಿಗೆ ಸಮಗ್ರ ಭೌತಶಾಸ್ತ್ರದ ವಿಷಯವನ್ನು ಅಧ್ಯಯನ ಮಾಡಲು ಹೊಸ ಅವಕಾಶಗಳನ್ನು ಒದಗಿಸಲಿದೆ.

ಭಾರತದಲ್ಲಿ ಎಸ್ಟಿಇಎಂ ಶಿಕ್ಷಣ ಬಲಪಡಿಸಲು ನಾವು ಕಾರ್ಯಪ್ರವೃತ್ತರಾಗಿರುವಾಗ, ನಮ್ಮ ವಿದ್ಯಾರ್ಥಿಗಳು ವಿಶ್ವ ದರ್ಜೆಯ ಕಲಿಕಾ ಸಂಪನ್ಮೂಲಗಳನ್ನು ಬಳಸುವ ಅವಕಾಶ ಹೊಂದಿರುವುದು ಅಗತ್ಯವಾಗಿರಲಿದೆ. ದಿನನಿತ್ಯದ ಆಗುಹೋಗುಗಳಿಗೆ ಭೌತಶಾಸ್ತ್ರವು ಹೆಚ್ಚು ಪ್ರಸ್ತುತವಾಗಿರುವುದಕ್ಕೆ ಪರಿಕಲ್ಪನೆಯ ತಿಳಿವಳಿಕೆ ಮತ್ತು ನೈಜ-ಪ್ರಪಂಚಕ್ಕೆ ಅನ್ವಯಿಸುವುದರ ಮಹತ್ವವನ್ನು ಪೌಲ್ ಜಿ. ಹೆವಿಟ್ ಅವರ 'ಕನ್ಸೆಪ್ಚುವಲ್ ಫಿಸಿಕ್ಸ್' ಗ್ರಂಥವು ಮನದಟ್ಟು ಮಾಡಿಕೊಡಲಿದೆ.

ಇಂತಹ ಶ್ರೇಷ್ಠ ಗುಣಮಟ್ಟದ ಪಠ್ಯವು, ಭಾರತವನ್ನು ಜಾಗತಿಕ ಶಿಕ್ಷಣ ಕೇಂದ್ರವನ್ನಾಗಿ ರೂಪಿಸುವಲ್ಲಿ ಮಹತ್ವದ ಪಾತ್ರ ನಿರ್ವಹಿಸಲಿದೆ. ಪಿಯರಸನ್ ಕೈಗೊಂಡಿರುವ ಈ ಉಪಕ್ರಮದ ಫಲವಾಗಿ ಈ ಬೆಲೆಕಟ್ಟಲಾಗದ ಸಂಪನ್ಮೂಲವು ಭಾರತದಾದ್ಯಂತ ?ಎಸ್ಟಿಇಎಂ? ವಿದ್ಯಾರ್ಥಿಗಳಿಗೆ ಇನ್ನು ಮುಂದೆ ಲಭ್ಯವಾಗಲಿರುವುದನ್ನು ಕಂಡು ನನಗೆ ಸಂತಸವಾಗುತ್ತಿದೆ. ?ಕನ್ಸೆಪ್ಚುವಲ್ ಫಿಸಿಕ್ಸ್?- ವಿದ್ಯಾರ್ಥಿ ಕೇಂದ್ರಿತವಾಗಿರುವುದರ ಜೊತೆಗೆ ಭಾರತವನ್ನು ಜಾಗತಿಕ ಶಿಕ್ಷಣ ಕೇಂದ್ರವನ್ನಾಗಿ ಬೆಳೆಸುವ ಗುರಿ ಸಾಧನೆ ನಿಟ್ಟಿನಲ್ಲಿನ ಪ್ರಮುಖ ಹೆಜ್ಜೆಯೂ ಆಗಿದೆ? ಎಂದು ಇನ್ಫೋಸಿಸ್ ಸಂಸ್ಥಾಪಕ ನಾರಾಯಣ ಮೂರ್ತಿ ಅವರು ಹೇಳಿದ್ದಾರೆ.ಜಾಗತಿಕವಾಗಿ ಮೆಚ್ಚುಗೆಗೆ ಪಾತ್ರವಾಗಿರುವ ಲೇಖಕ ಪ್ರೊ. ಪೌಲ್ ಜಿ. ಹೆವಿಟ್ ಅವರ ಕೃತಿ ಕನ್ಸೆಪ್ಚುವಲ್ ಫಿಸಿಕ್ಸ್- ಭೌತಶಾಸ್ತ್ರದ ಸಂಕೀರ್ಣ ಪರಿಕಲ್ಪನೆಗಳನ್ನು ಸರಳೀಕರಿಸುವ ಮತ್ತು ಉನ್ನತ ಶಿಕ್ಷಣದ ಆಕಾಂಕ್ಷಿಗಳಿಗೆ ಈ ಪರಿಕಲ್ಪನೆಗಳು ಸುಲಭವಾಗಿ ದೊರೆಯುವಂತೆ ಮಾಡಿದೆ. ಈ ಕಲಿಕಾ ಅನುಭವವು ಜಾಗತಿಕವಾಗಿ ಭೌತಶಾಸ್ತ್ರ ಕಲಿಸುವ ವಿಧಾನ ಬದಲಾವಣೆಯ ಮತ್ತು ಸುಲಭವಾಗಿ ಅರ್ಥೈಸಿಕೊಳ್ಳುವ ಸಾಧನವಾಗಿದೆ. ಈ ಕಲಿಕೆಯಲ್ಲಿ ಪರಿಕಲ್ಪನೆಗಳ ತತ್ವಗಳಿಗೆ ಮಹತ್ವ ನೀಡಲಾಗಿದೆ.

ಪಿಯರ್ಸನ್ ಇಂಡಿಯಾದ ಕಂಟ್ರಿ ಹೆಡ್ ವಿನಯ್ ಸ್ವಾಮಿ ಅವರು ಮಾತನಾಡಿ, ''ಭಾರತವು ಜಾಗತಿಕ ಎಂಜಿನಿಯರಿಂಗ್ ಕೇಂದ್ರವಾಗಿ ಹೊರಹೊಮ್ಮುತ್ತಿರುವಾಗ, ಗುಣಮಟ್ಟದ ಕಲಿಕೆಯ ಸಂಪನ್ಮೂಲಗಳನ್ನು ಒದಗಿಸುವುದು ಮಹತ್ವದ ಸಂಗತಿಯಾಗಿದೆ. ಪ್ರಾದೇಶಿಕ ಅಗತ್ಯಗಳು ಮತ್ತು ಸಾಂಸ್ಕೃತಿಕ ಸಂದರ್ಭಗಳಿಗೆ ಅನುಗುಣವಾಗಿ ಅಂತರರಾಷ್ಟ್ರೀಯ ಲೇಖಕರ ಕೃತಿಗಳನ್ನು ಒಳಗೊಂಡಿರುವ ವಿಶಾಲ ಗ್ರಂಥಾಲಯವನ್ನು ನಾವು ಹೊಂದಿದ್ದೇವೆ. ಭಾರತದ ಮಾರುಕಟ್ಟೆಗೆ ಸೇವೆ ಸಲ್ಲಿಸಲು ನಾವು ಬದ್ಧರಾಗಿದ್ದೇವೆ. ನಮ್ಮ ವಿಷಯವು ಅತ್ಯುನ್ನತ ಅಂತರರಾಷ್ಟ್ರೀಯ ಮಾನದಂಡಗಳೊಂದಿಗೆ ಹೊಂದಾಣಿಕೆಯಾಗುತ್ತದೆ ಎಂಬುದನ್ನು ನಾವು ಖಚಿತಪಡಿಸುತ್ತೇವೆ. ಶೀಘ್ರದಲ್ಲೇ, ನಾವು ಹಿಂದಿ ಮತ್ತು ಕನ್ನಡದಂತಹ ಪ್ರಾದೇಶಿಕ ಭಾಷೆಗಳಲ್ಲಿಯೂ 'ಕನ್ಸೆಪ್ಚುವಲ್ ಫಿಸಿಕ್ಸ್' ಪರಿಚಯಿಸಲಿದ್ದೇವೆ. ಗ್ರಂಥವು ಇನ್ನಷ್ಟು ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ಸುಲಭವಾಗಿ ದೊರೆಯುವಂತೆ ಮಾಡುತ್ತೇವೆ? ಎಂದು ಹೇಳಿದ್ದಾರೆ.

'ಕನ್ಸೆಪ್ಚುವಲ್ ಫಿಸಿಕ್ಸ್'ನ 13ನೇ ಆವೃತ್ತಿಯು ಭಾರತದಲ್ಲಿ ಪ್ರಮುಖ ಪುಸ್ತಕ ಮಳಿಗೆಗಳು ಮತ್ತು ಇ-ಕಾಮರ್ಸ್ ತಾಣಗಳಾದ ಅಮೆಜಾನ್, ಫ್ಲಿಕ್ಕಾರ್ಟ್ ಮತ್ತಿತರ ಕಡೆಗಳಲ್ಲಿ ಖರೀದಿಗೆ ಲಭ್ಯ ಇರಲಿದೆ.

## ಪಪ್ಪಾಯ ಫೇಸ್ ಪ್ಯಾಕ್

### ಬ್ಯೂಟಿ ಟಿಪ್ಸ್



ಪಪ್ಪಾಯ ಹಣ್ಣು ಆರೋಗ್ಯಕ್ಕೆ ಮತ್ತು ಸೌಂದರ್ಯಕ್ಕೆ ಉಪಯೋಗವಾಗುವಂತಹ ಅನೇಕ ಅಂಶಗಳನ್ನು ಹೊಂದಿದೆ ಎಂಬುದು ನಮಗೆಲ್ಲಾ ತಿಳಿದಿದೆ. ಪಪ್ಪಾಯವನ್ನು ಚರ್ಮದ ಮೇಲೆ ಲೇಪಿಸುವುದರಿಂದ ಇದರಲ್ಲಿರುವ 'ಪಾಪೈನ್' ಎಂಬ ಎನ್ಜೈಮ್ (ಕಿಣ್ವ) ಡೆಡ್ ಸೆಲ್ ಗಳನ್ನು ತೆಗೆದು ಹಾಕುವುದರಲ್ಲಿ ಸಹಾಯ ಮಾಡುತ್ತದೆ. ಇದರಲ್ಲಿ ವಿಟಮಿನ್ ಸಿ, ವಿಟಮಿನ್ ಎ, ಆಯಂಟಿಆಕ್ಸಿಡೆಂಟ್ಸ್, ಫೋಲೇಟ್, ಪ್ಯಾನ್ಟೊಥೆನಿಕ್ ಆಯಸಿಡ್, ಪೊಟ್ಯಾಷಿಯಂ, ಮೆಗ್ನೀಷಿಯಂ ಮುಂತಾದವುಗಳಿಂದ ತ್ವಚೆಗೆ ನೈಸರ್ಗಿಕವಾದ ರೀತಿಯಲ್ಲಿ ಪೋಷಣೆ ದೊರೆತು, ಚರ್ಮದ ಕಾಂತಿಯನ್ನು ಹೆಚ್ಚಿಸುತ್ತದೆ. ಒಂದು ಬಟ್ಟಲಿನಲ್ಲಿ ಕೆಲವು ಪಪ್ಪಾಯಿ ಪೀಸ್ ಗಳನ್ನು ತೆಗೆದುಕೊಳ್ಳಿ. ಇದಕ್ಕೆ ಒಂದು ಚಮಚ ಜೇನುತುಪ್ಪ, ಒಂದು ಚಮಚ ಅರಿಶಿಣದ ಪುಡಿ ಮತ್ತು ಒಂದು ಚಮಚ ಶ್ರೀಗಂಧದ ಪುಡಿ, ಸ್ವಲ್ಪ ಮುಲ್ತಾನಿ ಮಿಟ್ಟಿಯನ್ನು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ ಪೇಸ್ಟ್ ರೀತಿಯಲ್ಲಿ ಮಿಶ್ರಣವನ್ನು ತಯಾರಿಸಿಕೊಳ್ಳಿ. ಈಗ ಇದನ್ನು ಮುಖಕ್ಕೆ ಲೇಪಿಸಿ, 20 ನಿಮಿಷಗಳ ಕಾಲ ಹಾಗೆಯೇ ಬಿಟ್ಟು ನಂತರ ಬೆಚ್ಚಗಿನ ನೀರಿನಿಂದ ತೊಳೆದುಕೊಳ್ಳಿ. ಶ್ರೀಗಂಧ ಮತ್ತು ಮುಲ್ತಾನಿ ಮಿಟ್ಟಿ ತ್ವಚೆಯಲ್ಲಿರುವ ಹೆಚ್ಚುವರಿ ಜಿಡ್ಡನ್ನು ಹೀರಿಕೊಳ್ಳುತ್ತದೆ ಮತ್ತು ಸ್ವಚ್ಛವಾದ ಮೃದುವಾದ ಹಾಗೇ ಹೊಳೆಯುವ ತ್ವಚೆ ನಿಮ್ಮದಾಗುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಮಕ್ಕಳಿಂದ ನಷ್ಟ, ಅಧಿಕ ಖರ್ಚು, ಗೌರವಕ್ಕೆ ಧಕ್ಕೆ, ದೂರ ಪ್ರಯಾಣದಲ್ಲಿ ಅನುಕೂಲ

**ವೃಷಭ:** ಸ್ಥಿರಾಸ್ತಿ ಮತ್ತು ವಾಹನದಿಂದ ಲಾಭ, ತಾಯಿಯಿಂದ ಸಹಕಾರ, ಪತ್ರ ವ್ಯವಹಾರಗಳಲ್ಲಿ ಯಶಸ್ಸು, ವಿದ್ಯಾಭ್ಯಾಸದಲ್ಲಿ ಪ್ರಗತಿ

**ಮಿಥುನ:** ಉದ್ಯೋಗ ಬದಲಾವಣೆಯಿಂದ ಅನುಕೂಲ, ಅಧಿಕಾರಿಗಳಿಂದ ಉತ್ತಮ ಸ್ಪಂದನೆ, ಧೈರ್ಯದಿಂದ ಕಾರ್ಯ ಜಯ, ಶುಭ ಕಾರ್ಯಗಳಲ್ಲಿ ಯಶಸ್ಸು

**ಕಟಕ:** ಅಧಿಕ ಕೋಪ ತಾಪ ಅಹಂಭಾವ, ಆರೋಗ್ಯದಲ್ಲಿ ವ್ಯತ್ಯಾಸ, ವ್ಯವಹಾರದಲ್ಲಿ ಚೇತರಿಕೆ, ಪ್ರಯಾಣದಲ್ಲಿ ಅನುಕೂಲ

**ಸಿಂಹ:** ಸ್ವಯಂಕೃತ ಅಪರಾಧದಿಂದ ಸಮಸ್ಯೆ, ಮಕ್ಕಳೊಂದಿಗೆ ಮನಸ್ತಾಪ, ಪ್ರಯಾಣದಲ್ಲಿ ವಿಘ್ನ, ಕೆಲಸ ಕಾರ್ಯಗಳಲ್ಲಿ ಹಿನ್ನಡೆ

**ಕನ್ಯಾ:** ಶುಭ ಕಾರ್ಯಗಳ ಆಲೋಚನೆ, ಉದ್ಯೋಗದಲ್ಲಿ ಅನುಕೂಲ, ಪಾಲುದಾರಿಕೆಯಲ್ಲಿ ಲಾಭ, ವಿದ್ಯಾಭ್ಯಾಸದಲ್ಲಿ ಅನುಕೂಲ

**ತುಲಾ:** ಅವಕಾಶ ಕೈ ತಪ್ಪುವುದು, ಸಾಲದ ಚಿಂತೆ, ಶತ್ರು ಉಪಟಳ,ಸಂಗಾತಿಯಿಂದ ಅಂತರ

**ವೃಶ್ಚಿಕ:** ವ್ಯಾಪಾರ ವ್ಯವಹಾರದಲ್ಲಿ ಅಡೆತಡೆ, ಉದ್ಯೋಗ ಸ್ಥಳದಲ್ಲಿ ಪ್ರಗತಿ, ಮಕ್ಕಳ ಜೀವನದಲ್ಲಿ ಬದಲಾವಣೆ, ಕೌಟುಂಬಿಕ ಸಹಕಾರ

**ಧನಸ್ಸು:** ವ್ಯವಹಾರದಲ್ಲಿ ಉತ್ತಮ ಅವಕಾಶ, ತಂದೆಯಿಂದ ಸಹಕಾರ, ಕುಲದೇವತಾ ಆಶೀರ್ವಾದ, ವಿದ್ಯಾಭ್ಯಾಸದಲ್ಲಿ ಪ್ರಗತಿ

**ಮಕರ:** ವ್ಯಾಪಾರ ವ್ಯವಹಾರದಲ್ಲಿ ಅನುಕೂಲ, ಹೆಣ್ಣು ಮಕ್ಕಳಿಂದ ಅನುಕೂಲ, ಅನಿರೀಕ್ಷಿತ ಧನಾಗಮನ, ಪ್ರಯಾಣದಲ್ಲಿ ಸಮಸ್ಯೆ

**ಕುಂಭ:** ಮಕ್ಕಳಿಂದ ಆರ್ಥಿಕ ಲಾಭ, ಕೌಟುಂಬಿಕ ಸಹಕಾರ, ಪಾಲುದಾರಿಕೆಯಲ್ಲಿ ಉತ್ತಮ ಅವಕಾಶ, ಪ್ರಯಾಣದಲ್ಲಿ ಅಡೆತಡೆ,

**ಮೀನ:** ಆರ್ಥಿಕ ಮುಗ್ಗಟ್ಟು, ಶುಭ ಕಾರ್ಯ ಪ್ರಯತ್ನದಲ್ಲಿ ಯಶಸ್ಸು, ವಿದ್ಯಾಭ್ಯಾಸದಲ್ಲಿ ಪ್ರಗತಿ, ದೈವ ಚಿಂತನೆ.

## ಉಚಿತ ದಂತ ದಿನ

ಸಮುದಾಯದ ಜನರಿಗೆ ಉಚಿತ ಹಲ್ಲಿನ ಆರೈಕೆಯನ್ನು ಪಡೆಯಲು ಸಹಾಯ ಮಾಡಲು ಬದ್ಧರಾಗಿರುವ ಬೆಂಬಲಿತ ದಂತವೈದ್ಯರು ಮತ್ತು ಅವರ ತಂಡವು ಆಯ್ಕೆಮಾಡಿದ ದಿನಾಂಕದಂದು ಉಚಿತ ದಂತ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ, ಇದು ಸೆಪ್ಟೆಂಬರ್ 14 ರಂದು ನಡೆಯುತ್ತದೆ. ಹಲ್ಲಿನ ಆರೋಗ್ಯವು ವ್ಯಕ್ತಿಯ ಒಟ್ಟಾರೆ ಆರೋಗ್ಯದ ಪ್ರಮುಖ ಭಾಗವಾಗಿದೆ ಆದರೆ ಹಣಕಾಸಿನ ಕಾರಣಗಳಿಂದಾಗಿ ಹೆಚ್ಚಿನ ಜನರು ದಂತ ವಿಮೆಯನ್ನು ಹೊಂದಿಲ್ಲ ಎಂಬುದು ದುರದೃಷ್ಟಕರ. ಈ ದಿನವು ಸಾಮಾನ್ಯವಾಗಿ ದಂತವೈದ್ಯರು ತಮ್ಮ ಸಮುದಾಯಕ್ಕೆ ಹಿಂತಿರುಗಿಸಲು ಒಂದು ಮಾರ್ಗವಾಗಿದೆ ಮತ್ತು ಅವರ ಕಚೇರಿಗಳು ಸಾಮಾನ್ಯವಾಗಿ ತಮ್ಮ ಸರದಿಗಾಗಿ ಕಾಯುತ್ತಿರುವ ರೋಗಿಗಳಿಂದ ತುಂಬಿರುತ್ತದೆ ಏಕೆಂದರೆ ಇದು ಸಾಮಾನ್ಯವಾಗಿ ಅವರಿಗೆ ತುಂಬಾ ಬಿಡುವಿಲ್ಲದ ದಿನವಾಗಿದೆ. ಹಲ್ಲಿನ ಶುಚಿಗೊಳಿಸುವಿಕೆ, ಭರ್ತಿ, ಮೂಲ ಕಾಲುವೆ, ಹೊರತೆಗೆಯುವಿಕೆ, ಇಂಪ್ಲಾಂಟ್ ಪ್ಲೇಸ್ಮೆಂಟ್, ಮತ್ತು ಮರುಸ್ಥಾಪನೆ ಮತ್ತು ಬಾಯಿಯ ಕ್ಯಾನ್ಸರ್ ಸ್ಕ್ರೀನಿಂಗ್ಗಳು ಸೇರಿದಂತೆ ಹಲವಾರು ಸೇವೆಗಳನ್ನು ಆ ದಿನದಲ್ಲಿ ನೀಡಲಾಗುತ್ತದೆ. ದಂತವೈದ್ಯಶಾಸ್ತ್ರವು ಮನುಷ್ಯನಿಗೆ ತಿಳಿದಿರುವ ಔಷಧದ ಅತ್ಯಂತ ಹಳೆಯ ರೂಪಗಳಲ್ಲಿ ಒಂದಾಗಿದೆ ಮತ್ತು ಇದು 7000 ಕ್ರಿ.ಪೂ. ಆದರೆ 1700 ರವರೆಗೂ ದಂತವೈದ್ಯಶಾಸ್ತ್ರವು ಒಂದು ನಿರ್ದಿಷ್ಟ ವೃತ್ತಿಯಾಗಿ ಮಾರ್ಪಟ್ಟಿರಲಿಲ್ಲ. ಆಧುನಿಕ ದಂತವೈದ್ಯಶಾಸ್ತ್ರದ ಪಿತಾಮಹ ಎಂದು ಕರೆಯಲ್ಪಡುವ ಪಿಯರೆ ಫೌಚರ್ಡ್ ತನ್ನ ಪುಸ್ತಕವನ್ನು 1723 ರಲ್ಲಿ ದಿ ಸರ್ಜನ್ ಡೆಂಟಿಸ್ಟ್, ಎ ಟ್ರೀಟೈಸ್ ಆನ್ ಟೀತ್ ಎಂಬ ಶೀರ್ಷಿಕೆಯಲ್ಲಿ ಪ್ರಕಟಿಸಿದರು. ಹಲ್ಲಿನ ಚಿಕಿತ್ಸೆ ಮತ್ತು ಆರೈಕೆಗಾಗಿ ವ್ಯಾಪಕವಾದ ವ್ಯವಸ್ಥೆಯನ್ನು ವ್ಯಾಖ್ಯಾನಿಸಲು ಪುಸ್ತಕವು ಸಹಾಯ ಮಾಡಿತು. ಅವರು ಹಲ್ಲಿನ ಕೃತಕ ಅಂಗಗಳ ಬಳಕೆ ಮತ್ತು ಹಲ್ಲಿನ ತುಂಬುವಿಕೆಯ ಕಲ್ಪನೆಯನ್ನು ಸಹ ಸ್ಥಾಪಿಸಿದರು. ಹಲ್ಲಿನ ಕೊಳೆತವು ಸಕ್ಕರೆಯಿಂದ ಆಮ್ಲಗಳಿಂದ ಉಂಟಾಗುತ್ತದೆ ಎಂದು ಕಂಡುಹಿಡಿದವರು. ಜನರು ಯಾವಾಗಲೂ ಹಲ್ಲಿನ ನೈರ್ಮಲ್ಯದ ಪ್ರಾಮುಖ್ಯತೆಯನ್ನು ತಿಳಿದಿದ್ದಾರೆ ಮತ್ತು ಉತ್ತಮ ಹಲ್ಲಿನ ನೈರ್ಮಲ್ಯವು ಒಟ್ಟಾರೆ ಯೋಗಕ್ಷೇಮಕ್ಕೆ ಗಮನಾರ್ಹವಾಗಿ ಕೊಡುಗೆ ನೀಡುತ್ತದೆ ಎಂಬುದಕ್ಕೆ ಈಗ ಹೆಚ್ಚಿನ ಪುರಾವೆಗಳಿವೆ. ಕೆಲವು ಮೌಖಿಕ ಪರೀಕ್ಷೆಗಳು ಬಾಯಿಯ ಕ್ಯಾನ್ಸರ್, ಮಧುಮೇಹ, ಎಚ್ಐವಿ ಮತ್ತು ಲ್ಯುಕೇಮಿಯಾ ಸೇರಿದಂತೆ ಸುಮಾರು 100 ವಿವಿಧ ವೈದ್ಯಕೀಯ ಪರಿಸ್ಥಿತಿಗಳನ್ನು ಪತ್ತೆಹಚ್ಚಲು ಸಹಾಯ ಮಾಡುತ್ತದೆ. ಉಚಿತ ದಂತವೈದ್ಯಕೀಯ ದಿನವು 2010 ರಲ್ಲಿ ಪ್ರಾರಂಭವಾಯಿತು ಮತ್ತು ಆ ಸಮಯದಲ್ಲಿ ಕೆಲವೇ ಕೆಲವು ದಂತವೈದ್ಯರು ಭಾಗವಹಿಸಿದ್ದರು ಆದರೆ ಅಂದಿನಿಂದ ಭಾಗವಹಿಸುವ ದಂತವೈದ್ಯರ ಸಂಖ್ಯೆಯು ಗಾತ್ರದಲ್ಲಿ ಹೆಚ್ಚಾಗಿದೆ. ಸರಿಸುಮಾರು 108 ಮಿಲಿಯನ್ ಅಮೆರಿಕನ್ನರು ದಂತ ವಿಮೆಯನ್ನು ಹೊಂದಿಲ್ಲ ಎಂದು ಅಧ್ಯಯನಗಳು ತೋರಿಸಿವೆ ಮತ್ತು ಅವರಲ್ಲಿ ಹೆಚ್ಚಿನವರು ಅವರು ಪಡೆಯಬೇಕಾದ ಸರಿಯಾದ ದಂತ ಆರೈಕೆಯನ್ನು ಹೊಂದಿರುವುದಿಲ್ಲ. ಇದು ಆರಂಭದಲ್ಲಿ ಆ ವರ್ಗಕ್ಕೆ ಸೇರುವ ಜನರಿಗೆ ಇಡೀ ದಿನಕ್ಕೆ ಯಾವುದೇ ವೆಚ್ಚವಿಲ್ಲದೆ ಹಲ್ಲಿನ ಆರೈಕೆಯನ್ನು ಒದಗಿಸುವ ಮೂಲಕ ಸಹಾಯ ಮಾಡುವ ಸಾಧನವಾಗಿ ಪ್ರಾರಂಭವಾಯಿತು.

# ಈರುಳ್ಳಿ ಬೆಲೆ ಏರಿಕೆ ಆತಂಕ: ಗುಡ್ ನ್ಯೂಸ್



**ದೆಹಲಿ:** ಈರುಳ್ಳಿ ಹಂಗಾಮು ಆರಂಭವಾಗಿದ್ದು, ಸದ್ಯಕ್ಕೆ ಬೆಲೆ ಹೆಚ್ಚಳದ ಬಿಸಿ ಕಡಿಮೆಯಾಗಲಿದೆ. ಆವಕ ಹೆಚ್ಚಾದಲ್ಲಿ ಈರುಳ್ಳಿ ದರ ಕಡಿಮೆಯಾಗಲಿದೆ.

ಮಹಾರಾಷ್ಟ್ರದಲ್ಲಿ ಭಾರಿ ಮಳೆಯಿಂದ ಈ ಬಾರಿ ಈರುಳ್ಳಿ ಬೆಳೆ ನಾಶವಾಗಿದ್ದು, ರಾಜ್ಯದಲ್ಲಿಯೂ ಈರುಳ್ಳಿ ಬೆಳೆ ಹಾನಿಯಾಗಿತ್ತು.

ಇನ್ನು ದೊಡ್ಡ ವರ್ತಕರು ದಾಸ್ತಾನು ಮಾಡಿದ ಕಾರಣ ಮಾರುಕಟ್ಟೆಗೆ ಹೆಚ್ಚಿನ ಪ್ರಮಾಣದಲ್ಲಿ ಈರುಳ್ಳಿ ಬಾರದೆ ದರ ಏರಿಕೆಯಾಗಿದೆ. ಈಗಾಗಲೇ ಕೆಜಿಗೆ 60 ರೂಪಾಯಿ ದಾಟಿರುವ ಈರುಳ್ಳಿ ದರ ಮತ್ತಷ್ಟು ಏರಿಕೆಯಾಗುವ ಆತಂಕದಲ್ಲಿ ಗ್ರಾಹಕರಿದ್ದರು.

ಇದೀಗ ಈರುಳ್ಳಿ ಹಂಗಾಮ ಆರಂಭವಾಗಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಸ್ಥಳೀಯ ಈರುಳ್ಳಿ ಮಾರುಕಟ್ಟೆಗೆ ಬರಲಿದೆ. ಗ್ರಾಹಕರ ಬೇಡಿಕೆಗೆ ಅನುಗುಣವಾಗಿ ಈರುಳ್ಳಿ ಲಭ್ಯವಾಗಲಿದ್ದು ಬೆಲೆ ಕೂಡ ಕಡಿಮೆಯಾಗಲಿದೆ ಎಂದು ಹೇಳಲಾಗಿದೆ.

ಹುಬ್ಬಳ್ಳಿ ಎಪಿಎಂಸಿಗೆ ಸ್ಥಳೀಯ ಈರುಳ್ಳಿ ಆವಕ ಹೆಚ್ಚಳವಾಗಿದ್ದು, ಬೆಲೆ ಏರಿಕೆ ಆತಂಕ ಸದ್ಯಕ್ಕೆ ನಿವಾರಣೆಯಾಗಿದೆ. ಹುಬ್ಬಳ್ಳಿ ಎಪಿಎಂಸಿಗೆ ಸೆಪ್ಟೆಂಬರ್ 6ರವರೆಗೆ ನೂರು ಕ್ವಿಂಟಲ್ ಲೆಕ್ಕದಲ್ಲಿ ಬರುತ್ತಿದ್ದ ಈರುಳ್ಳಿ ಈಗ 2000ಕ್ಕೂ ಅಧಿಕ ಕ್ವಿಂಟಲ್ ಬರುತ್ತಿದೆ. ಆವಕ ಹೆಚ್ಚಾಗುತ್ತಿದ್ದಂತೆ ಗುಣಮಟ್ಟದ ಈರುಳ್ಳಿ ದರ 3000 ರೂ.ನಿಂದ 4,200 ರೂ. ವರೆಗೂ ಮಾರಾಟವಾಗುತ್ತಿದೆ. ಸ್ಥಳೀಯ ಈರುಳ್ಳಿ ಮಾರುಕಟ್ಟೆಗೆ ಬರುತ್ತಿದ್ದಂತೆ ಬೆಲೆ ಕಡಿಮೆಯಾಗಿ ಗ್ರಾಹಕರಿಗೆ ಅನುಕೂಲವಾಗಲಿದೆ ಎಂದು ಹೇಳಲಾಗಿದೆ.

# ಹಿಂದೂ ಬಾಲಕಿ ಅಪಹರಿಸಿ, ವೃದ್ಧನ ಜತೆ ಮದುವೆ!



**ಕರಾಚಿ:** ಪಾಕಿಸ್ಥಾನದ ಸಿಂಧ್ ಪ್ರಾಂತದಲ್ಲಿ ಹಿಂದೂ ಬಾಲಕಿಯನ್ನು ಅಪಹರಿಸಿ ಇಸ್ಲಾಂಗೆ ಮತಾಂತರಗೊಳಿಸಿ, ವೃದ್ಧನ ಜತೆಗೆ ಬಲವಂತವಾಗಿ ಮದುವೆ ಮಾಡಿಸಲಾಗಿದೆ ಎಂದು ಪಾಕಿಸ್ಥಾನದ ದರಾವರ್ ಇತ್ತೆಹಾದ್ ಸಂಸ್ಥೆಯ ಶಿವ ಫಕೀರ್ ಕಾಚಿ ಹೇಳಿದ್ದಾರೆ. ಹುಂಗುರು ಗ್ರಾಮದಿಂದ ಆಕೆಯನ್ನು ಅಪಹರಿಸಲಾಗಿತ್ತು.

ಬುಧವಾರ ಕೋರ್ಟ್ ಆದೇಶದ ಮೇರೆಗೆ ಬಾಲಕಿಯನ್ನು ಆಕೆಯ ಕುಟುಂಬಕ್ಕೆ ಹಸ್ತಾಂತರ ನಡೆಸಿದ ಸಂದರ್ಭದಲ್ಲಿಯೇ ಹೊಸ ಪ್ರಕರಣ ಬೆಳಕಿಗೆ ಬಂದಿದೆ.

# ಅಫ್ಘಾನಿಸ್ತಾನ : ಗುಂಡಿನ ದಾಳಿಯಲ್ಲಿ 15 ಮಂದಿ ಮೃತ್ಯು

**ಕಾಬೂಲ್:** ಮಧ್ಯ ಅಫ್ಘಾನಿಸ್ತಾನದಲ್ಲಿ ಗುರುತಿಸಲಾಗದ ಶಸ್ತ್ರಸಜ್ಜಿತ ವ್ಯಕ್ತಿಗಳು ನಡೆಸಿದ ಗುಂಡಿನ ದಾಳಿಯಲ್ಲಿ 15 ನಾಗರಿಕರು ಮೃತಪಟ್ಟಿದ್ದು ಇತರ 6 ಮಂದಿ ಗಾಯಗೊಂಡಿರುವುದಾಗಿ ಆಂತರಿಕ ಸಚಿವಾಲಯದ ವಕ್ತಾರರು ಹೇಳಿದ್ದಾರೆ. ಇರಾಕ್ನ ಕರ್ಬಾಲಾದಿಂದ ಹಿಂತಿರುಗುತ್ತಿದ್ದ ಯಾತ್ರಿಗಳನ್ನು ಸ್ವಾಗತಿಸಲು ಡೇಕುಂಡಿ ಪ್ರಾಂತದ ನಿಲಿ ನಗರದಲ್ಲಿ ಸೇರಿದ್ದ ಗುಂಪಿನ ಮೇಲೆ ಬಂದೂಕುಧಾರಿಗಳು ದಾಳಿ ನಡೆಸಿದ್ದಾರೆ. ಸಿಸ್ ಸಂಘಟನೆ ದಾಳಿಯ ಹೊಣೆ ವಹಿಸಿಕೊಂಡಿದೆ ಎಂದು ಅಧಿಕಾರಿಗಳನ್ನು ಉಲ್ಲೇಖಿಸಿ ಟೋಲೊ ನ್ಯೂಸ್ ವರದಿ ಮಾಡಿದೆ.



# ವಿನೇಶ್ ಫೋಗಟ್ ವಿರುದ್ಧ ಕಣಕ್ಕಿಳಿದ ಮತ್ತೊಬ್ಬ ಕುಸ್ತಿಪಟು!



**ಚಂಡೀಗಢ:** ಹರಿಯಾಣ ವಿಧಾನಸಭಾ ಚುನಾವಣೆಗೆ ಎಲ್ಲಾ ರೀತಿಯಲ್ಲಿ ಸಜ್ಜಾಗುತ್ತಿದೆ. ಈ ನಡುವೆ ಜುಲಾನಾ ಕ್ಷೇತ್ರದಲ್ಲಿ ಎರಡು ಪಕ್ಷಗಳು ಅತ್ಯಂತ ಕುತೂಹಲಕಾರಿಯಾಗಿ ಕುಸ್ತಿ ಪಟುಗಳನ್ನೇ ಅಭ್ಯರ್ಥಿಗಳನ್ನಾಗಿ ಕಣಕ್ಕಿಳಿಸಿದ್ದು, ರಾಜಕೀಯ ಕುಸ್ತಿಗೆ ತಯಾರಾಗುತ್ತಿದೆ. ಈಗಾಗಲೇ ಪ್ಯಾರಿಸ್ ಒಲಿಂಪಿಕ್ಸ್ನಿಂದ ಪದಕ ವಂಚಿತರಾಗಿ ಮರಳಿರುವ ವಿನೇಶ್ ಫೋಗಟ್ ಕಾಂಗ್ರೆಸ್ ಸೇರ್ಪಡೆಯಾಗಿ ಜುಲಾನಾ ಕ್ಷೇತ್ರದಿಂದ ಸ್ಪರ್ಧಿಸಲು ತಯಾರಾಗಿದ್ದಾರೆ. ಈ ನಡುವೆ ಆಮ್ ಆದ್ಮಿ ಪಕ್ಷ ಕೂಡಾ ಕುತೂಹಲಕಾರಿ ಎಂಬಂತೆ ಜುಲಾನಾ ಕ್ಷೇತ್ರಕ್ಕೆ ಮಹಿಳಾ ಕುಸ್ತಿಪಟುವೊಬ್ಬರನ್ನು ಕಣಕ್ಕಿಳಿಸಿದೆ. ಕಾಂಗ್ರೆಸ್ನಿಂದ ಮೈತ್ರಿ ಮುರಿದುಕೊಂಡಿರುವ ಆಪ್ ಹರಿಯಾಣ ವಿಧಾನಸಭಾ ಚುನಾವಣೆಗೆ ಪ್ರತ್ಯೇಕವಾಗಿ ಸ್ಪರ್ಧಿಸುತ್ತಿದೆ. ಕಾಂಗ್ರೆಸ್ನ ಅಭ್ಯರ್ಥಿ ವಿನೇಶ್ ಫೋಗಟ್ ಎದುರಾಳಿಯಾಗಿ 37ರ ಹರೆಯ ಡಬ್ಲ್ಯುಡಬ್ಲ್ಯುಇ ವೃತ್ತಿಪರ ಕುಸ್ತಿಪಟು ಕವಿತಾ ದಲಾಲ್ ಅವರನ್ನು ಕಣಕ್ಕಿಳಿಸಿದೆ. ಕವಿತಾ 2017 ರಿಂದ 2021ರ ವರೆಗೆ ಎನ್ ಎಕ್ಸ್ಟಿಯಲ್ಲಿ ಕವಿತಾ ದೇವಿ ಎಂಬ ರಿಂಗ್ ಹೆಸರಿನಲ್ಲಿ ಡಬ್ಲ್ಯುಡಬ್ಲ್ಯುಇ ಆಡಿದ್ದರು. ಡಬ್ಲ್ಯುಡಬ್ಲ್ಯುಇ ನಲ್ಲಿ ಕುಸ್ತಿ ಆಡಿದ ಮೊದಲ ಭಾರತೀಯ ಮಹಿಳಾ ವೃತ್ತಿಪರ ಕುಸ್ತಿಪಟು ಎಂಬ ಹೆಗ್ಗಳಿಕೆಯನ್ನೂ ಇವರು ಹೊಂದಿದ್ದಾರೆ. ಇತ್ತ ಬಿಜೆಪಿ ಜುಲಾನಾ ಕ್ಷೇತ್ರಕ್ಕೆ ಕ್ಯಾಪ್ಟನ್ ಯೋಗೇಶ್ ಬೈರಾಗಿ ಅವರನ್ನು ಅಭ್ಯರ್ಥಿಯಾಗಿ ಕಣಕ್ಕಿಳಿಸಿದೆ. 35 ವರ್ಷದ ಮಾಜಿ ಸೇನಾ ಅಧಿಕಾರಿ ಮತ್ತು ಮಾಜಿ ವಾಣಿಜ್ಯ ಪೈಲಟ್ ಬೈರಾಗಿ ಸಫಿಡಾನ್ ನಿವಾಸಿಯಾಗಿದ್ದಾರೆ.

# ವಿದೇಶ ಪ್ರವಾಸಕ್ಕೆ ತೆರಳುವ ಭಾರತೀಯರ ಸಂಖ್ಯೆ ಹೆಚ್ಚಳ



**ದೆಹಲಿ:** ಒಂದು ವರ್ಷದಲ್ಲಿ ಎರಡು ಅಥವಾ ಅದಕ್ಕಿಂತ ಹೆಚ್ಚು ವಿದೇಶ ಪ್ರವಾಸಗಳಿಗೆ ಶೇಕಡಾ 32ರಷ್ಟು ಭಾರತೀಯರು ತೆರಳುತ್ತಾರೆ ಎಂದು ಟ್ರಾವೆಲ್ ಕಂಪನಿ ಮೇಕ್ಮೈಟ್ರಿಪ್ ಹೇಳಿತ್ತು. ಇದೀಗ ಈ ಬೆಳವಣಿಗೆ ಶೇಕಡಾ 37ಕ್ಕೆ ಏರಿದೆ ಎಂದು ಜೂನ್ 2023 ಮತ್ತು ಮೇ 2024 ರ ನಡುವಿನ ಅಂಕಿ ಅಂಶ ವಿಶ್ಲೇಷಣೆಯ ವರದಿಯಲ್ಲಿ ಹೇಳಿದೆ.

ಭಾರತೀಯ ಪ್ರಯಾಣಿಕರು ಒಂದು ವರ್ಷದಲ್ಲಿ ಮೂರು ಅಥವಾ ಅದಕ್ಕಿಂತ ಹೆಚ್ಚು ಅಂತರಾಷ್ಟ್ರೀಯ ಪ್ರವಾಸಗಳನ್ನು ಕೈಗೊಳ್ಳುತ್ತಾರೆ ಎಂಬುದು ಗೊತ್ತಾಗಿದೆ.

ಬ್ಯಾಂಕಾಕ್ ಮತ್ತು ದುಬೈನಂತಹ ನಗರಗಳು ಈ ವರ್ಷ ಭಾರತೀಯರಿಗೆ ಹೆಚ್ಚು ಪ್ರಯಾಣಿಸುವ ಸಾಗರೋತ್ತರ ತಾಣಗಳಾಗಿ ಉಳಿದಿವೆ. ಬಾಕು (ಅಜೆರ್ಬೈಜಾನ್) ಮತ್ತು ಅಲ್ಮಾಟಿ (ಕಝಾಕಿಸ್ತಾನ್) ನಂತಹ ಹೊಸ ಸ್ಥಳಗಳೂ ಕೂಡ ಪಟ್ಟಿಯಲ್ಲಿ ಸೇರಿವೆ. 'ಭಾರತ ವಿದೇಶದಲ್ಲಿ ಹೇಗೆ ಪ್ರಯಾಣಿಸುತ್ತದೆ' ಎಂಬ ಶೀರ್ಷಿಕೆಯ ವರದಿಯ ಪ್ರಕಾರ ಅಲ್ಮಾಟಿ ಮತ್ತು ಬಾಕುಗೆ ಪ್ರಯಾಣ-ಸಂಬಂಧಿತ ಹುಡುಕಾಟಗಳು ಈ ವರ್ಷ ಕ್ರಮವಾಗಿ 527% ಮತ್ತು 395% ರಷ್ಟು ಹೆಚ್ಚಾಗಿದೆ. ಇತರ ಸ್ಥಳಗಳೆಂದರೆ ಹಾಂಗ್ ಕಾಂಗ್, ಕೊಲಂಬೊ ಮತ್ತು ಟೋಕಿಯೊ. ಕಳೆದ ವರ್ಷದಂತೆ ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ಥೈಲ್ಯಾಂಡ್ ಅತಿ ಹೆಚ್ಚು ಹುಡುಕಲ್ಪಟ್ಟ ಮೊದಲ ಹತ್ತು ದೇಶಗಳಲ್ಲಿ ಅಗ್ರಸ್ಥಾನದಲ್ಲೇ ಇವೆ. ಮಹಾರಾಷ್ಟ್ರ, ಕರ್ನಾಟಕ ಮತ್ತು ದೆಹಲಿಯು ಅಂತರರಾಷ್ಟ್ರೀಯ ಪ್ರಯಾಣ ಹುಡುಕಾಟಗಳ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಟಾಪ್ 10 ಉದಯೋನ್ಮುಖ ಸ್ಥಳಗಳಿಗೆ ತೆರಳುವ ಹುಡುಕಾಟ ಪರಿಮಾಣದಲ್ಲಿ 70% ಹೆಚ್ಚಳವಾಗಿದೆ.ನಮ್ಮ ಪ್ಲಾಟ್ಫಾರ್ಮ್ನಲ್ಲಿ ಉದಯೋನ್ಮುಖ ತಾಣಗಳ ಹುಡುಕಾಟಗಳ ಒಟ್ಟಾರೆ ಕೊಡುಗೆಯು 10% ರಿಂದ 14% ಕ್ಕೆ ಹೆಚ್ಚಾಗಿದೆ. ಇದು ಭಾರತೀಯರು ಹೊಸ ಜಾಗತಿಕ ತಾಣಗಳನ್ನು ಅನ್ವೇಷಿಸುತ್ತಿದ್ದಾರೆ ಎಂದು ಸೂಚಿಸುತ್ತದೆ ಎಂದು ಮೇಕ್ಮೈಟ್ರಿಪ್ ಹೇಳಿದೆ.



# 'ಮಂಕಿ ಪಾಕ್' ನಿಯಂತ್ರಣಕ್ಕೆ ವಿಶ್ವದ ಮೊದಲ ಲಸಿಕೆ ರೆಡಿ

**ಜಿನೇವಾ:** ಆಫ್ರಿಕಾ ಸೇರಿದಂತೆ ಅನೇಕ ದೇಶಗಳಲ್ಲಿ ಭಾರಿ ಆತಂಕ ಮೂಡಿಸಿರುವ ಮಂಕಿ ಪಾಕ್ಸ್ ನಿಯಂತ್ರಣಕ್ಕೆ ವಿಶ್ವಸಂಸ್ಥೆ ಮಹತ್ವದ ಹೆಜ್ಜೆ ಇಟ್ಟಿದ್ದು, ವಯಸ್ಕರಲ್ಲಿ ಸೋಂಕು ತಡೆಗೆ ವಿನ್ಯಾಸಗೊಳಿಸಲಾದ ಮೊದಲ ಎಂ ಪಾಕ್ಸ್ ಲಸಿಕೆಯ ತುರ್ತು ಬಳಕೆಗೆ ವಿಶ್ವ ಆರೋಗ್ಯ ಸಂಸ್ಥೆ ಅನುಮೋದನೆ ನೀಡಿದೆ. ಆಯ್ದ ದೇಶಗಳಲ್ಲಿ ಸೀಮಿತ ಬಳಕೆಗಾಗಿ ವಿಶ್ವ ಆರೋಗ್ಯ ಸಂಸ್ಥೆ MVA-BN ಲಸಿಕೆಯನ್ನು ಅನುಮೋದಿಸಿದೆ, ಇದನ್ನು ಬವೇರಿಯನ್ ನಾರ್ಡಿಕ್ A/S ಅಭಿವೃದ್ಧಿಪಡಿಸಿದೆ, ಇದು mpoxಗೆ ಮೊದಲ ಲಸಿಕೆಯಾಗಿದೆ. ಲಸಿಕೆಯನ್ನು WHO ನ ಪೂರ್ವ ಅರ್ಹತಾ ಪಟ್ಟಿಗೆ ಸೇರಿಸಲಾಗಿದೆ. ವಿಶೇಷವಾಗಿ ತುರ್ತು ಅಗತ್ಯವನ್ನು ಎದುರಿಸುತ್ತಿರುವ ಆಫ್ರಿಕಾದ ಸಮುದಾಯಗಳಿಗೆ. ಎರಡು-ಡೋಸ್ ಲಸಿಕೆ ಸಂಪೂರ್ಣ ಆಡಳಿತದ ನಂತರ ಟಿಂಥ ಅನ್ನು ತಡೆಗಟ್ಟುವಲ್ಲಿ 82% ಪರಿಣಾಮಕಾರಿತ್ವವನ್ನು ತೋರಿಸಿದೆ. ಘಾಊಔ ಡೈರೆಕ್ಟರ್-ಜನರಲ್ ಡಾ. ಟೆಡ್ರೊಸ್ ಅಧಾನೊಮ್ ಘೆಬ್ರೆಯೆಸಸ್ ಅವರು ನಡೆಯುತ್ತಿರುವ ಏಕಾಏಕಿ ತಡೆಗಟ್ಟಲು ಲಸಿಕೆಗೆ ಸಮಾನ ಪ್ರವೇಶದ ಪ್ರಾಮುಖ್ಯತೆಯನ್ನು ತಿಳಿಸಿದ್ದಾರೆ. WHO MVA-BNಲಸಿಕೆಯನ್ನು ತನ್ನ ಪೂರ್ವ ಅರ್ಹತಾ ಪಟ್ಟಿಯಲ್ಲಿ ಸೇರಿಸುವುದಾಗಿ ಘೋಷಿಸಿದೆ. ಇದು ಟಿಂಥ ಲಸಿಕೆಗಳಿಗೆ ಜಾಗತಿಕ ಪ್ರವೇಶವನ್ನು ಸುಧಾರಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ನಿರ್ಧಾರವು ಯುರೋಪಿಯನ್ ಮೆಡಿಸಿನ್ಸ್ ಏಜೆನ್ಸಿಯ ಪರಿಶೀಲನೆಯನ್ನು ಅನುಸರಿಸುತ್ತದೆ.



# ಕಮಲಾ ಹ್ಯಾರಿಸ್ ಜತೆ ಮತ್ತೊಂದು ಚರ್ಚೆ ಇಲ್ಲ: ಟ್ರಂಪ್

**ವಾಷಿಂಗ್ಟನ್:** ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ ಕಮಲಾ ಹ್ಯಾರಿಸ್ ಜತೆಗೆ 2ನೇ ಬಾರಿ ಅಧ್ಯಕ್ಷೀಯ ಚುನಾವಣೆ ಚರ್ಚೆಯಲ್ಲಿ ಭಾಗವಹಿಸುವುದಿಲ್ಲ ಎಂದು ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ನವೆಂಬರ್ನಲ್ಲಿ ನಡೆಯಲಿರುವ ಅಧ್ಯಕ್ಷೀಯ ಚುನಾವಣೆಗಾಗಿ ಈ ವಾರ ನಡೆದ ಚರ್ಚೆಯಲ್ಲಿ ಟ್ರಂಪ್ ಪ್ರತಿಸ್ಪರ್ಧಿ ಕಮಲಾ ಹ್ಯಾರಿಸ್ ಮುಂಚೂಣಿಯಲ್ಲಿದ್ದಾರೆಂದು ಸಮೀಕ್ಷೆಗಳು ಹೇಳಿವೆ.

ಈ ಬೆನ್ನಲ್ಲೇ ಟ್ರಂಪ್ ''3ನೇ ಬಾರಿಗೆ ಅಧ್ಯಕ್ಷೀಯ ಚರ್ಚೆ ಇಲ್ಲ' ಎಂದಿದ್ದಾರೆ. ಜೂನ್ನಲ್ಲಿ ನಡೆದ ಮೊದಲ ಚರ್ಚೆಯಲ್ಲಿ ಅಧ್ಯಕ್ಷ ಜೋ ಬೈಡೆನ್ ವಿರುದ್ಧ ಟ್ರಂಪ್ ಭಾಗಿಯಾಗಿದ್ದರು.

# ಮೋದಿ ಆಡಳಿತದಿಂದ ಬಂಗಾಳವನ್ನು ಮುಕ್ತಗೊಳಿಸಿ



**ಢಾಕಾ:** ಪ್ರಧಾನಿ ನರೇಂದ್ರ ಮೋದಿ ಅವರ ಆಳ್ವಿಕೆಯಿಂದ ಬಂಗಾಳವನ್ನು ಮುಕ್ತಗೊಳಿಸಿ ಹಾಗೂ ತನ್ನ ಸ್ವಾತಂತ್ರ್ಯವನ್ನು ಘೋಷಿಸಿ ಎಂದು ಅಲ್ ಖೈದಾ ಜೊತೆ ನಂಟು ಹೊಂದಿರುವ ಬಾಂಗ್ಲಾದೇಶದ ಭಯೋತ್ಪಾದಕ ಜಶಿಮುದ್ದೀನ್ ರಹಮಾನಿ ಸಿಎಂ ಮಮತಾ ಬ್ಯಾನರ್ಜಿಗೆ ಮನವಿ ಮಾಡಿದ್ದಾನೆ. ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಪದಚ್ಯುತಗೊಳಿಸಿದ ನಂತರ ಬಿಡುಗಡೆಯಾದ ಇಸ್ಲಾಮಿ ಸಂಘಟನೆಯ ಅನ್ಸರುಲ್ಲಾ ಬಾಂಗ್ಲಾ ಗುಂಪಿನ (ಇಃಖಿ) ಮುಖ್ಯಸ್ಥ ಜಶಿಮುದ್ದೀನ್ ರಹಮಾನಿ ವೈರಲ್ ವೀಡಿಯೊದಲ್ಲಿ ಭಾರತವನ್ನು ಒಡೆಯುವ ಮತ್ತು ರಾಜಧಾನಿ ದೆಹಲಿಯಲ್ಲಿ ಇಸ್ಲಾಮಿಸ್ಟ್ ಧ್ವಜಗಳನ್ನು ಹಾರಿಸುವ ಬಗ್ಗೆ ಎಚ್ಚರಿಕೆ ನೀಡಿದ್ದಾನೆ. ರಹಮಾನಿಯ ವೀಡಿಯೊವನ್ನು ಆಸ್ಪತ್ರೆಯ ವಾರ್ಡ್ ಒಂದರಲ್ಲಿ ಚಿತ್ರೀಕರಿಸಲಾಗಿದೆ ಎನ್ನಲಾಗಿದ್ದು, ನೈಜವಾಗಿದೆ ಎಂದು ಢಾಕಾ ಮೂಲದ ಸತ್ಯ ಪರೀಕ್ಷಕರು ಖಚಿತಪಡಿಸಿದ್ದಾರೆ. ವೀಡಿಯೊವನ್ನು ಸೆಪ್ಟೆಂಬರ್ ಮೊದಲ ವಾರದಲ್ಲಿ ಚಿತ್ರೀಕರಿಸಲಾಗಿದೆ ಎಂದು ನಂಬಲಾಗಿದೆ. ಎಬಿಟಿಯ ಮುಖ್ಯಸ್ಥ 2013 ರಲ್ಲಿ ಬ್ಲಾಗರ್ನನ್ನು ಕೊಂದಿದ್ದಕ್ಕಾಗಿ ಐದು ವರ್ಷಗಳ ಕಾಲ ಜೈಲಿನಲ್ಲಿದ್ದ. ಮಿಲಿಟರಿ ಬೆಂಬಲಿತ ಮಧ್ಯಂತರ ಸರ್ಕಾರ ಮುಹಮ್ಮದ್ ಯೂನಸ್ ಅಡಿಯಲ್ಲಿ ಅಧಿಕಾರ ವಹಿಸಿಕೊಂಡ ವಾರಗಳ ಬಳಿಕ ಆತನನ್ನು ಆಗಸ್ಟ್ನಲ್ಲಿ ಪೆರೋಲ್ನಲ್ಲಿ ಬಿಡುಗಡೆ ಮಾಡಲಾಯಿತು. ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪುಗಳೊಂದಿಗೆ ಸಂಪರ್ಕ ಹೊಂದಿರುವ ರಹಮಾನಿ, ಭಾರತದಾದ್ಯಂತ ಪ್ರತ್ಯೇಕತಾವಾದಿ ಚಳುವಳಿಗಳಿಗೆ ಬೆಂಬಲ ನೀಡುವ ಸಂದರ್ಭದಲ್ಲಿ ಬಂಗಾಳದ ಪ್ರತ್ಯೇಕತೆಗೆ ಕರೆ ನೀಡಿದ್ದ.

# ಟ್ರಂಪ್‌ಗೆ ಎಲಾನ್ ಮಸ್ಕ್ ಬೆಂಬಲ!

**ಯುಎಸ್:** ಅಮೆರಿಕದ ಅಧ್ಯಕ್ಷೀಯ ಚುನಾವಣಾ ಕಣ ದಿನದಿಂದ ದಿನಕ್ಕೆ ರಂಗೇರುತ್ತಿದೆ. ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಹಾಗೂ ರಿಪಬ್ಲಿಕನ್ ಅಭ್ಯರ್ಥಿ ಕಮಲಾ ಹ್ಯಾರಿಸ್ ನಡುವಿನ ವಾಗ್ದಾಳಿಗಳು



ತೀವ್ರಗೊಂಡಿದೆ. ಈ ನಡುವೆ ಹೈಟಿಯಿಂದ ಬಂದಿರುವ ವಲಸಿಗರು ಅಮೆರಿಕನ್ನರ ಸಾಕು ಪ್ರಾಣಿಗಳಾದ ನಾಯಿ, ಬೆಕ್ಕುಗಳನ್ನು ಹಿಡಿದು ತಿನ್ನುತ್ತಿದ್ದಾರೆ ಎಂದು ಟ್ರಂಪ್ ಗಂಭೀರ ಆರೋಪವೊಂದನ್ನು ಮಾಡಿದ್ದಾರೆ.

ಈ ಆರೋಪದ ಬೆನ್ನಲ್ಲೇ ಟ್ರಂಪ್ ಬೆಂಬಲಕ್ಕೆ ನಿಂತಿರುವ ಎಕ್ಸ್ ಮಾಲಿಕ ಎಲಾನ್ ಮಸ್ಕ್, ವಿಡಿಯೋವೊಂದನ್ನು ಹಂಚಿಕೊಂಡಿದ್ದಾರೆ. ಈ ವಿಡಿಯೋದಲ್ಲಿ ಯುವತಿಯೊಬ್ಬಳು ನಾನು ಮತ್ತು ನನ್ನ ತಂದೆ ಹೈಟಿಯಿಂದ ವಲಸೆ ಬಂದಿದ್ದೇವೆ. ನಾನು ನಾಯಿ ಅಥವಾ ಬೆಕ್ಕು ತಿನ್ನುವುದಿಲ್ಲ. ಆದರೆ ವಲಸಿಗರ ಪೈಕಿ ಬಹುತೇಕರು ಅಮೆರಿಕನ್ನರ ಸಾಕು ಪ್ರಾಣಿಗಳನ್ನು ಕೊಲ್ಲುತ್ತಿದ್ದಾರೆ ಎಂದು ಹೇಳಿದ್ದಾಳೆ.

ಇದಕ್ಕೆ ಎರಡು ಕಾರಣಗಳಿವೆ, ವಲಸಿಗ ಕಾರ್ಮಿಕರಿಗೆ ಆಹಾರದ ಕೊರತೆಯಿದೆ. ಇದು ಮೊದಲ ಕಾರಣ. ಎರಡನೆಯದಾಗಿ ಕೆಲವು ತಮ್ಮ ಮಾಂತ್ರಿಕ ಆಚರಣೆಗಳಿಗಾಗಿ ಬೆಕ್ಕನ್ನು ಬಲಿ ನೀಡುತ್ತಾರೆ ಎಂದು ಮಸ್ಕ್ ಹಂಚಿಕೊಂಡಿರುವ ವಿಡಿಯೋದಲ್ಲಿರುವ ಯುವತಿ ಹೇಳಿದ್ದಾಳೆ.

# ಮಗಳ ತಲೆ ಮೇಲೆ ಸಿಸಿ ಕ್ಯಾಮೆರಾ ಅಳವಡಿಸಿದ ತಂದೆ



**ಪಾಕಿಸ್ತಾನ:** ಪಾಕಿಸ್ತಾನದ ತಂದೆಯೊಬ್ಬರು ಮಗಳ ಚಲನವಲನದ ಮೇಲೆ ನಿಗಾ ಇಡಲು ಆಕೆಯ ತಲೆಯ ಮೇಲೆ ಸಿಸಿ ಕ್ಯಾಮೆರಾ ಅಳವಡಿಸಿದ್ದು, ಇಂತಹ ವಿಲಕ್ಷಣ ಸುರಕ್ಷತಾ ಕ್ರಮ ವೈರಲ್ ಆಗಿದೆ.

ಇಂತಹ ಅಸಾಂಪ್ರದಾಯಿಕ ಮತ್ತು ಎಂದಿಗೂ ಕೇಳಿರದ ವಿಧಾನದ ಮೂಲಕ ತನ್ನ ಮಗಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಟಥಠದ ಮುಂದಾದ ಕ್ರಮದಿಂದಾಗಿ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

ವೈರಲ್ ವೀಡಿಯೋದಲ್ಲಿ ಮಗಳ ತಲೆಯ ಮೇಲೆ ದೊಡ್ಡ ಸಿಸಿ ಕ್ಯಾಮೆರಾವನ್ನು ಅಳವಡಿಸಲಾಗಿದೆ. ತನ್ನ ಚಟುವಟಿಕೆಗಳನ್ನು ಮೇಲ್ವಿಚಾರಣೆ ಮಾಡಲು ಮತ್ತು ಚಲನವಲನಗಳ ಮೇಲೆ ನಿಗಾ ಇಡಲು ತನ್ನ ತಂದೆ ಕ್ಯಾಮೆರಾ ಅಳವಡಿಸಿದ್ದಾರೆ ಎಂದು ಸಂದರ್ಶನವೊಂದರಲ್ಲಿ ಯುವತಿ ವಿವರಿಸಿದ್ದಾಳೆ. ಈ ವಿಚಾರಕ್ಕೆ ತಮಗೇನಾದರೂ ಆಕ್ಷೇಪವಿದೆಯೇ ಎಂದು ಕೇಳಿದಾಗ, ಆಕೆ ತನಗೆ ಯಾವುದೇ ಆಕ್ಷೇಪವಿಲ್ಲ ಎಂದು ಉತ್ತರಿಸಿದ್ದಾಳೆ.

ತನ್ನ ತಂದೆಯನ್ನು ತನ್ನ ವೈಯಕ್ತಿಕ ''ಸೆಕ್ಯುರಿಟಿ ಗಾರ್ಡ್'' ಎಂದು ಕರೆದ ಆಕೆ ಸಿಸಿ ಕ್ಯಾಮೆರಾದಿಂದಾಗಿ ತನ್ನನ್ನು ಎಲ್ಲಾ ಸಮಯದಲ್ಲೂ ತಂದೆ ಮೇಲ್ವಿಚಾರಣೆ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದಳು.

ಕರಾಚಿಯಲ್ಲಿ ಮಹಿಳೆಯರು ಸುರಕ್ಷಿತವಾಗಿಲ್ಲ, ಮಹಿಳೆಯರ ಕೊಲೆಗಳು ಜರುಗುತ್ತಿದ್ದು ಈ ಕಾರಣಕ್ಕಾಗಿಯೇ ಆಕೆಯ ಪೋಷಕರು ತನ್ನನ್ನು ರಕ್ಷಿಸಲು ಈ ವಿನೂತನ ಉಪಾಯವನ್ನು ಮಾಡಿದ್ದಾರೆ ಎಂದು ಯುವತಿ ಹೇಳಿದ್ದಾಳೆ.

# ಇಸ್ರೇಲ್ ಗುಪ್ತಚರ ಮುಖ್ಯಸ್ಥ ರಾಜೀನಾಮೆ



**ಜೆರುಸಲೆಂ:** ಅಕ್ಟೋಬರ್ 7ರ ಹಮಾಸ್ ದಾಳಿಯನ್ನು ತಡೆಯುವಲ್ಲಿ ವಿಫಲವಾದ ಹಿನ್ನೆಲೆಯಲ್ಲಿ ಗಣ್ಯ ಗುಪ್ತಚರ ಘಟಕದ ಮುಖ್ಯಸ್ಥರು ರಾಜೀನಾಮೆ ನೀಡಿದ್ದಾರೆ ಎಂದು ಇಸ್ರೇಲ್ ಸೇನೆ ಹೇಳಿದೆ.

ಹಮಾಸ್ ದಾಳಿ ತಡೆಯುವಲ್ಲಿನ ವೈಫಲ್ಯದ ಹೊಣೆ ಹೊತ್ತು ರಾಜೀನಾಮೆ ನೀಡುವುದಾಗಿ 8200 ಯುನಿಟ್ನ ಕಮಾಂಡರ್ ಬ್ರಿಗೇಡಿಯರ್ ಜನರಲ್ ಯೋಸ್ಸಿ ಸಾರಿಯಲ್ ಮಾಹಿತಿ ನೀಡಿದ್ದಾರೆ.

ಶೀಘ್ರದಲ್ಲೇ ಅವರ ಸೇವೆ ಅಂತ್ಯಗೊಳ್ಳಲಿದೆ ಎಂದು ಸೇನೆಯ ಹೇಳಿಕೆ ತಿಳಿಸಿದೆ. ಸಾರಿಯಲ್ ಅವರ ರಾಜೀನಾಮೆ ಪತ್ರದ ಪ್ರತಿಯನ್ನು ಇಸ್ರೇಲ್ ಮಾಧ್ಯಮಗಳು ಗುರುವಾರ ಪ್ರಸಾರ ಮಾಡಿವೆ.

'ತನಗೆ ವಹಿಸಲಾದ ಹೊಣೆಯನ್ನು ಈಡೇರಿಸಲು ವಿಫಲವಾಗಿರುವುದಕ್ಕೆ ಕ್ಷಮೆ ಯಾಚಿಸುವುದಾಗಿ' ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಪ್ರತಿಷ್ಠಿತ ಮತ್ತು ರಹಸ್ಯ ಸೇವೆಗಳ ಘಟಕವಾಗಿರುವ ಯುನಿಟ್ 8200 ಗುಪ್ತ ಸಂಕೇತಗಳನ್ನು ಭೇದಿಸುವ ಮತ್ತು ವಿಶ್ಲೇಷಿಸುವ ಉಸ್ತುವಾರಿಯನ್ನು ಹೊಂದಿದೆ.

ಅಕ್ಟೋಬರ್ 7ರಂದು ನಡೆದ ದಾಳಿಯು ಇಸ್ರೇಲ್ ಮಿಲಿಟರಿ ಗುಪ್ತಚರ ಪ್ರಾಧಿಕಾರವು ಬಿಕ್ಕಟ್ಟಿಗೆ ಸಿಲುಕಿದ್ದು ಅದರ ಕಮಾಂಡರ್ ಮೇಜರ್ ಜನರಲ್ ಅಹರಾನ್ ಹಾಲಿವಾ 2024ರ ಎಪ್ರಿಲ್ನಲ್ಲಿ ರಾಜೀನಾಮೆ ಘೋಷಿಸಿದ್ದರು.

# ಟ್ರಂಪ್ ಜೊತೆ ಚರ್ಚೆ ವೇಳೆ ಕಮಲಾ ಹ್ಯಾರಿಸ್ ಬ್ಲೂಟೂತ್ ಸಾಧನ ಬಳಸಿದ್ರಾ?



**ವಾಷಿಂಗ್ಟನ್:** ಡೊನಾಲ್ಡ್ ಟ್ರಂಪ್ ಜೊತೆಗಿನ ಬಹಿರಂಗ ಚರ್ಚೆಯ ವೇಳೆ ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ ಕಮಲಾ ಹ್ಯಾರಿಸ್ ಬ್ಲೂಟೂತ್ ಸಾಧನ ಬಳಸಿದ್ರಾ ಹೀಗೊಂದು ಪ್ರಶ್ನೆ ಎದ್ದಿದೆ.

ಹೌದು. ಕಮಲಾ ಹ್ಯಾರಿಸ್ ಅವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಕಿವಿಯಲ್ಲಿ ಓಲೆ ಧರಿಸಿದ್ದರು. ಆದರೆ ಅದು ಓಲೆಯಲ್ಲ. ಅದು ನೋವಾ ಕಂಪನಿಯ ಬ್ಲೂಟೂತ್ ಆಡಿಯೋ ಹೆಡ್‌ಫೋನ್ ಎಂದು ಟ್ರಂಪ್ ಅಭಿಮಾನಿಗಳು ಆರೋಪ ಮಾಡುತ್ತಿದ್ದಾರೆ. ಟ್ರಂಪ್ ಅಭಿಮಾನಿಗಳ ಆರೋಪಕ್ಕೆ ಕಮಲಾ ಹ್ಯಾರಿಸ್ ಅಭಿಮಾನಿಗಳು ತಿರುಗೇಟು ನೀಡಿದ್ದಾರೆ. ಕಮಲಾ ಹ್ಯಾರಿಸ್ ಕಿವಿಯೋಲೆ ಧರಿಸಿದ್ದಾರೆ. ಯಾವುದೇ ಬ್ಲೂ ಟೂತ್ ಸಾಧನ ಧರಿಸಿಲ್ಲ ಎಂದಿದ್ದಾರೆ. ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಚರ್ಚೆ ವೇಳೆ ಈ ರೀತಿಯ ಆರೋಪ ಬರುವುದು ಹೊಸದೇನಲ್ಲ 2016 ರಲ್ಲಿ ಹಿಲರಿ ಕ್ಲಿಂಟನ್, 2020 ರಲ್ಲಿ ಜೋ ಬೈಡನ್ ಬ್ಲೂಟೂತ್ ಸಾಧನ ಬಳಸಿದ್ದಾರೆ ಎಂಬ ವಿಷಯ ಚರ್ಚೆಯಾಗಿತ್ತು.

ಅಮೆರಿಕ ಅಧ್ಯಕ್ಷೀಯ ಚುನಾವಣೆ ರಂಗೇರಿದ್ದು ಮಾಜಿ ಅಧ್ಯಕ್ಷ, ರಿಪಬ್ಲಿಕ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ಮತ್ತು ಹಾಲಿ ಉಪಾಧ್ಯಕ್ಷೆ, ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿ ಕಮಲಾ ಹ್ಯಾರಿಸ್ ಮೊದಲ ಬಾರಿಗೆ ಸೆ.10 ರಂದು ಮುಖಾಮುಖಿಯಾಗಿದ್ದರು. ಪೆನ್ಸಿಲ್ವೇನಿಯಾದಲ್ಲಿ ಎಬಿಸಿ ವಾಹಿನಿ ಆಯೋಜಿಸಿದ್ದ ಬಹಿರಂಗ ಚರ್ಚೆಯಲ್ಲಿ ಬಹಿರಂಗ ಚರ್ಚೆಯಲ್ಲಿ ಆರ್ಥಿಕತೆ, ವಲಸೆ ನೀತಿ, ಕ್ಯಾಪಿಟಲ್ ಹಿಲ್ ಗಲಭೆ ಇತ್ಯಾದಿ ವಿಚಾರಗಳ ಬಗ್ಗೆ ಇಬ್ಬರು ನಾಯಕರು ಮಾತನಾಡಿದ್ದರು.

# ಜನಸಂಖ್ಯೆ ಇಳಿಕೆ, ಆರ್ಥಿಕ ಸಂಕಷ್ಟ ಚೀನಾದಲ್ಲಿ ನಿವೃತ್ತಿ ವಯಸ್ಸು ಏರಿಕೆ



**ಬೀಜಿಂಗ್:** ಚೀನಾದಲ್ಲಿ ಜನಸಂಖ್ಯೆ ಜೊತೆ ಉದ್ಯೋಗಿಗಳ ಸಂಖ್ಯೆಯೂ ಇಳಿಕೆಯಾಗುತ್ತಿದೆ. ಈ ಸಮಸ್ಯೆ ಪರಿಹಾರಕ್ಕೆ ಚೀನಾ ಸರ್ಕಾರ ಉದ್ಯೋಗಿಗಳ ನಿವೃತ್ತಿ ವಯಸ್ಸನ್ನು ಹೆಚ್ಚಿಸಲು ನಿರ್ಧರಿಸಿದೆ.

ಪುರುಷರ ನಿವೃತ್ತಿ ವಯಸ್ಸನ್ನು 63ಕ್ಕೆ ಏರಿಸಿದರೆ ಮಹಿಳೆಯರ ನಿವೃತ್ತಿ ವಯಸ್ಸನ್ನು ಅವರ ವೃತ್ತಿಗೆ ಅನುಗುಣವಾಗಿ 55 ಮತ್ತು 58ಕ್ಕೆ ಏರಿಸಲಾಗಿದೆ. ಮುಂದಿನ ವರ್ಷದ ಜನವರಿಯಿಂದ ಹೊಸ ನೀತಿ ಜಾರಿಯಾಗಲಿದೆ.

1950 ರಿಂದ ಚೀನಾ ಉದ್ಯೋಗಿಗಳ ನಿವೃತ್ತಿ ವಯಸ್ಸನ್ನು ಹೆಚ್ಚಿಸಿರುವುದು ಇದೇ ಮೊದಲು. ಪ್ರಸ್ತುತ ನಿವೃತ್ತಿ ವಯಸ್ಸು ಪುರುಷರಿಗೆ 60 ಮತ್ತು ಮಹಿಳೆಯರಿಗೆ ವೃತ್ತಿಗೆ ಅನುಗುಣವಾಗಿ 50 (ಬ್ಲೂ ಕಾಲರ್) ಮತ್ತು 55 (ವೈಟ್ ಕಾಲರ್) ಆಗಿದೆ.

**ಈ ನಿರ್ಧಾರ ಯಾಕೆ?:** ಒಂದು ಕಡೆ ಜನಸಂಖ್ಯೆ ಇಳಿಕೆ ಆಗುತ್ತಿದೆ, ಇನ್ನೊಂದು ಕಡೆ ಹಿರಿಯ ನಾಗರಿಕರ ಸಂಖ್ಯೆ ಏರಿಕೆ ಆಗುತ್ತಿದೆ. ಹಿಂದೆ ಜಾರಿಗೆ ತಂದ ಒಂದು ಕುಟುಂಬಕ್ಕೆ ಒಂದೇ ಮಗು ನೀತಿಯಿಂದಾಗಿ ಕೆಲಸಗಾರರ ಸಂಖ್ಯೆ ಕುಸಿಯುತ್ತಿದೆ. ಈಗ ನಿವೃತ್ತಿ ವಯಸ್ಸು ಸಮೀಪಿಸುವವರ ಸಂಖ್ಯೆ ಹೆಚ್ಚಾಗಿದ್ದು ಪಿಂಚಣಿ ನಿಧಿ ನೀಡಲು ಕಷ್ಟವಾಗುತ್ತಿದೆ.

ಅನೇಕ ಚೀನೀ ಪ್ರಾಂತ್ಯಗಳು ಈಗಾಗಲೇ ದೊಡ್ಡ ಆರ್ಥಿಕ ಸಮಸ್ಯೆಯಲ್ಲಿ ಸಿಲುಕಿಕೊಂಡಿದೆ. ಈಗ ನಿವೃತ್ತಿ ವಯಸ್ಸು ಏರಿಕೆ ಮಾಡಿದ್ದರಿಂದ ಈ ಪ್ರಾಂತ್ಯಗಳಿಗೆ ಸ್ವಲ್ಪ ರಿಲೀಫ್ ಸಿಗಲಿದೆ.

2035ರ ವೇಳೆಗೆ ಚೀನಾದಲ್ಲಿ 60 ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನವರ ಸಂಖ್ಯೆ 2035 ರ ವೇಳೆಗೆ 28 ಕೋಟಿಯಿಂದ 40 ಕೋಟಿಗೆ ಏರಿಕೆಯಾಗಬಹುದು ಎಂದು ಅಂದಾಜಿಸಲಾಗಿದೆ. ಈ ಚೀನಾದ ಸಂಖ್ಯೆ ಇದು ಬ್ರಿಟನ್ ಮತ್ತು ಅಮೆರಿಕದ ಒಟ್ಟು ಜನಸಂಖ್ಯೆಗೆ ಸಮಾನವಾಗಿರುತ್ತದೆ. ಒಂದು ವೇಳೆ ಸುಧಾರಣೆ ಕೈಗೊಳ್ಳದೇ ಇದ್ದರೆ ಸರ್ಕಾರದ ಬಜೆಟ್‌ನ ಬಹುಪಾಲು ಹಣ ಪಿಂಚಣಿ ಒಂದಕ್ಕೆ ಹೋಗುವ ಕಾರಣ ಸರ್ಕಾರ ನಿವೃತ್ತಿ ವಯಸ್ಸನ್ನು ಏರಿಕೆ ಮಾಡಿದೆ.

ವಿಶ್ವದಲ್ಲಿ ಸದ್ಯ ಭಾರತದ ಜನಸಂಖ್ಯೆ 142 ಕೋಟಿಗೆ ಏರಿದ್ದರೆ ಚೀನಾ ಜನಸಂಖ್ಯೆ 141 ಕೋಟಿಗೆ ಕುಸಿದಿದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬಾಲಿ ಬ್ಯೂಟಿಗೆ ಬೆರಗಾದ 'ಪಾರು' ನಟಿ



ಕನ್ನಡ ಕಿರುತೆರೆ ಜನಪ್ರಿಯ ಸೀರಿಯಲ್ 'ಪಾರು' ನಟಿ ಮೋಕ್ಷಿತಾ ಪೈ ಬಾಲಿಗೆ ಹಾರಿದ್ದಾರೆ. ಬಾಲಿ ಪ್ರಕೃತಿ ನೋಡಿ ಮೈಮರೆತಿದ್ದಾರೆ. ವೆಕೇಷನ್‌ನ ಸುಂದರ ಫೋಟೋಗಳನ್ನು ನಟಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಮೋಕ್ಷಿತಾಗೆ ಟ್ರಾವೆಲಿಂಗ್ ಎಂದರೆ ತುಂಬಾ ಇಷ್ಟ. ಸದಾ ಹೊಸ ಜಾಗಗಳಿಗೆ ನಟಿ ಭೇಟಿ ಕೊಡುತ್ತಲೇ ಇರುತ್ತಾರೆ. ಇದೀಗ ಬಾಲಿ ಪ್ರಕೃತಿ ಸೌಂದರ್ಯಕ್ಕೆ ನಟಿ ಫಿದಾ ಆಗಿದ್ದಾರೆ. ಸಹೋದರಿ ಜೊತೆ ಇಂಡೋನೇಷ್ಯಾ ಬಾಲಿಗೆ ನಟಿ ಭೇಟಿ ನೀಡಿದ್ದು, ವಿವಿಧ ಸ್ಥಳಕ್ಕೆ ತೆರಳಿ ಖುಷಿಪಟ್ಟಿದ್ದಾರೆ. ಫೋಟೋ ಕ್ಲಿಕ್ಕಿಸಿಕೊಂಡು ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿ ಸಂಭ್ರಮಿಸಿದ್ದಾರೆ. ಅಂದಹಾಗೆ, ಇತ್ತೀಚೆಗೆ ದುಬೈ, ಮನಾಲಿ, ಊಟಿಗೂ ಭೇಟಿ ನೀಡಿದ್ದರು. ಊಟಿ ಪ್ರವಾಸಿಗರು ನೋಡಲೇಬೇಕಾದ ಪ್ರವಾಸಿಗರ ಸ್ಥಳ. ತಮಿಳುನಾಡಿನ ನೀಲಗಿರಿ ಪರ್ವತದ ತಪ್ಪಲಿನಲ್ಲಿದೆ. ಈ ಮಳೆಗಾಲದ ಸಮಯದಲ್ಲಿ ಕೊರೆವ ಚಳಿಯಲ್ಲಿ ಪಾರು ಫೋಟೋ ಕ್ಲಿಕ್ಕಿಸಿಕೊಂಡಿದ್ದರು. ಕ್ಯೂಟ್ ಆಗಿ ಕ್ಯಾಮೆರಾಗೆ ಪೋಸ್ ನೀಡಿದ್ದರು. ಈ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಸದ್ದು ಮಾಡಿತ್ತು. 'ಪಾರು' ಸೀರಿಯಲ್ ಬಳಿಕ ಮೋಕ್ಷಿತಾ ಪೈ ಸೋಷಿಯಲ್ ಮೀಡಿಯಾದಲ್ಲಿ ಸಖತ್ ಆ?ಯಕ್ಟೀವ್ ಆಗಿದ್ದಾರೆ. ತಮ್ಮದೇ ಯೂಟ್ಯೂಬ್ ಚಾನೆಲ್ ಕೂಡ ಶುರು ಮಾಡುವ ಮೂಲಕ ಸದ್ದು ಮಾಡುತ್ತಿದ್ದಾರೆ. ಸದ್ಯ ಹೊಸ ಫೋಟೋಶೂಟ್‌ಗಳ ಮೂಲಕ ಪಡ್ಡೆಹುಡುಗರ ನಿದ್ದೆಕೆಡಿಸಿರುವ ಪಾರು, ಈ ಹೊಸ ಪಾತ್ರಗಳ ಹುಡುಕಾಟದಲ್ಲಿದ್ದಾರೆ. ಅವಕಾಶಗಳಿಗೆ ಕೊರತೆಯಿಲ್ಲ. ಆದರೆ ಚಾಲೆಂಜಿಂಗ್ ಎನಿಸುವಂತಹ ಕಥೆಯಲ್ಲಿ ಕಾಣಿಸಿಕೊಳ್ಳಲು ನಟಿ ಎದುರು ನೋಡ್ತಿದ್ದಾರೆ. ಅದು ಸೀರಿಯಲ್ ಅಥವಾ ಸಿನಿಮಾನಾ? ಎಂದು ಕಾದುನೋಡಬೇಕಿದೆ.

## ನಾಗಶೇಖರ್ ಚಿತ್ರಕ್ಕೆ ಬಾಲಿವುಡ್ ನಟಿ ಅವಂತಿಕಾ ದಸ್ಸಾನಿ ನಾಯಕಿ



ಈಗಾಗಲೇ ನಾಗಶೇಖರ್ ನಿರ್ದೇಶನದ 'ಸಂಜು ವೆಡ್ಸ್ ಗೀತಾ' ಚಿತ್ರದ ಚಿತ್ರೀಕರಣ ಮುಗಿದು ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿದೆ. ಅದರ ಹಿಂದೆಯೇ ನಾಗಶೇಖರ್ ತಮ್ಮ ಮುಂದಿನ ಪ್ರಾಜೆಕ್ಟನ್ನು ಅನೌನ್ಸ್ ಮಾಡಿದ್ದಾರೆ. ಕನ್ನಡ, ತೆಲುಗು, ತಮಿಳು ಸೇರಿದಂತೆ 3 ಭಾಷೆಗಳಲ್ಲಿ, ಬಿಗ್ ಬಜೆಟ್‌ನಲ್ಲಿ ನಿರ್ಮಾಣವಾಗುತ್ತಿರುವ ಆ ಚಿತ್ರದ ಹೆಸರು 'ಕ್ಯೂ'.

ತಮ್ಮದೇ ಆದ ನಾಗಶೇಖರ್ ಮ್ಯಾಜಿಕ್ಸ್ ಅಡಿಯಲ್ಲಿ ಈ ಚಿತ್ರವನ್ನು ನಿರ್ಮಿಸಿ, ನಿರ್ದೇಶಿಸುತ್ತಿರುವ ನಾಗಶೇಖರ್ ಕಥೆ, ಚಿತ್ರಕಥೆಯ ಜೊತೆಗೆ ಸಂಗೀತದ ಜವಾಬ್ದಾರಿಯನ್ನೂ ಸಹ ತಾವೇ ಹೊತ್ತಿದ್ದಾರೆ. ರಾಮ್ ಚಿರು ಲೈನ್ ಪ್ರೊಡ್ಯೂಸರ್ ಆಗಿರುವ ಈ ಚಿತ್ರವನ್ನು ಭಾವನಾ ರವಿ ಅವರು ಪ್ರೆಸೆಂಟ್ ಮಾಡುತ್ತಿದ್ದಾರೆ.

ಈ ಚಿತ್ರದ ಮೂಲಕ ನಾಗಶೇಖರ್ ಅವರು, ಮೈನೆ ಪ್ಯಾರ್ ಕಿಯಾ ಖ್ಯಾತಿಯ ನಟಿ ಭಾಗ್ಯಶ್ರೀ ಅವರ ಪುತ್ರಿ, ಅವಂತಿಕಾ ದಸ್ಸಾನಿ ಅವರನ್ನು ನಾಯಕಿಯಾಗಿ ಕನ್ನಡ ಚಿತ್ರರಂಗಕ್ಕೆ ಪರಿಚಯಿಸುತ್ತಿದ್ದಾರೆ. ಉಪೇಂದ್ರ ಅಣ್ಣನ ಪುತ್ರ ನಿರಂಜನ್ ಚಿತ್ರದ ನಾಯಕ. ಮುಂದಿನ ತಿಂಗಳಿಂದ ಈ ಚಿತ್ರದ ಶೂಟಿಂಗ್ ಆರಂಭವಾಗಲಿದ್ದು, ಡಿ.ಜೆ. ಚಕ್ರವರ್ತಿ ಸಂಭಾಷಣೆ ರಚಿಸಿದ್ದಾರೆ.

# ನನ್ನ ಬದುಕಿನಲ್ಲಿ ಹಲವು ಹುಡುಗರು ಬಂದು ಹೋಗಿದ್ದಾರೆ



ಕನ್ನಡದ 'ಸೂರ್ಯಕಾಂತಿ' ನಟಿ ರೆಜಿನಾ ಸದ್ಯ ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. 'ಉತ್ಸವಂ' ಸಿನಿಮಾ ಪ್ರಚಾರದಲ್ಲಿ ನಟಿ ತೊಡಗಿಸಿಕೊಂಡಿದ್ದಾರೆ. ಇದರ ನಡುವೆ ಸಂದರ್ಶನದಲ್ಲಿ ನನ್ನ ಬದುಕಿನಲ್ಲಿ ಹಲವಾರು ಹುಡುಗರು ಬಂದು ಹೋಗಿದ್ದಾರೆ ಎಂದು ಹಳೆಯ ರಿಲೇಷನ್‌ಶಿಪ್ ಬಗ್ಗೆ ನಟಿ ಮಾತನಾಡಿದ್ದಾರೆ. ನನಗೆ ಈ ಡೇಟಿಂಗ್ ಎಲ್ಲ ತುಂಬಾನೇ ಮಾಮೂಲಿ. ಇಲ್ಲಿಯವರೆಗೆ ಹಲವಾರು ಜನರ ಜೊತೆ ನಾನು ಸುತ್ತಾಡಿದ್ದೇನೆ ಎಂದು ಹೇಳಿದ್ದಾರೆ. ನನ್ನ ಬದುಕಿನಲ್ಲಿ ಹಲವಾರು ಹುಡುಗರು ಬಂದು ಹೋಗಿದ್ದಾರೆ ಎಂದು ಹೇಳಿಕೆ ನೀಡಿದ್ದಾರೆ. ಇನ್ನೂ ನನ್ನಿಂದ ನನ್ನ ಹಳೆಯ ಸಂಬಂಧಗಳ ಕುರಿತ ವಿಚಾರವನ್ನೆಲ್ಲ ಮುಚ್ಚಿಡಲು ಸಾಧ್ಯವಾಗುವುದಿಲ್ಲ. ಹೀಗಾಗಿಯೇ ನಾನು ಎಲ್ಲವನ್ನೂ ನೇರವಾಗಿಯೇ ಹೇಳುವ ಅಭ್ಯಾಸ ರೂಡಿಸಿಕೊಂಡಿದ್ದೇನೆ ಎಂದು ರೆಜಿನಾ ಮುಕ್ತವಾಗಿ ಮಾತನಾಡಿದ್ದಾರೆ. ನನ್ನ ಈ ಪ್ರಾಮಾಣಿಕ ಮಾತುಗಳಿಂದ ನನ್ನ ಮಾಜಿ ಬಾಯ್‌ಫ್ರೆಂಡ್‌ಗಳ ಹೆತ್ತವರು ಕೂಡ ಅಚ್ಚರಿ ವ್ಯಕ್ತಪಡಿಸಿದ್ದು ಇದೆ ಎಂದಿದ್ದಾರೆ ರೆಜಿನಾ. ನಾನು ತುಂಬಾನೇ ಸ್ವತಂತ್ರ್ಯವಾಗಿ ಬೆಳೆದ ಹುಡುಗಿ, ನನ್ನ ಜವಾಬ್ದಾರಿಯನ್ನು ವಹಿಸಿಕೊಳ್ಳುವ ಸಮರ್ಥವಾದ ಹುಡುಗನನ್ನೂ ಹುಡುಕುತ್ತಿದ್ದೇನೆ. ಜವಾಬ್ದಾರಿಗಳನ್ನೂ ಅರಿತು ಬದುಕು ನಡೆಸುವವರ ಜೊತೆ ಇರಲು ನನಗೆ ಇಷ್ಟವೆಂದು ಹೇಳಿದ್ದಾರೆ. ಸದ್ಯಕ್ಕೆ ರಿಲೇಷನ್‌ಶಿಪ್‌ಗಳಿಂದ ವಿರಾಮ ತೆಗೆದುಕೊಂಡಿರುವುದಾಗಿ ನಟಿ ಮಾತನಾಡಿದ್ದಾರೆ. ಈ ಮೂಲಕ ಸದ್ಯಕ್ಕೆ ತಮಗೆ ಎಂಗೇಜ್ ಆಗುವ ಆಲೋಚನೆ ಇಲ್ಲ ಎಂದಿದ್ದಾರೆ. ಅಂದಹಾಗೆ, ಈ ಹಿಂದೆ ಪುರುಷರು ಮತ್ತು ಮ್ಯಾಗಿ ಎರಡು ಒಂದೇ. ಯಾಕೆಂದರೆ ಎರಡು ಕೂಡ ಎರಡೇ ನಿಮಿಷದಲ್ಲಿ ಮುಕ್ತಾಯವಾಗುತ್ತದೆ ಎಂದು ಹೇಳುವ ಮೂಲಕ ಪುರುಷರ ಲೈಂಗಿಕ ಸಾಮರ್ಥ್ಯವನ್ನು ಅಣುಕಿಸಿದ್ದವರು ರೆಜಿನಾ.

### ಲಿವಿಂಗ್‌ಸ್ಟೋನ್ ಸಿಡಿಲಬ್ಬರ

# ಆಸ್ಟ್ರೇಲಿಯಾ ವಿರುದ್ಧ ಇಂಗ್ಲೆಂಡ್‌ಗೆ ಜಯ



ಕಾರ್ಡಿಫ್‌ನ ಸೋಫಿಯಾ ಗಾರ್ಡನ್ಸ್ ಮೈದಾನದಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ 2ನೇ ಟಿ20 ಪಂದ್ಯದಲ್ಲಿ ಇಂಗ್ಲೆಂಡ್ ತಂಡವು ಜಯಭೇರಿ ಬಾರಿಸಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಇಂಗ್ಲೆಂಡ್ ತಂಡದ ನಾಯಕ ಫಿಲ್ ಸಾಲ್ಟ್ ಬೌಲಿಂಗ್ ಆಯ್ದುಕೊಂಡಿದ್ದರು. ಆದರೆ ಅತ್ತ ಮೊದಲು ಬ್ಯಾಟ್ ಮಾಡುವ ಅವಕಾಶ ಪಡೆದ ಆಸ್ಟ್ರೇಲಿಯಾ ತಂಡವು ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿತು.

ಆರಂಭಿಕರಾದ ಮ್ಯಾಥ್ಯೂ ಶಾರ್ಟ್ (28) ಹಾಗೂ ಟ್ರಾವಿಸ್ ಹೆಡ್ (31) ಮೊದಲ ವಿಕೆಟ್‌ಗೆ 52 ರನ್‌ಗಳನ್ನು ಬಾರಿಸಿದರು. ಇನ್ನು ಬಳಿಕ ಬಂದ ಯುವ ದಾಂಡಿಗ ಜೇಕ್ ಫ್ರೇಸರ್ ಮೆಕ್‌ಗುರ್ಕ್ 31 ಎಸೆತಗಳಲ್ಲಿ 2 ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ ಚೊಚ್ಚಲ ಅರ್ಧಶತಕ ಪೂರೈಸಿದರು. ಇನ್ನು ಜೋಶ್ ಇಂಗ್ಲಿಸ್ 42 ರನ್‌ಗಳ ಕೊಡುಗೆ ನೀಡುವ ಮೂಲಕ ಆಸ್ಟ್ರೇಲಿಯಾ ತಂಡದ ಮೊತ್ತವನ್ನು 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 193 ಕ್ಕೆ ತಂದು ನಿಲ್ಲಿಸಿದರು.

ಇಂಗ್ಲೆಂಡ್‌ಗೆ 194 ರನ್‌ಗಳ ಗುರಿ:

194 ರನ್‌ಗಳ ಕಠಿಣ ಗುರಿ ಪಡೆದ ಆಂಗ್ಲರ ಪಡೆಗೆ ನಾಯಕ ಫಿಲ್ ಸಾಲ್ಟ್ (39) ಉತ್ತಮ ಆರಂಭ ಒದಗಿಸಿದ್ದರು. ಆದರೆ ಮತ್ತೊಂದೆಡೆ ವಿಲ್ ಜಾಕ್ಸ್ ಕೇವಲ 12 ರನ್‌ಗಳಿಗೆ ಔಟಾದರೆ, ಆ ಬಳಿಕ ಜೋರ್ಡನ್ ಕಾಕ್ಸ್ ಶೂನ್ಯ ಸುತ್ತಿನ ಪೆವಿಲಿಯನ್‌ಗೆ ಮರಳಿದರು.

ಈ ಹಂತದಲ್ಲಿ ಜೊತೆಗೂಡಿದ ಲಿಯಾಮ್ ಲಿವಿಂಗ್‌ಸ್ಟೋನ್ ಹಾಗೂ ಜೇಕೊಬ್ ಬೆಥೆಲ್ ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿದರು. ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ ಈ ಜೋಡಿಯು ಆಸ್ಟ್ರೇಲಿಯಾ ಬೌಲರ್‌ಗಳನ್ನು ಮನಸೋ ಇಚ್ಛೆ ದಂಡಿಸಿದರು.

ಪರಿಣಾಮ ಜೇಕೊಬ್ ಬೆಥೆಲ್ ಬ್ಯಾಟ್‌ನಿಂದ ಕೇವಲ 24 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ 44 ರನ್ ಮೂಡಿಬಂತು. ಇನ್ನು ಬೆಥೆಲ್ ವಿಕೆಟ್ ಪತನದ ಬಳಿಕ ಕೂಡ ಲಿವಿಂಗ್‌ಸ್ಟೋನ್ ಅಬ್ಬರ ಮುಂದುವರೆಸಿದರು.

ಪರಿಣಾಮ ಕೊನೆಯ 12 ಎಸೆತಗಳಲ್ಲಿ ಇಂಗ್ಲೆಂಡ್ ತಂಡಕ್ಕೆ ಕೇವಲ 13 ರನ್‌ಗಳ ಅವಶ್ಯಕತೆ ಮಾತ್ರಯಿತ್ತು. 19ನೇ ಓವರ್‌ನಲ್ಲಿ ಲಿವಿಂಗ್‌ಸ್ಟೋನ್ ಒಂದು ಸಿಕ್ಸ್ ಹಾಗೂ ಒಂದು ಫೋರ್ ಬಾರಿಸಿ ವಿಕೆಟ್ ಒಪ್ಪಿಸಿದರು. ಹೀಗೆ ಪೆವಿಲಿಯನ್‌ಗೆ ಮರಳುವ ಮುನ್ನ ಲಿಯಾಮ್ ಲಿವಿಂಗ್‌ಸ್ಟೋನ್ 47 ಎಸೆತಗಳಲ್ಲಿ 5 ಭರ್ಜರಿ ಸಿಕ್ಸ್ ಹಾಗೂ 6 ಫೋರ್‌ಗಳೊಂದಿಗೆ 87 ರನ್ ಚಚ್ಚಿದ್ದರು. ಈ ಮೂಲಕ ಇಂಗ್ಲೆಂಡ್ ತಂಡವು 19 ಓವರ್‌ಗಳಲ್ಲಿ 7 ವಿಕೆಟ್ ಕಳೆದುಕೊಂಡು 194 ರನ್ ಗಳಿಸಿ 3 ವಿಕೆಟ್‌ಗಳ ಜಯ ಸಾಧಿಸಿತು.

# ಧೋನಿಯನ್ನು ತಂಡದಲ್ಲಿ ಉಳಿಸಿಕೊಳ್ಳುವ ಬಗ್ಗೆ ಮಹತ್ವದ ನಿರ್ಧಾರ ಕೈಗೊಂಡ ಸಿಎಸ್‌ಕೆ



2025 ರ ಐಪಿಎಲ್ ಆರಂಭಕ್ಕೆ ಇನ್ನಷ್ಟು ಸಾಕಷ್ಟು ದಿನಗಳಿವೆ. ಅದಕ್ಕೂ ಮುನ್ನ ಮೆಗಾ ಹರಾಜು ನಡೆಯಬೇಕಿದೆ. ಈ ಹರಾಜಿನಲ್ಲಿ ಯಾವ ಆಟಗಾರರು ಯಾವ ತಂಡವನ್ನು ಸೇರಿಕೊಳ್ಳಲಿದ್ದಾರೆ ಎಂಬುದರ ಬಗ್ಗೆ ಕುತೂಹಲ ಹೆಚ್ಚಿದೆ. ಇದೆಲ್ಲದರ ನಡುವೆ ಅಭಿಮಾನಿಗಳ ಮನಸ್ಸಿನಲ್ಲಿರುವ ದೊಡ್ಡ ಪ್ರಶ್ನೆಯೆಂದರೆ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಮಾಜಿ ನಾಯಕ ಎಂಎಸ್ ಧೋನಿ ಆ ತಂಡದಲ್ಲಿಯೇ ಉಳಿಯುತ್ತಾರಾ ಅಥವಾ ಇಲ್ಲವಾ ಎಂಬುದು.

ಇದಕ್ಕೆ ಕಾರಣವೂ ಇದ್ದು, ಪ್ರಸ್ತುತ ಐಪಿಎಲ್ ನಿಯಮದ ಪ್ರಕಾರ ಮೆಗಾ ಹರಾಜಿಗೂ ಮುನ್ನ ಎಲ್ಲಾ ತಂಡಗಳು ಕೇವಲ 4 ಆಟಗಾರರನ್ನು ಮಾತ್ರ ತಮ್ಮ ತಂಡದಲ್ಲಿ ಉಳಿಸಿಕೊಂಡು ಉಳಿದವರನ್ನು ತಂಡದಿಂದ ಬಿಡುಗಡೆ ಮಾಡಬೇಕು. ಹೀಗಾಗಿ ನಿವೃತ್ತಿಯ ಅಂಚಿನಲ್ಲಿರುವ ಧೋನಿಯನ್ನು ಸಿಎಸ್‌ಕೆ ಫ್ರಾಂಚೈಸಿ ತಂಡದಲ್ಲಿ ಉಳಿಸಿಕೊಳ್ಳುತ್ತಾ ಎಂಬುದು ಕುತೂಹಲ ಮೂಡಿಸಿದೆ.

ಕ್ರಿಕ್‌ಬಜ್ ವರದಿಯ ಪ್ರಕಾರ, ಚೆನ್ನೈ ಸೂಪರ್ ಕಿಂಗ್ಸ್ ತಂಡವು ಎಂಎಸ್ ಧೋನಿಯನ್ನು ಉಳಿಸಿಕೊಳ್ಳಬಹುದು ಎನ್ನಲಾಗಿದೆ. ವರದಿಗಳ ಪ್ರಕಾರ, ಎಂಎಸ್ ಧೋನಿ ಮುಂದಿನ ಸೀಸನ್‌ನಲ್ಲಿ ಆಡಲು ನಿರ್ಧರಿಸಿದರೆ, ಐಪಿಎಲ್ 2025 ಕ್ಕೆ ಕೇವಲ ಇಬ್ಬರು ಆಟಗಾರರನ್ನು ಉಳಿಸಿಕೊಳ್ಳುವಂತೆ ಆಡಳಿತ ಮಂಡಳಿ ನಿಯಮ ರೂಪಿಸಿದರೆ ಆಗಲೂ ಸಹ ಸಿಎಸ್‌ಕೆ ಧೋನಿಯನ್ನು ಉಳಿಸಿಕೊಳ್ಳುತ್ತದೆ. ಸಿಎಸ್‌ಕೆ ಅಧಿಕಾರಿಯೊಬ್ಬರನ್ನು ಉಲ್ಲೇಖಿಸಿ ವರದಿ ಮಾಡಲಾಗಿದ್ದು. ಮೇಲೆ ಹೇಳಿದಂತೆ ಒಂದು ವೇಳೆ ಧೋನಿ ಐಪಿಎಲ್‌ನ ಮುಂದಿನ ಸೀಸನ್‌ನಲ್ಲಿ ಆಡಿದರೆ ಖಂಡಿತವಾಗಿಯೂ ಅವರನ್ನು ತಂಡದಲ್ಲಿ ಉಳಿಸಿಕೊಳ್ಳಲಾಗುತ್ತದೆ. ಕೇವಲ ಇಬ್ಬರು ಆಟಗಾರರನ್ನು ಮಾತ್ರ ಉಳಿಸಿಕೊಳ್ಳುವ ನಿಯಮವನ್ನು ಬಿಸಿಸಿಐ ಜಾರಿಗೆ ತಂದರೂ ಧೋನಿಯನ್ನು ತಂಡದಲ್ಲಿ ಉಳಿಸಿಕೊಳ್ಳಲಾಗುತ್ತದೆ ಎಂದು ಸಿಎಸ್‌ಕೆ ಅಧಿಕಾರಿ ಹೇಳಿದ್ದಾರೆ ಎಂದು ವರದಿಯಾಗಿದೆ.

ಈ ನಡುವೆ 2025 ರ ಐಪಿಎಲ್ ಹರಾಜಿಗೂ ಮುನ್ನ ಉಳಿಸಿಕೊಳ್ಳುವ ನಿಯಮದ ಬಗ್ಗೆ ಸಂದಿಗ್ಧತೆ ಎದುರಾಗಿದೆ. ಬಿಸಿಸಿಐ ಉಳಿಸಿಕೊಳ್ಳುವ ನಿಯಮದ ಬಗ್ಗೆ ಇನ್ನೂ ಯಾವುದೇ ತೀರ್ಮಾನ ಕೈಗೊಂಡಿಲ್ಲ. ವರದಿಗಳ ಪ್ರಕಾರ, ಸೆಪ್ಟೆಂಬರ್ ಅಂತ್ಯದ ವೇಳೆಗೆ ಧಾರಣ ನಿಯಮಗಳನ್ನು ಬಿಸಿಸಿಐ ಘೋಷಿಸಬಹುದು ಎಂದು ಹೇಳಲಾಗುತ್ತಿದೆ. ಐಪಿಎಲ್ ಅಧಿಕಾರಿಗಳು ಧಾರಣ ನಿಯಮಗಳನ್ನು ಪ್ರಕಟಿಸಲು ಇನ್ನೂ ಕನಿಷ್ಠ ಪಕ್ಷ 10 ದಿನಗಳು ಅಥವಾ ಎರಡು ವಾರಗಳನ್ನು ತೆಗೆದುಕೊಳ್ಳಬಹುದು ಎಂದು ವರದಿಯಾಗಿದೆ. ಮತ್ತೊಂದೆಡೆ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತಿಯಾಗಿರುವ ಆಟಗಾರರನ್ನು ಅನ್‌ಕ್ಯಾಪ್ಡ್ ಆಟಗಾರರ ಪಟ್ಟಿಗೆ ಸೇರಿಸಬಹುದು ಎಂಬ ಸುದ್ದಿಯೂ ಹೊರಬಿದ್ದಿದೆ. ವಾಸ್ತವವಾಗಿ, ಈ ಹಿಂದೆ ಐಪಿಎಲ್‌ನಲ್ಲಿ 5 ಅಥವಾ ಅದಕ್ಕಿಂತ ಹೆಚ್ಚು ವರ್ಷಗಳ ಕಾಲ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ನಿವೃತ್ತರಾದ ಆಟಗಾರನನ್ನು ಅನ್‌ಕ್ಯಾಪ್ಡ್ ಆಟಗಾರ ಎಂದು ಪರಿಗಣಿಸಬೇಕು ಎಂಬ ನಿಯಮವಿತ್ತು. ಈ ನಿಯಮವನ್ನು 2021 ರ ನಂತರ ರದ್ದುಗೊಳಿಸಲಾಯಿತು, ಆದರೆ ಈ ನಿಯಮವನ್ನು ಮತ್ತೊಮ್ಮೆ ಪ್ರಾರಂಭಿಸಬಹುದು ಎಂದು ನಂಬಲಾಗಿದೆ.

### 3 ವರ್ಷ ವಯೋಮಿತಿ ಸಡಿಲಿಕೆಗೆ ಸರ್ಕಾರದಿಂದ ಆದೇಶ

# ಕೆಪಿಎಸ್‌ಸಿ ಪರೀಕ್ಷೆ ಮುಂದೂಡಿಕೆ

**ಬೆಂಗಳೂರು:** ಸೆ.14 ಮತ್ತು 15ರಂದು ಗ್ರೂಪ್ ಬಿ ಹುದ್ದೆಗಳಿಗಾಗಿ ನಡೆಯಬೇಕಿದ್ದ ಪರೀಕ್ಷೆಗಳನ್ನು ಕೊನೆಯ ಕ್ಷಣದಲ್ಲಿ ಮುಂದೂಡಿಕೆ ಮಾಡಿ ಕೆಪಿಎಸ್‌ಸಿ ಆದೇಶ ಹೊರಡಿಸಿದೆ.

3 ವರ್ಷ ವಯೋಮಿತಿ ಸಡಿಲಿಕೆಗೆ ಸರ್ಕಾರದಿಂದ ಆದೇಶ ಬಂದ ಹಿನ್ನೆಲೆಯಲ್ಲಿ ಪರೀಕ್ಷೆ ಮುಂದೂಡಲಾಗಿದೆ. ವಯೋಮಿತಿ ಸಡಿಲಿಕೆ ಮಾಡಿದ ಬಳಿಕ ಕೆಪಿಎಸ್‌ಸಿ ಹೊಸ ಅಧಿಸೂಚನೆಯನ್ನು ಹೊರಡಿಸಲಿದೆ.

ಹೊಸದಾಗಿ ಅರ್ಜಿ ಸಲ್ಲಿಕೆಗೆ ಅವಕಾಶ ನೀಡಬೇಕಾಗಿರುವ ಕಾರಣದಿಂದ ನಾಳೆ, ನಾಡಿದ್ದು ನಡೆಯಬೇಕಿದ್ದ ಪರೀಕ್ಷೆಗಳನ್ನು ಮುಂದೂಡಲಾಗಿದೆ.

ಪ್ರಕಟಣೆಯಲ್ಲಿ ಏನಿದೆ?: ಸೆ.14 ಮತ್ತು 15ರಂದು ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ನಿರ್ಧರಿಸಿ ಅಭ್ಯರ್ಥಿಗಳನ್ನು ಪರೀಕ್ಷಾ ಉಪಕೇಂದ್ರಗಳಿಗೆ ಹಂಚಿಕೆ ಮಾಡಲಾಗಿತ್ತು. ಸೆ.10ರ ಕರ್ನಾಟಕ ಸರ್ಕಾರದ ನಡವಳಿಗಳಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ಇಲಾಖೆಗಳ ಗ್ರೂಪ್ ಬಿ ಮತ್ತು ಸಿ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಈಗಾಗಲೇ ಹೊರಡಿಸಲಾಗಿರುವ ಅಧಿಸೂಚನೆಗಳಿಗೆ ಹಾಗೂ ಮುಂದಿನ ಒಂದು ವರ್ಷದಲ್ಲಿ ಹೊರಡಿಸಲಿರುವ ಅಧಿಸೂಚನೆಗಳಿಗೆ ಸಂಬಂಧಿಸಿದಂತೆ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಟ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆಯನ್ನು ನೀಡಿ ಆದೇಶಿಸಿದೆ ಎಂದು ತಿಳಿಸಲಾಗಿರುತ್ತದೆ.



ಮೇಲ್ಕಂಡ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ಸೆ.13 2024ರನ್ವಯ ಅಧಿಸೂಚಿಸಿರುವ ಎಲ್ಲಾ ಹುದ್ದೆಗಳಿಗೂ ವಯೋಮಿತಿ ಸಡಿಲಿಕೆ ಅನ್ವಯಿಸಿ ಹೊಸದಾಗಿ ಅರ್ಜಿ ಸಲ್ಲಿಸಲು ಅವಕಾಶ ನೀಡಬೇಕಾಗಿರುತ್ತದೆ. ಆದ್ದರಿಂದ ಸೆ.14 ಕನ್ನಡ ಭಾಷಾ ಪರೀಕ್ಷೆ ಮತ್ತು 15ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಮುಂದೂಡಲಾಗಿದೆ. ಸದರಿ ಅಧಿಸೂಚನೆಯಲ್ಲಿನ ಹುದ್ದೆಗಳಿಗೆ ಇತರೆ ದಿನಾಂಕಗಳಲ್ಲಿ ನಿಗದಿಪಡಿಸಲಾಗಿದ್ದ ನಿರ್ದಿಷ್ಟ ಪತ್ರಿಕೆಗಳ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸಹ ಮುಂದೂಡಲಾಗಿದೆ.

ಸರ್ಕಾರದ ಆದೇಶದಂತೆ ವಯೋಮಿತಿ ಸಡಿಲಿಕೆ ನೀಡಿ, ಅಭ್ಯರ್ಥಿಗಳಿಗೆ ಹೊಸದಾಗಿ ಅರ್ಜಿ ಸಲ್ಲಿಸಲು ಕಾಲಾವಕಾಶ ಮುಕ್ತಾಯವಾದ ನಂತರ ಪರಿಷ್ಕೃತ ಪರೀಕ್ಷಾ ದಿನಾಂಕಗಳನ್ನು ತಿಳಿಸಲಾಗುವುದು ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಟ್ರಕ್, ಸಾರಿಗೆ ಬಸ್ ಡಿಕ್ಕಿ 8 ಜನರು ದುರ್ಮರಣ



**ಕೋಲಾರ:** ಭೀಕರ ರಸ್ತೆ ಅಪಘಾತದಲ್ಲಿ 8 ಮಂದಿ ದಾರುಣವಾಗಿ ಸಾವನ್ನಪ್ಪಿದ್ದು, 30ಕ್ಕೂ ಹೆಚ್ಚು ಮಂದಿ ಪ್ರಯಾಣಿಕರು ಗಾಯಗೊಂಡಿರುವ ಘಟನೆ ಕೋಲಾರ ಜಿಲ್ಲೆಯ ಗಡಿ ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯಲ್ಲಿ ನಡೆದಿದೆ.

ಕಂಟೈನರ್ ಹೊಂದಿದ್ದ ಟ್ರಕ್ ಮತ್ತು ಆಂಧ್ರ ಸಾರಿಗೆ ಬಸ್ ಡಿಕ್ಕಿಯಾಗಿ ಬಸ್ ನಜ್ಜುಗುಜ್ಜಾಗಿದೆ. ಪರಿಣಾಮ ಬಸ್ಸಿನಲ್ಲಿದ್ದ 8 ಮಂದಿ ಸಾವನ್ನಪ್ಪಿದ್ದಾರೆ. ಇನ್ನೂ ಗಾಯಾಳುಗಳನ್ನು ಚಿತ್ತೂರು ಆಸ್ಪತ್ರೆಗೆ ದಾಖಲಿಸಲಾಗಿದೆ.

ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ಪಲಮನೇರು ಬಳಿ ಈ ಅಪಘಾತ ಸಂಭವಿಸಿದ್ದು, ಬೆಂಗಳೂರು ಹಾಗೂ ಚಿತ್ತೂರು ರಾಷ್ಟೀಯ ಹೆದ್ದಾರಿಯ ಮೋಗಲಿ ಘಾಟ್‌ನಲ್ಲಿ ಅಪಘಾತ ಸಂಭವಿಸಿದೆ. ಸ್ಥಳಕ್ಕೆ ಆಂಧ್ರ ಪೊಲೀಸರು ಭೇಟಿ ನೀಡಿದ್ದಾರೆ. ಸ್ಥಳೀಯರು ಮತ್ತು ಪೊಲೀಸರು ರಕ್ಷಣಾಕಾರ್ಯವನ್ನು ಕೈಗೊಂಡಿದ್ದಾರೆ. ಸಾವಿನ ಸಂಖ್ಯೆ ಇನ್ನೂ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ರೈತರಿಗೆ ಅನುಕೂಲ ಮಾಡದೇ ಮಣ್ಣಿನ ಮಕ್ಕಳು ಅಂತಾರೆ

**ರಾಮನಗರ:** ರೈತರಿಗೆ ಏನೂ ಅನುಕೂಲ ಮಾಡದೇ ಮಣ್ಣಿನ ಮಕ್ಕಳು ಅಂತಾರೆ ಎಂದು ಸಿಎಂ ಸಿದ್ದರಾಮಯ್ಯ ಕೇಂದ್ರ ಸಚಿವ ಹೆಚ್ಡಿಕೆ ವಿರುದ್ಧ ವಾಗ್ದಾಳಿ ನಡೆಸಿದರು.

ಮಾಗಡಿ ಪಟ್ಟಣದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಹಾಲಿನ ಬೆಲೆ ಏರಿಕೆ ಸಂಬಂಧಪಟ್ಟಂತೆ ಬಿಜೆಪಿ-ಜೆಡಿಎಸ್ ಆರೋಪಿಸಿರುವ ಕುರಿತು ಮಾತನಾಡಿದರು. ಹಾಲಿಗೆ 5 ರೂ.ಗಳ ಪ್ರೋತ್ಸಾಹಧನ ಘೋಷಿಸಿದ್ದು ನಮ್ಮ ಸರ್ಕಾರ. ಕ್ಷೀರಭಾಗ್ಯ ಯೋಜನೆಯನ್ನು ಜಾರಿಗೆ ತಂದು ರೈತರಿಗೆ ಅನುಕೂಲ ಮಾಡಿಕೊಡಲಾಗಿದೆ. ರೈತರಿಗೆ ಹಣ ಸೇರಬೇಡವೇ? ರೈತರಿಗೆ ಇದನ್ನು ಪ್ರಶ್ನಿಸಲು ಸಾಧ್ಯವಿಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಕೆಲವರು ಏನೂ ಮಾಡದೇ ರೈತರ ಮಕ್ಕಳು, ಮಣ್ಣಿನ ಮಕ್ಕಳು ಎನ್ನುತ್ತಾರೆ. ದೇಶದ ಸ್ವಾತಂತ್ರ್ಯಕ್ಕೆ ದುಡಿದ ನೆಹರೂರವರು ಹಾಗೂ ಇಂದಿರಾಗಾಂಧಿ ಸೇರಿದಂತೆ ಹಲವು ನಾಯಕರು ದೇಶಕ್ಕಾಗಿ ದುಡಿದಿದ್ದಾರೆ. ನರೇಂದ್ರ ಮೋದಿ ಸುಳ್ಳು ಹೇಳುತ್ತಾರೆ ಎಂದು ಈ ಬಾರಿ ಮೋದಿಯವರಿಗೆ ವೋಟು ನೀಡಲಾಗಿದೆಯೇ? ಭಾರತದ ಮೇಲಿನ ಸಾಲ 182 ಲಕ್ಷ ಕೋಟಿಯನ್ನು ಮೀರುತ್ತಿದೆ ಎಂದು ಟೀಕಿಸಿದ್ದಾರೆ. ಹಿಂದೆ ಸಾಲದ ಮೊತ್ತ 53.11 ಲಕ್ಷ ಕೋಟಿ ರೂ.ಯಿದ್ದದ್ದು ಈಗ ಕಳೆದ 10 ವರ್ಷದಲ್ಲಿ 182 ಲಕ್ಷ ಕೋಟಿ ರೂ.ಗೆ ತಲುಪಿದೆ. ಗರೀಬಿ ಹಟಾವೋ, ಆಹಾರ ಸ್ವಾವಲಂಬನೆಯಂತ ಜನಪರ ಕಾರ್ಯಕ್ರಮಗಳನ್ನು ಕಾಂಗ್ರೆಸ್ ಪಕ್ಷ ದೇಶಕ್ಕೆ ಕೊಟ್ಟಿದೆ. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದವರ ಅನುದಾನವನ್ನು ಬೇರೆಯವರಿಗೆ ನೀಡಲಾಗಿದೆ ಎಂದು ಸುಳ್ಳು ಅರೋಪ ಮಾಡಲಾಗುತ್ತಿದೆ. ಆದರೆ 89.62 ಕೋಟಿ ರೂ. ಮೊತ್ತದ ಅವ್ಯವಹಾರವಾಗಿದ್ದು, ಅದರಲ್ಲಿ 56 ಕೋಟಿ ರೂ. ವಸೂಲು ಮಾಡಲಾಗಿದೆ. ಆದರೂ ಅಭಿವೃದ್ಧಿ ನಿಗಮಕ್ಕೆ ಈ ಮುಂಚೆ ನಿಗದಿಪಡಿಸಿರುವಂತೆ ಅನುದಾನವನ್ನು ನೀಡಿ, ಸಮುದಾಯದ ಅಭಿವೃದ್ಧಿಗೆ ಬಳಸಲಾಗುವುದು. ಎಸ್‌ಸಿ ಎಸ್‌ಪಿ/ಟಿಎಸ್‌ಪಿ ಕಾನೂನನ್ನು ಜಾರಿಗೆ ತಂದಿದ್ದು ಕಾಂಗ್ರೆಸ್ ಸರ್ಕಾರ. ಈ ರೀತಿಯ ಜನಪರ ಕಾನೂನು ಬಿಜೆಪಿ ಆಡಳಿತದಲ್ಲಿರುವ ಯಾವುದೇ ರಾಜ್ಯದಲ್ಲಿ ಜಾರಿಯಾಗಿಲ್ಲ. ಬಿಜೆಪಿಯವರಿಗೆ ಕಾಂಗ್ರೆಸ್ ಸರ್ಕಾರವನ್ನು ಮೂದಲಿಸಲು ಯಾವ ನೈತಿಕತೆ ಇದೆ ಎಂದು ಪ್ರಶ್ನಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com